22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 210 | ನವದೆಹಲಿ | ಬೆಲೆ ₹ 10 | ಜನವರಿ 30, 2025 ಗುರುವಾರ

## ಒಳಪುಟಗಳಲ್ಲಿ

ಮೌನಿ ಅಮಾವಾಸ್ಯೆಯಂದು 5 ಕೋಟಿಗೂ ಹೆಚ್ಚು ಯಾತ್ರಿಕರ ಪವಿತ್ರಸ್ನಾನ - ಪು.4

ಮಗುವಿಗೆ ದಡಾರ ರೂಬೆಲ್ಲಾ ಲಸಿಕೆ ತಪ್ಪದೇ ಹಾಕಿಸಿ-ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ. ಹನುಮಂತಪ್ಪ - ಪು.6

# ಮೌನಿ ಅಮಾವಾಸ್ಯೆ ಹಿನ್ನೆಲೆ - ಹುಕ್ಕಿ ಬಂದ ಜನಸಾಗರ

## ಕುಂಭಮೇಳದಲ್ಲಿ ಭೀಕರ ಕಾಲ್ತುಳಿತ– ನಾಲ್ವರು ಕನ್ನಡಿಗರು ಸೇರಿ 30 ಭಕ್ತರ ಸಾವು | 60 ಮಂದಿಗೆ ಗಾಯ

**ಪ್ರಯಾಗರಾಜ್, ಜ.29:** ಪ್ರಯಾಗ್‌ರಾಜ್‌ನ ಮಹಾಕುಂಭ ಮೇಳದಲ್ಲಿ ಬುಧವಾರ ಬೆಳಗಿನ ಜಾವ ಸಂಭವಿಸಿದ ಕಾಲ್ತುಳಿತದಲ್ಲಿ ನಾಲ್ವರು ಕನ್ನಡಿಗರು ಸೇರಿ 30 ಜನರು ಸಾವನ್ನಪ್ಪಿದ್ದಾರೆ. ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಕುಂಭಮೇಳದಲ್ಲಿ ಸಂಭವಿಸಿದ ಕಾಲ್ತುಳಿತ ಪ್ರಕರಣದಲ್ಲಿ ಬೆಳಗಾವಿ ಜಿಲ್ಲೆಯ ತಾಯಿ–ಮಗಳು ಸೇರಿದಂತೆ ನಾಲ್ವರು ದುರ್ಮರಣಕ್ಕೀಡಾಗಿದ್ದಾರೆ.




ಮೃತರನ್ನು ವಡಗಾವಿ ನಿವಾಸಿ ಜ್ಯೋತಿ ಹತ್ತರವಾಠ್, ಮೇಘಾ ಹತ್ತರವಾಠ್, ಅರುಣ್ ಕೋಪರ್ಡೆ ಹಾಗೂ ಮಹಾದೇವಿ ಎಂದು ಗುರುತಿಸಲಾಗಿದೆ. ಕುಂಭಮೇಳದಲ್ಲಿ ಕಾಲ್ತುಳಿತದ ಬಳಿಕ ನಾಲ್ವರನ್ನು ಪ್ರಯಾಗ್‌ರಾಜ್‌ನ ಖಾಸಗಿ ಆಸ್ಪತ್ರೆಗೆ ದಾಖಲು ಮಾಡಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ. ಮೂರು ದಿನಗಳ ಹಿಂದೆ ಸಾಯಿರಥ ಟ್ರಾವೆಲ್ ಏಜೆನ್ಸಿ ಮೂಲಕ 13 ಜನರ ತಂಡದಲ್ಲಿ ಅವರು ತೆರಳಿದ್ದರು ಎಂದು ತಿಳಿದು ಬಂದಿದೆ. ಬೆಳಗಾವಿಯ ನಾಲ್ವರು ಸಾವನ್ನಪ್ಪಿರುವುದು ಖಚಿತವಾಗಿದ್ದು, ಮೃತದೇಹಗಳನ್ನು ತರಲು ಕ್ರಮವಹಿಸಲಾಗಿದೆ ಎಂದು ಜಿಲ್ಲಾಧಿಕಾರಿ ಮೊಹ್ಮದ್ ರೋಷನ್ ಮಾಹಿತಿ ನೀಡಿದ್ದಾರೆ.

ಮೌನಿ ಅಮಾವಾಸ್ಯೆ ಹಿನ್ನೆಲೆ ಪ್ರಯಾಗ್ರಾಜ್ನ ತ್ರಿವೇಣಿ ಸಂಗಮದಲ್ಲಿ ಇಂದು ಕೋಟ್ಯಂತರ ಮಂದಿ ಪವಿತ್ರ ಸ್ನಾನ ಮಾಡಿದ್ದಾರೆ. ಜನವರಿ 28ರವರೆಗೆ ಒಟ್ಟಾರೆ 19.94 ಕೋಟಿ ಜನರು ಪವಿತ್ರ ಸ್ನಾನ ಮಾಡಿದ್ದಾರೆ ಎಂದು ಉತ್ತರ ಪ್ರದೇಶ ಮಾಹಿತಿ ಇಲಾಖೆ ವಿವರ ಹಂಚಿಕೊಂಡಿದೆ. ಮೌನಿ ಅಮಾವಾಸ್ಯೆ ಹಿನ್ನೆಲೆ ಒಂದೇ ದಿನ ಭಕ್ತರ ಸಂಖ್ಯೆ ಹೆಚ್ಚಾಗಿ ಕಾಲ್ತುಳಿತ ಸಂಭವಿಸಿದೆ ಎಂದು ಹೇಳಲಾಗಿದೆ. 60 ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ. ತ್ರಿವೇಣಿ ಸಂಗಮ ಘಾಟ್ನಲ್ಲಿ ಭಕ್ತರ ಸಂಖ್ಯೆ ಹೆಚ್ಚಾಗಿದ್ದರಿಂದ ಭಕ್ತರನ್ನು ಸ್ಥಳಾಂತರಿಸಲು ಡಿಐಜಿ ವೈಭವ್ ಕೃಷ್ಣ ಅಶ್ವಾರೋಹಿ ಅವರು ಪೊಲೀಸ್ ಸಿಬ್ಬಂದಿಗೆ ಆದೇಶ ನೀಡಿದ್ದಾರೆ. ಮೌನಿ ಅಮಾವಾಸ್ಯೆಯಂದು ಮಹಾಕುಂಭ ಪ್ರದೇಶದಲ್ಲಿ ಭಾರೀ ಜನಸಂದಣಿಯ ನಡುವೆ ಎಲ್ಲ ಭಕ್ತರ ಭದ್ರತೆಯನ್ನು ಖಚಿತಪಡಿಸಿಕೊಳ್ಳಲು, ಬಾಂಬ್ ಪತ್ತೆ ತಂಡ ಮತ್ತು ವಿಲೇವಾರಿ ಸ್ಕ್ವಾಡ್ ಜೊತೆಗೆ ಸ್ನಿಫರ್ ಡಾಗ್ ತಂಡಗಳು ಸ್ಥಳದಲ್ಲಿ ಪರಿಶೀಲನೆ ನಡೆಸುತ್ತಿವೆ.

ಪ್ರಯಾಗ್ರಾಜ್ನಲ್ಲಿ ಪರಿಸ್ಥಿತಿ ನಿಯಂತ್ರಣದಲ್ಲಿದೆ ಎಂದು ಉತ್ತರ ಪ್ರದೇಶ ಸಿಎಂ ಯೋಗಿ ಆದಿತ್ಯನಾಥ್ ಹೇಳಿದ್ದಾರೆ. ಪ್ರಯಾಗ್ರಾಜ್ನಲ್ಲಿ ಇಂದು ಸುಮಾರು 8ರಿಂದ 10 ಕೋಟಿ ಭಕ್ತರು ಸೇರಿದ್ದಾರೆ. ಸಂಗಮದ ಕಡೆಗೆ ಭಕ್ತರ ಚಲನೆಯಿಂದಾಗಿ ನಿರಂತರ ಒತ್ತಡವಿದೆ. ಅಖಾರ ಮಾರ್ಗದಲ್ಲಿ ಬ್ಯಾರಿಕೇಡ್ ದಾಟಲು ಪ್ರಯತ್ನಿಸಿದಾಗ ಕೆಲವು ಭಕ್ತರು ಗಂಭೀರ ಗಾಯಗೊಂಡಿದ್ದಾರೆ. ಗಾಯಾಳುಗಳನ್ನು ಸ್ಥಳಾಂತರಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ನಿನ್ನೆ ರಾತ್ರಿಯೇ ಮೌನಿ ಅಮಾವಾಸ್ಯೆ ಮಹೂರ್ತ ಆರಂಭವಾಗಿದೆ. ಪ್ರಧಾನ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಮತ್ತು ರಾಜ್ಯಪಾಲರು ಪರಿಸ್ಥಿತಿಯನ್ನು ಅವಲೋಕಿಸಿದ್ದಾರೆ. ಅವರು ನಿರಂತರವಾಗಿ ಇಲ್ಲಿನ ಪರಿಸ್ಥಿತಿಯ ವರದಿಗಳನ್ನು ತೆಗೆದು ಕೊಳ್ಳುತ್ತಿದ್ದಾರೆ. ಪ್ರಯಾಗ್‌ರಾಜ್‌ನಲ್ಲಿ ಪರಿಸ್ಥಿತಿ ನಿಯಂತ್ರಣದಲ್ಲಿದೆ. ಭಕ್ತರು ಮೊದಲು ಪವಿತ್ರ ಸ್ನಾನ ಮಾಡಬೇಕೆಂದು ಮತ್ತು ಜನಸಂದಣಿ ಕಡಿಮೆಯಾದ ನಂತರ ಅಖಾರಾಗಳ ಸಂತರು ಪವಿತ್ರ ಸ್ನಾನ ಮಾಡಿರಿ ಎಂದು ಮನವಿ ಮಾಡಿದ್ದಾರೆ. ಸಂಗಮ, ನಾಗ್ ವಾಸುಕಿ ಮಾರ್ಗ ಮತ್ತು ಸಂಗಮ ಮಾರ್ಗದಲ್ಲಿ ಹೆಚ್ಚಿನ ಜನಸಂದಣಿ ಇದೆ. ದಯವಿಟ್ಟು ಯಾವುದೇ ವದಂತಿಗಳಿಗೆ ಗಮನ ಕೊಡಬೇಡಿ ಎಂದು ನಾನು ಭಕ್ತರಿಗೆ ಮನವಿ ಮಾಡುತ್ತೇನೆ. ಇಡೀ ಮಹಾಕುಂಭ ಪ್ರದೇಶದಲ್ಲಿ ಘಾಟ್‌ಗಳನ್ನು ನಿರ್ಮಿಸಲಾಗಿದೆ. ಭಕ್ತರು ಸಂಗಮದ ಕಡೆಗೆ ಮಾತ್ರ ಚಲಿಸುವ ಅಗತ್ಯವಿಲ್ಲ. ಭಕ್ತರು ತಮ್ಮ ಹತ್ತಿರದ ಘಾಟ್‌ಗಳಲ್ಲಿ ಪವಿತ್ರ ಸ್ನಾನ ಮಾಡಿರಿ. ಗಾಯಾಳುಗಳಿಗೆ ಸೂಕ್ತ ವೈದ್ಯಕೀಯ ಚಿಕಿತ್ಸೆ ನೀಡುತ್ತಿದ್ದೇವೆ. ರೈಲ್ವೆ ಇಲಾಖೆಯು ಭಕ್ತರನ್ನು ಅವರವರ ಸ್ಥಳಗಳಿಗೆ ಕಳಿಸಿಕೊಡಲು ಪ್ರಯಾಗರಾಜ್ ಪ್ರದೇಶದ ವಿವಿಧ ನಿಲ್ದಾಣಗಳಿಂದ ವಿಶೇಷ ರೈಲುಗಳ ವ್ಯವಸ್ಥೆ ಮಾಡಿದೆ ಎಂದು ಹೇಳಿದ್ದಾರೆ.

## ದೆಹಲಿ ಚುನಾವಣೆಗೆ ಕಾಂಗ್ರೆಸ್ ಪ್ರಣಾಳಿಕೆ ಬಿಡುಗಡೆ: ಜಾತಿ ಜನಗಣತಿ ಭರವಸೆ



**ನವದೆಹಲಿ, ಜ. 29:** ದೆಹಲಿ ವಿಧಾನಸಭೆ ಚುನಾವಣೆಗೆ ಕಾಂಗ್ರೆಸ್ ಪಕ್ಷ ತನ್ನ ಪ್ರಣಾಳಿಕೆಯನ್ನು ಬುಧವಾರ ಬಿಡುಗಡೆ ಮಾಡಿದೆ. ರಾಷ್ಟ್ರ ರಾಜಧಾನಿಯಲ್ಲಿ ಅಧಿಕಾರಕ್ಕೆ ಬಂದರೆ ಜಾತಿ ಜನಗಣತಿ ನಡೆಸುವುದಾಗಿ ಮತ್ತು ಪೂರ್ವಾಂಚಲಿಗಳಿಗಾಗಿ ಪ್ರತ್ಯೇಕ ಸಚಿವಾಲಯ ಸ್ಥಾಪಿಸುವುದಾಗಿ ಭರವಸೆ ನೀಡಿದೆ.

ಮಹಿಳೆಯರಿಗೆ ಮಾಸಿಕ 2,500 ರೂಪಾಯಿ ಧನ ಸಹಾಯ, 300 ಯೂನಿಟ್‌ಗಳವರೆಗೆ ಉಚಿತ ವಿದ್ಯುತ್ ಮತ್ತು 500 ರೂಪಾಯಿಗೆ ಎಲ್‌ಪಿಜಿ ಸಿಲಿಂಡರ್‌ಗಳನ್ನು ನೀಡುವುದು, 25 ಲಕ್ಷ ರೂಪಾಯವರೆಗಿನ ಉಚಿತ ಆರೋಗ್ಯ ವಿಮೆ, ಉಚಿತ ಪಡಿತರ ಕಿಟ್‌ಗಳ ವಿತರಣೆ, ಒಂದು ವರ್ಷದ ಅವಧಿಗೆ ವಿದ್ಯಾವಂತ ನಿರುದ್ಯೋಗಿ ಯುವಕರಿಗೆ ಮಾಸಿಕ 8,500 ರೂಪಾಯಿ ಧನ ಸಹಾಯ, 5 ರೂಪಾಯಿಗೆ ಊಟ ನೀಡುವ 100 ಇಂದಿರಾ ಕ್ಯಾಂಟೀನ್‌ಗಳ ಪ್ರಾರಂಭ ಕಾಂಗ್ರೆಸ್ ಪ್ರಣಾಳಿಕೆಯ ಇತರ ಪ್ರಮುಖ ಭರವಸೆಗಳಾಗಿವೆ.

22 ಕೇಂದ್ರೀಕೃತ ಕ್ಷೇತ್ರಗಳಾಗಿ ವಿಂಗಡಿಸಲಾದ ಪ್ರಣಾಳಿಕೆಯನ್ನು ದೆಹಲಿ ಕಾಂಗ್ರೆಸ್ ಅಧ್ಯಕ್ಷ ದೇವೇಂದರ್ ಯಾದವ್ ಬಿಡುಗಡೆ ಮಾಡಿದರು. ಎಐಸಿಸಿ ಸಂವಹನ ಉಸ್ತುವಾರಿ ಜೈರಾಮ್ ರಮೇಶ್ ಈ ವೇಳೆ ಇದ್ದರು. ಪ್ರಣಾಳಿಕೆ ಬಿಡುಗಡೆ ವೇಳೆ ಮಾತನಾಡಿದ ಜೈರಾಮ್ ರಮೇಶ್, ದೆಹಲಿಯ ವಾಯು ಮಾಲಿನ್ಯದ ವಿಷಯ ಪ್ರಸ್ತಾಪಿಸಿ ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ಮತ್ತು ಎಎಪಿ ನೇತೃತ್ವದ ದೆಹಲಿ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು. ಎರಡೂ ಸರ್ಕಾರಗಳು ಈ ಬಿಕ್ಕಟ್ಟನ್ನು ನಿಭಾಯಿಸುವಲ್ಲಿ ವಿಫಲವಾಗಿವೆ ಎಂದು ಹೇಳಿದರು. ದೆಹಲಿಯಲ್ಲಿ ಫೆಬ್ರವರಿ 5 ರಂದು ಮತದಾನ ನಡೆಯಲಿದೆ. ಫೆಬ್ರವರಿ 8 ರಂದು ಫಲಿತಾಂಶ ಪ್ರಕಟವಾಗಲಿದೆ.

## ಮಹಾಕುಂಭ ಅವಘಡ: ಪ್ರಧಾನಿ ಮೋದಿ ತೀವ್ರ ಕಳವಳ



ಬುಧವಾರ ಮುಂಜಾನೆ ಮಹಾ ಕುಂಭಮೇಳದ ವೇಳೆ ಸಂಭವಿಸಿದ ಕಾಲ್ತುಳಿತದಲ್ಲಿ ತಮ್ಮ ಆಪ್ತರನ್ನು ಕಳೆದುಕೊಂಡವರಿಗೆ ಪ್ರಧಾನಿ ನರೇಂದ್ರ ಮೋದಿ ಸಂತಾಪ ಸೂಚಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪ್ಲಾಟ್‌ಫಾರ್ಮ್ ಎಕ್ಸ್‌ನಲ್ಲಿನ ಹೇಳಿಕೆಯಲ್ಲಿ, ಘಟನೆಯಲ್ಲಿ ಗಾಯಗೊಂಡವರು ಶೀಘ್ರವಾಗಿ ಚೇತರಿಸಿಕೊಳ್ಳಲು ಪ್ರಧಾನಿ ಭಗವಂತನಲ್ಲಿ ಪ್ರಾರ್ಥಿಸಿಕೊಂಡರು.

ಮಹಾ ಕುಂಭ ಉತ್ಸವದ ಅತ್ಯಂತ ಪವಿತ್ರ ಸ್ನಾನದ ದಿನವಾದ ಮೌನಿ ಅಮಾವಾಸ್ಯೆಯ ಸಂದರ್ಭದಲ್ಲಿ ಕಾಲ್ತುಳಿತ ಸಂಭವಿಸಿದ್ದು, ಸಂಗಮ ಘಾಟ್‌ನಲ್ಲಿ ನೆರೆದಿದ್ದ ಭಾರೀ ಜನಸಮೂಹದಲ್ಲಿ ಭೀತಿಯನ್ನು ಉಂಟುಮಾಡಿತು. ಸ್ಥಳೀಯ ಆಡಳಿತವು ತಕ್ಷಣವೇ ಸ್ಪಂದಿಸಿ, ಗಾಯಾಳುಗಳಿಗೆ ತಕ್ಷಣದ ನೆರವು ನೀಡಲು ಆಂಬ್ಯುಲೆನ್ಸ್ ಮತ್ತು ವೈದ್ಯಕೀಯ ತಂಡಗಳನ್ನು ರವಾನಿಸಿತು.

ಸಂತ್ರಸ್ತರಿಗೆ ಸಹಾಯ ಮಾಡಲು ಸ್ಥಳೀಯ ಆಡಳಿತವು ಎಲ್ಲ ಪ್ರಯತ್ನಗಳನ್ನು ಮಾಡುತ್ತಿದೆ ಎಂದು ಪ್ರಧಾನಿ ಮೋದಿ ಸಾರ್ವಜನಿಕರಿಗೆ ಭರವಸೆ ನೀಡಿದರು. "ಸ್ಥಳೀಯ ಆಡಳಿತವು ಸಂತ್ರಸ್ತರಿಗೆ ಸಾಧ್ಯವಿರುವ ಎಲ್ಲ ರೀತಿಯಲ್ಲಿ ಸಹಾಯ ಮಾಡಲು ತೊಡಗಿದೆ. ಈ ನಿಟ್ಟಿನಲ್ಲಿ ನಾನು ಮುಖ್ಯಮಂತ್ರಿ ಯೋಗಿ ಜಿ ಅವರೊಂದಿಗೆ ಮಾತನಾಡಿದ್ದೇನೆ ಮತ್ತು ನಾನು ರಾಜ್ಯ ಸರ್ಕಾರದೊಂದಿಗೆ ನಿರಂತರವಾಗಿ ಸಂಪರ್ಕದಲ್ಲಿದ್ದೇನೆ" ಎಂದು ಅವರು ತಮ್ಮ ಪೋಸ್ಟ್‌ನಲ್ಲಿ ಸೇರಿಸಿದ್ದಾರೆ.

## ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ ಸಂತಾಪ



ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಮಹಾಕುಂಭಮೇಳದಲ್ಲಿ ಕಾಲ್ತುಳಿತ ದುರಂತ ಸಂಭವಿಸಿರುವ ಕುರಿತಂತೆ ಸಿಎಂ ಸಿದ್ದರಾಮಯ್ಯ ಕಳವಳ ವ್ಯಕ್ತಪಡಿಸಿದ್ದಾರೆ. ಈ ಕುರಿತು ಟ್ವೀಟ್ ಮಾಡಿರುವ ಸಿಎಂ ಸಿದ್ದರಾಮಯ್ಯ, ಪ್ರಯಾಗ್‌ರಾಜ್‌ನ ಮಹಾಕುಂಭಮೇಳದಲ್ಲಿ ಬುಧವಾರ ಮುಂಜಾನೆ ಸಂಭವಿಸಿದ ಕಾಲ್ತುಳಿತದಲ್ಲಿ ಹಲವರು ಸಾವೀಗೀಡಾದ ಸುದ್ದಿ ತಿಳಿದು ದುಃಖವಾಯಿತು. ಮೃತರ ಆತ್ಮಗಳಿಗೆ ಶಾಂತಿ ಸಿಗಲೆಂದು ಪ್ರಾರ್ಥಿಸುತ್ತೇನೆ. ಘಟನೆಯಲ್ಲಿ ಗಾಯಗೊಂಡು ಚಿಕಿತ್ಸೆ ಪಡೆಯುತ್ತಿರುವವರು ಶೀಘ್ರ ಗುಣಮುಖರಾಗಲಿ ಎಂದು ಹಾರೈಸುತ್ತೇನೆ.

ಕಾಲ್ತುಳಿತದಲ್ಲಿ ರಾಜ್ಯದ ಕೆಲವರು ಗಾಯಗೊಂಡಿರುವ ಮಾಹಿತಿಯಿದೆ. ಅವರೆಲ್ಲರನ್ನು ಕ್ಷೇಮವಾಗಿ ರಾಜ್ಯಕ್ಕೆ ಕರೆತರಲು ಅಧಿಕಾರಿಗಳನ್ನು ನಿಯೋಜಿಸಿದ್ದು, ನಮ್ಮವರ ರಕ್ಷಣೆಗೆ ಸರ್ಕಾರ ಎಲ್ಲ ರೀತಿಯ ಪ್ರಯತ್ನವನ್ನು ನಡೆಸುತ್ತಿದೆ. ಕುಂಭಮೇಳದಲ್ಲಿ ಪಾಲ್ಗೊಂಡಿರುವ ಕನ್ನಡಿಗರು ಸ್ವಲ್ಪ ಜಾಗರೂಕತೆಯಿಂದಿರಿ ಎಂದು ಹೇಳಿದ್ದಾರೆ.

ಆದರೆ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ. ಬೆಳಗಾವಿಯ ನಾಲ್ವರು ಸಾವನ್ನಪ್ಪಿರುವುದು ಖಚಿತವಾಗಿದ್ದು, ಮೃತದೇಹಗಳನ್ನು ತರಲು ಕ್ರಮವಹಿಸಲಾಗಿದೆ ಎಂದು ಜಿಲ್ಲಾಧಿಕಾರಿ ಮೊಹ್ಮದ್ ರೋಷನ್ ಮಾಹಿತಿ ನೀಡಿದ್ದಾರೆ.

## ಕಾಲ್ತುಳಿತ ಘಟನೆ: ನ್ಯಾಯಾಂಗ ತನಿಖೆಗೆ ಯೋಗಿ ಆದಿತ್ಯನಾಥ ಆದೇಶ



ಪ್ರಯಾಗ್‌ರಾಜ್‌ನಲ್ಲಿ ಬುಧವಾರ ಬೆಳಗಿನ ಜಾವ ಸಂಭವಿಸಿದ ಭೀಕರ ಕಾಲ್ತುಳಿತದ ಘಟನೆ ಕುರಿತು ಉತ್ತರಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ ನ್ಯಾಯಾಂಗ ತನಿಖೆಗೆ ಆದೇಶಿಸಿದ್ದಾರೆ.

ಮೂವರು ಸದಸ್ಯರ ಸಮಿತಿ ತನಿಖೆ ನಡೆಸಿ ಸರ್ಕಾರಕ್ಕೆ ವರದಿ ಸಲ್ಲಿಸಲಿದೆ.

ಸಂತ್ರಸ್ತ ಕುಟುಂಬಗಳಿಗೆ 25 ಲಕ್ಷ ಪರಿಹಾರ

ಕಾಲ್ತುಳಿತದಲ್ಲಿ ದುರ್ಮರಣಕ್ಕೆ ಗುರಿಯಾದ 30 ಭಕ್ತರಿಗೆ ಸಂತಾಪ ಸೂಚಿಸಿರುವ ಸಿಎಂ ಯೋಗಿ, ಬಲಿಯಾದವರ ಕುಟುಂಬಗಳಿಗೆ ತಲಾ 25ಲಕ್ಷ ರೂ. ಪರಿಹಾರ ಪ್ರಕಟಿಸಿದ್ದಾರೆ. ಈ ಘಟನೆಯಲ್ಲಿ ತಪ್ಪಿತಸ್ಥರ ವಿರುದ್ಧ ತಮ್ಮ ಸರ್ಕಾರ ಕಠಿಣ ಕ್ರಮ ಕೈಗೊಳ್ಳಲಿದೆ ಎಂದಿರುವ ಅವರು, ಕುಂಭಮೇಳದಲ್ಲಿ ಶಾಂತಿ–ಸಂಯಮ ಕಾಯ್ದುಕೊಂಡು ಗಂಗಾ ಸ್ನಾನ ಮಾಡಬೇಕೆಂದು ಭಕ್ತರಿಗೆ ವಿನಂತಿಸಿದ್ದಾರೆ.

## ದೆಹಲಿ ಮುಖ್ಯಮಂತ್ರಿ ಅತಿಶಿ ಸಂತಾಪ:



ಮಹಾಕುಂಭದಲ್ಲಿ ಕಾಲ್ತುಳಿತವು ಅತ್ಯಂತ ದುರಂತ ಘಟನೆಯಾಗಿದೆ. ಅಗಲಿದ ಆತ್ಮಗಳಿಗೆ ಶಾಂತಿ ನೀಡಲಿ ಮತ್ತು ಅವರ ಕುಟುಂಬಗಳಿಗೆ ಈ ನಷ್ಟವನ್ನು ಭರಿಸುವ ಶಕ್ತಿಯನ್ನು ನೀಡಲಿ ಎಂದು ನಾನು ದೇವರಲ್ಲಿ ಪ್ರಾರ್ಥಿಸುತ್ತೇನೆ. ಎಲ್ಲಾ ಭಕ್ತರು ಶಿಸ್ತನ್ನು ಕಾಯ್ದುಕೊಳ್ಳಬೇಕು ಮತ್ತು ಕಾರ್ಯಕ್ರಮ ಸುರಕ್ಷಿತವಾಗಿರುವುದನ್ನು ಖಚಿತಪಡಿಸಿಕೊಳ್ಳಲು ಸುರಕ್ಷತಾ ಮಾರ್ಗಸೂಚಿಗಳನ್ನು ಅನುಸರಿಸಬೇಕು.




ನವದೆಹಲಿಯ ಕರ್ನಾಟಕ ಸರ್ಕಾರದ ವಿಶೇಷ ಪ್ರತಿನಿಧಿ ಟಿ.ಬಿ. ಜಯಚಂದ್ರ ಅವರು ಕೌಟಿಲ್ಯ ಮಾರ್ಗದಲ್ಲಿರುವ ಹೊಸ ಕರ್ನಾಟಕ ಭವನಕ್ಕೆ ಭೇಟಿನೀಡಿ ಪೀಠೋಪಕರಣ ಮತ್ತು ಅಂತಿಮ ಪೂರ್ಣಗೊಳಿಸುವ ಕಾರ್ಯಗಳನ್ನು ಪರಿಶೀಲಿಸಿದರು.

### ರಾಜಕೀಯವಾಗಿ ಮೈಲೇಜ್ ಬೇಕಾದರೆ ಚುನಾವಣಾ ಅಖಾಡಕ್ಕೆ ಹೋಗಿ

## ಡಿಕೆಶಿ ವಿರುದ್ಧ ಅರ್ಜಿ ಸಲ್ಲಿಸಿದ್ದ ಯತ್ನಾಳ್‌ಗೆ ಸುಪ್ರೀಂ ತರಾಟೆ



**ನವದೆಹಲಿ, ಜ,29:** ರಾಜಕೀಯವಾಗಿ ಮೈಲೇಜ್ ಬೇಕಾದರೆ ಚುನಾವಣಾ ಅಖಾಡಕ್ಕೆ ಹೋಗಿ ನೀವು ಸುಪ್ರೀಂಕೋರ್ಟ್‌ಗೆ ಯಾಕೆ ಬಂದಿದ್ದೀರಿ ಎಂದು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್‌ಗೆ ಸುಪ್ರೀಂಕೋರ್ಟ್ ಛೀಮಾರಿ ಹಾಕಿದೆ. ಅಕ್ರಮ ಆಸ್ತಿಗಳಿಕೆ ಪ್ರಕರಣದಲ್ಲಿ ಸಿಬಿಐ ತನಿಖೆ ವಾಪಸ್ ಪಡೆದ ಸರ್ಕಾರ ನಿರ್ಧಾರ ಪ್ರಶ್ನಿಸಿ ಸುಪ್ರೀಂಕೋರ್ಟ್ ಗೆ ಯತ್ನಾಳ್ ಸಲ್ಲಿಸಿದ್ದ ಮೇಲ್ಮನವಿ ವಿಚಾರಣೆ ವೇಳೆ ಮುಖ್ಯ ನ್ಯಾ. ಸಂಜೀವ್ ಖನ್ನಾ ತರಾಟೆ ತೆಗೆದುಕೊಂಡರು.


ಈ ಟೀಕೆಗೆ ಪ್ರತಿಕ್ರಿಯಿಸಿದ ಯತ್ನಾಳ್ ಪರ ಹಿರಿಯ ವಕೀಲ ಕೆ ಪರಮೇಶ್ವರ್, ಇದು ರಾಜಕೀಯ ದ್ವೇಷದ ಪ್ರಕರಣವಲ್ಲ. ಬದಲಿಗೆ, ಕಾಂಗ್ರೆಸ್ ಪಕ್ಷವು ಕರ್ನಾಟಕದಲ್ಲಿ ಅಧಿಕಾರಕ್ಕೆ ಬಂದ ನಂತರ, ಈಗಿನ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ವಿರುದ್ಧ ತನಿಖೆ ನಡೆಸಲು ಹಿಂದಿನ ಸರ್ಕಾರವು ಸಿಬಿಐಗೆ ನೀಡಿದ್ದ ಒಪ್ಪಿಗೆಯನ್ನು ಹಿಂಪಡೆದಿರುವಲ್ಲಿ ಗಣನೀಯ ಅಂಶವಿದೆ ಎಂದು ಅವರು ಒತ್ತಾಯಿಸಿದರು.

ಸಿಬಿಐ ಮತ್ತು ಡಿಕೆ ಶಿವಕುಮಾರ್ ಪರವಾಗಿ ಈಗಾಗಲೇ ಆಯಾ ಅಫಿಡವಿಟ್‌ಗಳನ್ನು ಸಲ್ಲಿಸಲಾಗಿದೆ ಮತ್ತು ಕರ್ನಾಟಕ ಸರ್ಕಾರವು ತನ್ನ ಪ್ರತಿ–ಅಫಿಡವಿಟ್ ಸಲ್ಲಿಸಿದ ನಂತರ ಪ್ರಕರಣವನ್ನು ಮುಂದುವರಿಸಬಹುದು ಎಂದು ನ್ಯಾಯಾಲಯಕ್ಕೆ ತಿಳಿಸಲಾಯಿತು. ಇದಕ್ಕೆ ಪ್ರತಿಕ್ರಿಯೆ ನೀಡಿದ ಕೋರ್ಟ್ ಯಾವುದೇ ಅವಸರವಿಲ್ಲ ಎಂದು ತಿಳಿಸಿ, ಪ್ರಕರಣವನ್ನು ಮಾರ್ಚ್ 26ಕ್ಕೆ ಮುಂದೂಡಿತು.




ರೈಲ್ವೆ ಮತ್ತು ಜಲಶಕ್ತಿ ಸಚಿವ ವಿ.ಸೋಮಣ್ಣನವರು ನವದೆಹಲಿಯಲ್ಲಿಂದು ಯಾದಗಿರಿ ರೈಲು ನಿಲ್ದಾಣದಲ್ಲಿ ಹೆಚ್ಚುವರಿ ರೈಲು ನಿಲುಗಡೆಯೊಂದಿಗೆ ರೈಲು ಸಂಖ್ಯೆ 22692 ಹಜರತ್ ನಿಜಾಮುದ್ದೀನ್–ಕೆ.ಎಸ್.ಆರ್ ಬೆಂಗಳೂರು ರಾಜಧಾನಿ ಎಕ್ಸ್‌ಪ್ರೆಸ್‌ಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಹಸಿರು ನಿಶಾನೆ ತೋರಿದರು.

## ವಕ್ಫ್ ಕರಡು ಮಸೂದೆ ಅಂಗೀಕರಿಸಿದ ಜಂಟಿ ಸಂಸದೀಯ ಸಮಿತಿ



**ನವದೆಹಲಿ, ಜ.29:** ಜಂಟಿ ಸಂಸದೀಯ ಸಮಿತಿ ವಕ್ಫ್ (ತಿದ್ದುಪಡಿ) ಮಸೂದೆಯ ಕರಡು ವರದಿ ಮತ್ತು ಪ್ರಸ್ತಾವಿತ ಕಾನೂನಿನ ತಿದ್ದುಪಡಿ ಮಾಡಿದ ಆವೃತ್ತಿಯನ್ನು ಬಹುಮತದಿಂದ ಅಂಗೀಕರಿಸಿದೆ ಎಂದು ಅಧ್ಯಕ್ಷ ಜಗದಾಂಬಿಕಾ ಪಾಲ್ ಬುಧವಾರ ತಿಳಿಸಿದ್ದಾರೆ. ಸಮಿತಿಯ 16 ಸದಸ್ಯರು ಕರಡು ವರದಿಯ ಪರ ಮತ ಚಲಾಯಿಸಿದರೆ, 11 ಸದಸ್ಯರು ವಿರೋಧಿಸಿದ್ದಾರೆ ಎಂದು ಪಾಲ್ ಹೇಳಿದ್ದಾರೆ. ಸಂಸದೀಯ ಸಮಿತಿ ಸದಸ್ಯರಿಗೆ ತಮ್ಮ ಭಿನ್ನಾಭಿಪ್ರಾಯ ತಿಳಿಸಲು ಇಂದು ಸಂಜೆ 4 ಗಂಟೆಯವರೆಗೆ ಸಮಯ ನೀಡಲಾಗಿದೆ. ತೃಣಮೂಲ ಕಾಂಗ್ರೆಸ್ ಸಂಸದರಾದ ಕಲ್ಯಾಣ್ ಬ್ಯಾನರ್ಜಿ ಮತ್ತು ನದಿಮುಲ್ ಹಕ್, ಡಿಎಂಕೆ ಸಂಸದ ಎ ರಾಜಾ, ಎಎಪಿ ನಾಯಕ ಸಂಜಯ್ ಸಿಂಗ್ ಮತ್ತು ಶಿವಸೇನೆ (ಯುಬಿಟಿ) ಸಂಸದ ಅರವಿಂದ್ ಸಾವಂತ್ ಅವರು ಔಪಚಾರಿಕವಾಗಿ ತಮ್ಮ ಭಿನ್ನಾಭಿಪ್ರಾಯವನ್ನು ಸಲ್ಲಿಸಿದ್ದಾರೆ.

ಅಂತಿಮ ವರದಿ ಪರಿಶೀಲಿಸಲು ತಮಗೆ ಕಡಿಮೆ ಸಮಯ ನೀಡಲಾಗಿದೆ ಎಂದು ಆರೋಪಿಸಿರುವ ವಿರೋಧ ಪಕ್ಷದ ಸದಸ್ಯರು, ಕರಡು ವರದಿ ಅಂತಿಮಗೊಳಿಸುವ ಪ್ರಕ್ರಿಯೆಯನ್ನು ಟೀಕಿಸಿದ್ದಾರೆ.

ಇದು ಪ್ರಜಾಪ್ರಭುತ್ವ ವಿರೋಧಿ ನಡೆ ಎಂದಿರುವ ಶಿವಸೇನೆ (ಯುಬಿಟಿ) ಸಂಸದ ಅರವಿಂದ್ ಸಾವಂತ್, ಎಲ್ಲಾ ವಿರೋಧ ಪಕ್ಷದ ಸದಸ್ಯರು ಭಿನ್ನಾಭಿಪ್ರಾಯದ ಟಿಪ್ಪಣಿಗಳನ್ನು ಸಲ್ಲಿಸುತ್ತಾರೆ ಎಂದು ಹೇಳಿದ್ದಾರೆ. ಜಗದಾಂಬಿಕಾ ಪಾಲ್ ಅವರು ಪರಿಷ್ಕೃತ ಮಸೂದೆಯನ್ನು ಗುರುವಾರ ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರಿಗೆ ಸಲ್ಲಿಸುವ ನಿರೀಕ್ಷೆಯಿದೆ.

ವಕ್ಫ್ (ತಿದ್ದುಪಡಿ) ಮಸೂದೆ– 2024 ಅನ್ನು ಕೇಂದ್ರ ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಲೋಕಸಭೆಯಲ್ಲಿ ಮಂಡಿಸಿದ ನಂತರ, ಆಗಸ್ಟ್ 8, 2024 ರಂದು ಜಂಟಿ ಸಂಸದೀಯ ಸಮಿತಿಗೆ (ಜೆಪಿಸಿ) ಕಳುಹಿಸಲಾಗಿತ್ತು. ವಕ್ಫ್ ಆಸ್ತಿಗಳನ್ನು ನಿಯಂತ್ರಿಸುವ ಮತ್ತು ನಿರ್ವಹಿಸುವಲ್ಲಿನ ಸಮಸ್ಯೆಗಳು ಮತ್ತು ಸವಾಲುಗಳನ್ನು ಪರಿಹರಿಸಲು ಜಾರಿಗೆ ತಂದ 1995 ರ ವಕ್ಫ್ ಕಾಯ್ದೆಯನ್ನು ತಿದ್ದುಪಡಿ ಮಾಡುವ ಗುರಿಯನ್ನು ಈ ಮಸೂದೆ ಹೊಂದಿದೆ. ಕಳೆದ ಸೋಮವಾರ ಸಂಸದೀಯ ಸಮಿತಿಯು ಆಡಳಿತಾರೂಢ ಬಿಜೆಪಿ ನೇತೃತ್ವದ ಎನ್ಡಿಎ ಸದಸ್ಯರು ಪ್ರಸ್ತಾಪಿಸಿದ ಎಲ್ಲಾ ತಿದ್ದುಪಡಿಗಳನ್ನು ಅಂಗೀಕರಿಸಿದೆ ಮತ್ತು ವಿರೋಧ ಪಕ್ಷದ ಸದಸ್ಯರು ಸೂಚಿಸಿದ ಎಲ್ಲಾ ತಿದ್ದುಪಡಿಗಳನ್ನು ತಿರಸ್ಕರಿಸಿದೆ. ಅನುಮೋದಿತ ತಿದ್ದುಪಡಿಗಳಲ್ಲಿ ವಕ್ಫ್ ಸಮಿತಿಯಲ್ಲಿ ಮುಸ್ಲಿಮೇತರ ಸದಸ್ಯರ ಸಂಖ್ಯೆಯನ್ನು ಹೆಚ್ಚಿಸುವುದು ಒಂದು. ತಿದ್ದುಪಡಿಯ ಪ್ರಕಾರ, ವಕ್ಫ್ ಸಮಿತಿಗಳಲ್ಲಿ ಇಬ್ಬರು ಮುಸ್ಲಿಮೇತರರು ಸದಸ್ಯರಾಗಬಹುದು. ಜಿಲ್ಲಾ ಮ್ಯಾಜಿಸ್ಟ್ರೇಟ್‌ಗಳ ಜೊತೆಗೆ ರಾಜ್ಯ ಸರ್ಕಾರದ ಅಧಿಕಾರಿಗಳನ್ನು ವಕ್ಫ್‌ನ ಕೆಲ ಹುದ್ದೆಗಳಿಗೆ ನೇಮಿಸಲು ಅವಕಾಶ ನೀಡುವುದು ಮತ್ತು ವಕ್ಫ್ ನ್ಯಾಯಮಂಡಳಿಗಳ ಸದಸ್ಯರನ್ನು ಎರಡರಿಂದ ಮೂರಕ್ಕೆ ಹೆಚ್ಚಿಸುವುದು ತಿದ್ದುಪಡಿಗಳಲ್ಲಿ ಸೇರಿವೆ.

## 16,300 ಕೋಟಿ ರೂ. ವೆಚ್ಚದ ರಾಷ್ಟ್ರೀಯ ನಿರ್ಣಾಯಕ ಖನಿಜ ಮಿಷನ್‌ಗೆ ಕೇಂದ್ರ ಸಂಪುಟ ಅಸ್ತು

**ನವದೆಹಲಿ, ಜ.29:** ಬುಧವಾರ ಪ್ರಧಾನಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ನಡೆದ ಕೇಂದ್ರ ಸಚಿವ ಸಂಪುಟ ಸಭೆ, 16,300 ಕೋಟಿ ರೂ. ವೆಚ್ಚದಲ್ಲಿ ಮತ್ತು ಸರ್ಕಾರಿ ಸ್ವಾಮ್ಯದ ಕಂಪನಿಗಳಿಂದ 18,000 ಕೋಟಿ ರೂ. ಹೂಡಿಕೆಯ ನಿರೀಕ್ಷೆಯೊಂದಿಗೆ ರಾಷ್ಟ್ರೀಯ ನಿರ್ಣಾಯಕ ಖನಿಜ ಮಿಷನ್‌ನನ್ನು ಪ್ರಾರಂಭಿಸಲು ಅನುಮೋದನೆ ನೀಡಿದೆ.

ಖನಿಜ ಪರಿಶೋಧನೆ, ಗಣಿಗಾರಿಕೆ, ಪ್ರಯೋಜನೀಕರಣ, ಸಂಸ್ಕರಣೆ ಮತ್ತು ಜೀವಿತಾವಧಿಯ ಉತ್ಪನ್ನಗಳಿಂದ ಚೇತರಿಕೆ ಸೇರಿದಂತೆ ಮೌಲ್ಯ ಸರಪಳಿಯ ಎಲ್ಲಾ ಹಂತಗಳನ್ನು ಮಿಷನ್ ಒಳಗೊಳ್ಳುತ್ತದೆ. ಇದು ದೇಶದೊಳಗೆ ಮತ್ತು ಅದರ ಕಡಲಾಚೆಯ ಪ್ರದೇಶಗಳಲ್ಲಿ ನಿರ್ಣಾಯಕ ಖನಿಜಗಳ ಪರಿಶೋಧನೆಯನ್ನು ತೀವ್ರಗೊಳಿಸುತ್ತದೆ. ನಿರ್ಣಾಯಕ ಖನಿಜ ಗಣಿಗಾರಿಕೆ ಯೋಜನೆಗಳಿಗೆ ತ್ವರಿತ ನಿಯಂತ್ರಣ ಅನುಮೋದನೆ ಪ್ರಕ್ರಿಯೆಯನ್ನು ರಚಿಸುವ ಗುರಿಯನ್ನು ಇದು ಹೊಂದಿದೆ. ಹೆಚ್ಚುವರಿಯಾಗಿ, ನಿರ್ಣಾಯಕ ಖನಿಜ ಪರಿಶೋಧನೆಗೆ ಮಿಷನ್ ಹಣಕಾಸಿನ ಪ್ರೋತ್ಸಾಹವನ್ನು ನೀಡುತ್ತದೆ ಮತ್ತು ಈ ಖನಿಜಗಳನ್ನು ಅತಿಯಾದ ಹೊರೆ ಮತ್ತು ಉಳಿಕೆಗಳಿಂದ ಚೇತರಿಸಿಕೊಳ್ಳುವುದನ್ನು ಉತ್ತೇಜಿಸುತ್ತದೆ. "ಭಾರತೀಯ ಸಾರ್ವಜನಿಕ ಉದ್ದಿಮೆಗಳು ಮತ್ತು ಖಾಸಗಿ ವಲಯದ ಕಂಪನಿಗಳು ವಿದೇಶಗಳಲ್ಲಿ ನಿರ್ಣಾಯಕ ಖನಿಜ ಆಸ್ತಿಗಳನ್ನು ಸ್ವಾಧೀನಪಡಿಸಿಕೊಳ್ಳಲು ಮತ್ತು ಸಂಪನ್ಮೂಲ–ಸಮೃದ್ಧ ದೇಶಗಳೊಂದಿಗೆ ವ್ಯಾಪಾರವನ್ನು ಹೆಚ್ಚಿಸಲು ಪ್ರೋತ್ಸಾಹಿಸುವುದು ಈ ಮಿಷನ್ನ ಉದ್ದೇಶವಾಗಿದೆ. ಇದು ದೇಶದೊಳಗೆ ನಿರ್ಣಾಯಕ ಖನಿಜಗಳ ದಾಸ್ತಾನು ಅಭಿವೃದ್ಧಿಯನ್ನು ಸಹ ಪ್ರಸ್ತಾಪಿಸುತ್ತದೆ" ಎಂದು ಅಧಿಕೃತ ಹೇಳಿಕೆ ತಿಳಿಸಿದೆ. ಖನಿಜ ಸಂಸ್ಕರಣಾ ಉದ್ಯಾನವನಗಳನ್ನು ಸ್ಥಾಪಿಸಲು ಮತ್ತು ನಿರ್ಣಾಯಕ ಖನಿಜಗಳ ಮರುಬಳಕೆಯನ್ನು ಬೆಂಬಲಿಸಲು ಈ ಮಿಷನ್ ನಿಬಂಧನೆಗಳನ್ನು ಒಳಗೊಂಡಿದೆ. (2ನೇ ಪುಟಕ್ಕೆ)

# ದಾಖಲೆಗಳಿಲ್ಲದ ನಿವೇಶನಗಳಿಗೆ ಬಿ ಖಾತಾ ನೀಡಲು ಮುಖ್ಯಮಂತ್ರಿ ಸಿದ್ದರಾಮಯ್ಯ ಆದೇಶ



**ಬೆಂಗಳೂರು, ಜ.29–** ಬೆಂಗಳೂರು ಮಹಾನಗರ ಪಾಲಿಕೆ ಹೊರತುಪಡಿಸಿ ರಾಜ್ಯದ ಉಳಿದ ನಗರಪಾಲಿಕೆ ಹಾಗೂ ಸ್ಥಳೀಯ ಸಂಸ್ಥೆಗಳ ಪ್ರದೇಶ ವ್ಯಾಪ್ತಿಯಲ್ಲಿ ಯಾವುದೇ ದಾಖಲೆಗಳಿಲ್ಲದ ನಿವೇಶನಗಳಿಗೆ 'ಬಿ' ಖಾತಾ ನೀಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಆದೇಶ ಮಾಡಿದ್ದಾರೆ.

ಒಂದು ಬಾರಿಗೆ ಅನ್ವಯವಾಗುವಂತೆ ಈ ಆದೇಶ ಹೊರಡಿಸಿ, ಎಲ್ಲ ಅಕ್ರಮ ನಿವೇಶನಗಳನ್ನು ಸಕ್ರಮಗೊಳಿಸಿ ಇನ್ನು ಮುಂದೆ ರಾಜ್ಯದ ಯಾವುದೇ ಭಾಗದಲ್ಲಿ ಅನಧಿಕೃತ ಬಡಾವಣೆ ತಲೆ ಎತ್ತದಂತೆ ನೋಡಿಕೊಳ್ಳಿ ಎಂದು ಮುಖ್ಯಕಾರ್ಯದರ್ಶಿ ಹಾಗೂ ಕಂದಾಯ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಗೃಹ ಕಚೇರಿ ಕೃಷ್ಣಾದಲ್ಲಿ ಕಂದಾಯ ಇಲಾಖೆ ಪ್ರಗತಿ ಪರಿಶೀಲನೆ ಸಭೆಯಲ್ಲೇ ಈ ಆದೇಶ ಮಾಡಿದ ಮುಖ್ಯಮಂತ್ರಿ ಅವರು, ಬರುವ ಏಪ್ರಿಲ್ ಅಂತ್ಯದ ವೇಳೆಗೆ ಎಲ್ಲಾ ಅನಧಿಕೃತ ನಿವೇಶನಗಳಿಗೂ ದಾಖಲೆ ನೀಡಿ ಎಂದಿದ್ದಾರೆ. ಬೆಂಗಳೂರು ನಗರ ಹೊರತುಪಡಿಸಿ ಮೈಸೂರು, ಶಿವಮೊಗ್ಗ, ದಾವಣಗೆರೆ, ಮಂಗಳೂರು, ಹುಬ್ಬಳ್ಳಿ–ಧಾರವಾಡ ಸೇರಿದಂತೆ ರಾಜ್ಯದ ಎಲ್ಲಾ ನಗರಪಾಲಿಕೆಗಳು ಹಾಗೂ ನಗರಸಭೆ ವ್ಯಾಪ್ತಿಯಲ್ಲಿನ ನಿವೇಶನಗಳಿಗೆ 'ಬಿ' ಖಾತಾ ನೀಡಿ. ಮೂರು ತಿಂಗಳ ಅವಧಿಯೊಳಗೆ ಸ್ಥಳೀಯ ಸಂಸ್ಥೆಗಳ ಆಸ್ತಿಗಳಿಗೆ ದಾಖಲೆ ನೀಡಿದ ನಂತರ ಪಂಚಾಯತ್ ವ್ಯಾಪ್ತಿಯಲ್ಲಿನ ನಿವೇಶನಗಳಿಗೂ ದಾಖಲೆ ನೀಡಿ ಎಂದು ಆದೇಶಿಸಿದರು.

ಬೆಂಗಳೂರು ಹೊರತುಪಡಿಸಿ ಉಳಿದ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ 55 ಲಕ್ಷ ನಿವೇಶನಗಳಿದ್ದು, ಇವುಗಳಲ್ಲಿ 22 ನಿವೇಶನಗಳಿಗೆ 'ಇ' ಖಾತಾ ಪಡೆದಿದ್ದಾರೆ. ಉಳಿದ ನಿವೇಶನಗಳಿಗೆ ಯಾವುದೇ ರೀತಿಯ ದಾಖಲೆಗಳಿಲ್ಲ, ಆದ್ದರಿಂದ ಅವುಗಳನ್ನೂ ಸಕ್ರಮಗೊಳಿಸಿ, ತೆರಿಗೆ ವ್ಯಾಪ್ತಿಗೆ ತನ್ನಿ ಎಂದಿದ್ದಾರೆ. ಇಂತಹ ನಿವೇಶನಗಳನ್ನು ಜಿಲ್ಲಾಡಳಿತವೇ ಗುರುತಿಸಿ ದಾಖಲೆ ನೀಡಬೇಕು, ಏಪ್ರಿಲ್ ನಂತರ ಯಾವೊಂದು ನಿವೇಶನವೂ ಅನಧಿಕೃತವಾಗಿರಬಾರದು ಎಂದು ಕಟ್ಟಾದೇಶ ಮಾಡಿದ್ದಾರೆ.

**'ಭೂ ಸುರಕ್ಷಾ' ಯೋಜನೆ:**


ಭೂ ದಾಖಲೆಗಳ ರಕ್ಷಣೆ ಹಾಗೂ ದುರುಪಯೋಗ ಆಗದಂತೆ, ದಾಖಲೆ ತಿದ್ದಲು ಅವಕಾಶ ಇಲ್ಲದಂತೆ 'ಭೂ ಸುರಕ್ಷಾ' ಯೋಜನೆ ಪರಿಣಾಮಕಾರಿಯಾಗಿ ಜಾರಿಯಾಗಬೇಕು ಎಂದು ಸೂಚಿಸಿದರು. ತಂತ್ರಾಂಶ ಸಮರ್ಪಕ ಬಳಕೆ ಮೂಲಕ ಕಂದಾಯ ವ್ಯವಸ್ಥೆಯಲ್ಲಿ ಸುಧಾರಣಾ ಕಾರ್ಯ ಕೈಗೊಳ್ಳಲಾಗಿದೆ. ನಕ್ಷಾ ಯೋಜನೆ ಮೂಲಕ ನಗರ ಪ್ರದೇಶದಲ್ಲಿ ಡ್ರೋನ್ ಸರ್ವೆ ಮೂಲಕ ಆಸ್ತಿಚೀಟಿ (ಪ್ರಾಪರ್ಟಿ ಕಾರ್ಡ್) ನೀಡಲಾಗುತ್ತಿದೆ. ರಾಜ್ಯದ 21 ಜಿಲ್ಲೆಗಳಲ್ಲಿ ಡ್ರೋನ್ ಮೂಲಕ ಸರ್ವೇ ಕಾರ್ಯ ಕೈಗೊಳ್ಳಲಾಗಿದೆ, ಉಳಿದ ಜಿಲ್ಲೆಗಳಲ್ಲೂ ಡ್ರೋನ್ ಸರ್ವೆ ಆರಂಭಿಸಬೇಕು.

**ಭೂದಾಖಲೆ ಕಂಪ್ಯೂಟರೀಕರಣ:**

ಭೂ ಸುರಕ್ಷಾ ಯೋಜನೆ ಮೂಲಕ ಭೂದಾಖಲೆಗಳ ಕಂಪ್ಯೂಟರೀಕರಣ ಕಾರ್ಯ ನಡೆದಿದ್ದು, ಇದುವರೆಗೆ ಸುಮಾರು 8 ಕೋಟಿ ಮೂಲ ದಾಖಲೆಗಳ ಕಂಪ್ಯೂಟರೀಕರಣ ಪೂರ್ಣಗೊಂಡಿದ್ದು, ರಾಜ್ಯದ ಎಲ್ಲಾ 31 ಜಿಲ್ಲೆಗಳ ಭೂ ದಾಖಲೆಗಳ ಕಂಪ್ಯೂಟರೀಕರಣ ಕಾರ್ಯ ನಡೆಯುತ್ತಿದೆ ಎಂದರು.

ಹಲವು ವರ್ಷಗಳಿಂದ ಸರ್ಕಾರಿ ಜಮೀನು ಸಾಗುವಳಿ ಮಾಡುತ್ತಿರುವ ರೈತರಿಂದ ಈ ಭೂಮಿ ಸ್ವಾಧೀನ ಸಂದರ್ಭದಲ್ಲಿ ಪರಿಹಾರದ ಬಗ್ಗೆ ಸೂಕ್ತ ಪ್ರಸ್ತಾವನೆ ಸಲ್ಲಿಸಬೇಕು ಎಂದು ಸಿಎಂ ಸೂಚಿಸಿದರು.

## ನಿತ್ಯ ಪಂಚಾಂಗ 30.01.2025 ಗುರುವಾರ



ಶ್ರೀ ಕ್ರೋಧಿ ನಾಮ ಸಂವತ್ಸರ,
ದಕ್ಷಿಣಾಯನ–ಶರದ್ ಹೇಮಂತ ಋತು,
ಚಾಂದ್ರಮಾನ, ಮಾಘ ಶುದ್ಧ

ಪಾಡ್ಯ, ಶ್ರವಣ ನಕ್ಷತ್ರ,
ಚಂದ್ರದರ್ಶನ, ಕಾನಂಗಿ
ಶ್ರೀನಿವಾರ ಧ್ವಜ, ಸರ್ವೋದಯ ದಿನ,
ಹಿರಿಯೂರು ತೇರುಮಲ್ಲೇಶ್ವರ ರಥ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ಸಚಿವ ಸತೀಶ್ ಜಾರಕಿಹೊಳಿ ದುಬೈ ಪ್ರವಾಸ: ಪಕ್ಷದಲ್ಲಿ ಗೊಂದಲ



**ಬೆಂಗಳೂರು, ಜ.29–**ಹೈಕಮಾಂಡ್ ಮಧ್ಯಪ್ರವೇಶದ ಬಳಿಕ ಕಾಂಗ್ರೆಸ್‌ನಲ್ಲಿ ಎಲ್ಲವೂ ತಣ್ಣಗಾಗಿದೆ ಎನ್ನುವ ಹಂತದಲ್ಲೇ ಸತೀಶ್ ಜಾರಕಿಹೊಳಿ ಅವರ ತಂಡ ದುಬೈ ಪ್ರವಾಸಕ್ಕೆ ಮುಂದಾಗುವ ಮೂಲಕ ಮತ್ತೊಂದು ಸುತ್ತಿನ ಗೊಂದಲಕ್ಕೆ ನಾಂದಿ ಹಾಡಿದೆ.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ವಿರುದ್ಧ ಒಳಗೊಳಗೇ ಕುದಿಯುತ್ತಿರುವ ಜಾರಕಿಹೊಳಿ ಸಹೋದರರ ಈ ನಡವಳಿಕೆ ಕಾಂಗ್ರೆಸ್‌ಗೆ ಬಿಸಿತುಪ್ಪವಾಗಿ ಪರಿಣಮಿಸಿದೆ. ಈ ಮೊದಲು ಕಳೆದ ದಸರಾ ಮಹೋತ್ಸವದ ಸಂದರ್ಭದಲ್ಲಿ ಸತೀಶ್ ಜಾರಕಿಹೊಳಿಯವರು ಪ್ರತ್ಯೇಕ ಪ್ರವಾಸದ ಪ್ರಯತ್ನ ನಿಲ್ಲಿಸಿದ್ದರು. ಆಪ್ತ ಶಾಸಕರೊಂದಿಗೆ ಪ್ರವಾಸಕ್ಕೆ ತೆರಳಲು ಮುಂದಾಗಿದ್ದ ಅವರಿಗೆ ಹೈಕಮಾಂಡ್ ಬ್ರೇಕ್ ಹಾಕಿತ್ತು.

ಹೀಗಾಗಿ ಸತೀಶ್ ಜಾರಕಿಹೊಳಿಯವರ ಪ್ರವಾಸ ಖಚಿತಗೊಂಡಿತ್ತಾದರೂ ಪೂರ್ತಿ ರದ್ದುಕೊಂಡಿರಲಿಲ್ಲ.

ಇತ್ತೀಚೆಗೆ ಕಾಂಗ್ರೆಸ್‌ನಲ್ಲಿ ಡಾ.ಜಿ.ಪರಮೇಶ್ವರ್ ನೇತೃತ್ವದಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಶಾಸಕರು ಪ್ರತ್ಯೇಕ ಸಭೆ ನಡೆಸಲು ಮುಂದಾಗಿದ್ದರು. ಹೈಕಮಾಂಡ್ ಅದಕ್ಕೂ ಬ್ರೇಕ್ ಹಾಕಿತ್ತು. ಒಂದು ಹಂತದಲ್ಲಿ ಜಿದ್ದಾಜಿದ್ದಿನ ರಾಜಕಾರಣ ಕೈಬಿಟ್ಟಂತೆ ಕಾಣಿಸಿಕೊಂಡ ಸತೀಶ್ ಜಾರಕಿಹೊಳಿ ಒಳಗೊಳಗೇ ಬೆಂಬಲಿಗರನ್ನು ವಿದೇಶಿ ಪ್ರವಾಸಕ್ಕೆ ಪ್ರಚೋದಿಸಿದ್ದಾರೆ ಎನ್ನಲಾಗಿದೆ.

ಸುಮಾರು 25 ಮಂದಿ ಆಪ್ತ ಶಾಸಕರು ದುಬೈ ಪ್ರವಾಸಕ್ಕೆ ತೆರಳುತ್ತಿದ್ದು, ಇದರ ನೇತೃತ್ವವನ್ನು ಸತೀಶ್ ಜಾರಕಿಹೊಳಿ ವಹಿಸಲಿದ್ದಾರೆ ಎಂದು ತಿಳಿದುಬಂದಿದೆ.

# ಅನುವಂಶಿಕವಾಗಿ ಕೆಎಫ್‌ಡಿ ವೈರಸ್ ವರ್ಗಾವಣೆ ಸಂಶೋಧನೆಯಿಂದ ದೃಢ



**ಬೆಂಗಳೂರು, ಜ.29–** ಪಶ್ಚಿಮ ಘಟ್ಟದ ಕಾಡಿನಲ್ಲಿ ಕಂಡುಬರುವ 32ಕ್ಕೂ ಅಧಿಕ ಜಾತಿಯ ಕೆಎಫ್‌ಡಿ ವೈರಸ್ ಹರಡಬಲ್ಲ ಉಣ್ಣೆಗಳಲ್ಲಿ ಎರಡು ಜಾತಿಯ ಉಣ್ಣೆಗಳು ಅನುವಂಶಿಕವಾಗಿ ಕೆಎಫ್‌ಡಿ ವೈರಸ್ ಅನ್ನು ಮತ್ತೊಂದು ಪೀಳಿಗೆಗೆ ವರ್ಗಾಯಿಸುತ್ತಿರುವುದು ಸಂಶೋಧನೆಯಿಂದ ದೃಢಪಟ್ಟಿದೆ.

ಈ ಸಂಶೋಧನೆಯು ಕೆಎಫ್ಡಿ ನಿಯಂತ್ರಣದಲ್ಲಿ ಆರೋಗ್ಯ ಇಲಾಖೆಗೆ ಹೊಸ ಭರವಸೆ ನೀಡಿದೆ. ಉಣುಗು ನಿಯಂತ್ರಣವೇ ಕೆಎಫ್ಡಿ ನಿಯಂತ್ರಣದ ಮೊದಲ ಭಾಗವಾಗಲಿದೆ. ಕೆಎಫ್ಡಿ ಕುರಿತಂತೆ ಕಳೆದ 6 ವರ್ಷದಿಂದ ರಾಜ್ಯ ಅರೋಗ್ಯ ಇಲಾಖೆಯು ಸೇರಿದಂತೆ ಐಸಿಎಂಆರ್, ಐಸಿಎಆರ್ ಸಂಸ್ಥೆಗಳ ಸಹಯೋಗದಲ್ಲಿ ಸಂಶೋಧನೆ ನಡೆಸುತ್ತಿರುವ "ಮಂಕಿ ಫಿವರ್ ರಿಸ್ಕ್" ತಂಡ ಉಣುಗುಗಳ ಬಗ್ಗೆ ಅಧ್ಯಯನ ನಡೆಸುತ್ತಾ ಬಂದಿದೆ. ಕೆಎಫ್ಡಿ ವೈರಸ್ ಪತ್ತೆಯಾಗಿ 60 ವರ್ಷವಾಗಿದ್ದರೂ ಅದನ್ನು ಸಂಪೂರ್ಣವಾಗಿ ಅಧ್ಯಯನ ಮಾಡಲು ಆಗಿರಲಿಲ್ಲ. ಮಲೆನಾಡಿನ ಕಾಡುಗಳಲ್ಲಿ ಕಂಡುಬರುವ ಹೆಮಾಫಿಸಾಲಿಸ್ ಮತ್ತು ರೈಪಿಸೆಫಾಲಸ್ ಹೆಸರಿನ ಎರಡು ಜಾತಿಯ ಉಣುಗು ವೈರಸ್ ಅನ್ನು ತನ್ನ ಮಕ್ಕಳಿಗೂ ವರ್ಗಾಯಿಸುತ್ತಿದೆ ಎಂದು ಸಂಶೋಧನೆಯಿಂದ ತಿಳಿದುಬಂದಿದೆ ಎಂದು ವಿಜ್ಞಾನಿ ಡಾ.ದರ್ಶನ್ ನಾರಾಯಣ್ ತಿಳಿಸಿದ್ದಾರೆ.

# ಆರು ತಿಂಗಳಲ್ಲಿ 1200 ಪಿಎಸ್‌ಐ, 12 ಸಾವಿರ ಪೊಲೀಸರ ನೇಮಕ; ಸಚಿವ ಪರಮೇಶ್ವರ್



**ಕಲಬುರಗಿ, ಜ.29–** ರಾಜ್ಯದಲ್ಲಿ ಮುಂದಿನ ಆರು ತಿಂಗಳಲ್ಲಿ 1200 ಪಿಎಸ್ಐ ಮತ್ತು 12 ಸಾವಿರ ಪೊಲೀಸರ ನೇಮಕಾತಿ ಮಾಡಲಾಗುವುದು ಎಂದು ಗೃಹಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದರು.

ನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ 10 ರಿಂದ 12 ಸಾವಿರ ಪೊಲೀಸ್ ಸಿಬ್ಬಂದಿಯ ಕೊರತೆ ಇದೆ. ರಾಜ್ಯದಲ್ಲಿ ಅದನ್ನು ಕೂಡ ಭರ್ತಿ ಮಾಡಿಕೊಳ್ಳುವ ಕೆಲಸ ಮಾಡುತ್ತಿದ್ದೇವೆ. ಜನಸಂಖ್ಯೆಗೆ ಅನುಗುಣವಾಗಿ ಹೊಸ ಪೊಲೀಸ್ ಠಾಣೆಗಳು ಸ್ಥಾಪನೆಯಾದಾಗ, ಅದಕ್ಕೆ ಅನುಗುಣವಾಗಿ ಸಿಬ್ಬಂದಿಗಳ ನೇಮಕವೂ ಕಾಲ ಕಾಲಕ್ಕೆ ಮಾಡಿಕೊಂಡು ಬಂದಿದ್ದರೆ ಇಂದು ಕೊರತೆ ಅನುಭವಿಸುತ್ತಿರಲಿಲ್ಲ. ಆದರೆ ಹಿಂದೆ ಆಗಿಲ್ಲ ಎಂದು ನಾವು ಸುಮ್ಮನಿರಲಾದೀತೇ. ನಾವು ಆ ಕೆಲಸವನ್ನು ಮಾಡುತ್ತಿದ್ದೇವೆ ಎಂದು ಹೇಳಿದರು.

ಮುಂದಿನ 6–7 ತಿಂಗಳಲ್ಲಿ 1200 ಪಿಎಸ್‌ಐಗಳ ನೇಮಕಾತಿ ನಡೆಸಲಿದ್ದು, ರಾಜ್ಯದಲ್ಲಿ 10 ರಿಂದ 12 ಸಾವಿರ ಪೊಲೀಸ್ ಸಿಬ್ಬಂದಿಯ ಕೊರತೆ ಇದ್ದು, ಅವನ್ನು ಕೂಡ ಭರ್ತಿ ಮಾಡಿಕೊಳ್ಳುವ ಕೆಲಸ ಮಾಡುತ್ತೇವೆ. ಬಿಜೆಪಿಯವರು ಕಾನೂನು ಸುವ್ಯವಸ್ಥೆ ಹಾಳಾಗಿದೆ ಎನ್ನುತ್ತಾರೆ. ಅಂತಹ ಒಂದು ಉದಾರಣೆ ಕೊಡಿ ಎಂದು ಪರಮೇಶ್ವರ್ ಹೇಳಿದರು.

ಸುಮ್ಮನೆ ಸಾಮಾನ್ಯವಾಗಿ ಕಾನೂನು ಸುವ್ಯಸ್ಥೆ ಕುಸಿದಿದೆ ಎಂದು ಆರೋಪಗಳನ್ನು ಮಾಡಬಾರದು. ಅವರ ಕಾಲದಲ್ಲಿ ಎಷ್ಟು ಆಗಿದೆ ಎನ್ನುವ ದಾಖಲೆ ಇದೆ. ಅದನ್ನು ಸಮಯ ಬಂದಾಗ ನಾವು ಬಿಡುಗಡೆ ಮಾಡುತ್ತೇವೆ. 48 ಗಂಟೆಗಳಲ್ಲಿ ಮಂಗಳೂರು ದರೋಡೆ ಪ್ರಕರಣ ಕೇಸ್ ಭೇದಿಸಿದ್ದೇವೆ. ಬೀದರ್ ದರೋಡೆ ಪ್ರಕರಣ ಕೂಡ ಕೊನೆಯ ಹಂತದಲ್ಲಿದೆ. ಆದಷ್ಟು ಬೇಗ ನಮ್ಮ ಪೊಲೀಸರು ಅವರನ್ನು ಬಂಧಿಸುತ್ತಾರೆ ಎಂದು ಹೇಳಿದರು.

ಕಲಬುರಗಿಯ ಎಲ್ಲಾ ಠಾಣಾ ವ್ಯಾಪ್ತಿಯ ನೇರ ದೃಶ್ಯ ಒಂದೇ ಕಡೆ ಲಭ್ಯವಾಗಲಿದೆ. ಕಲಬುರಗಿ ನಗರ ವ್ಯಾಪ್ತಿಯಲ್ಲಿ 113 ಸಿಸಿ ಕ್ಯಾಮರಾಗಳನ್ನು ಅಳವಡಿಸಲಾಗಿದೆ. ಬೆಂಗಳೂರಿನಲ್ಲಿಯೂ ಈ ವ್ಯವಸ್ಥೆಯನ್ನು ಮಾಡುವ ಯೋಜನೆ ಇದೆ. ಅದಕ್ಕೂ ಮೊದಲೇ ಕಲಬುರಗಿಯಲ್ಲಿ ಅನುಷ್ಠಾನ ಮಾಡಿದ್ದಾರೆ. ಡ್ರಗ್ಸ್ ಮುಕ್ತ ಕರ್ನಾಟಕ ನಮ್ಮ ಗುರಿ. ಡ್ರಗ್ಸ್‌ಮುಕ್ತ ರಾಜ್ಯ ಮಾಡಲು ಅಧಿಕಾರಿಗಳು ಕೆಲಸ ಮಾಡುತ್ತಿದ್ದಾರೆ ಎಂದರು.

# ಕರ್ನಾಟಕ ಮೈಕ್ರೋ ಫೈನಾನ್ಸ್ ಪ್ರಿವೆನ್ಷನ್ ಆಫ್ ಕೋಯೆರ್ಸಿವ್ ಅಂಡ್ ಇನ್‌ಹ್ಯೂಮನ್ ಆ್ಯಕ್ಷನ್ ಮಸೂದೆ

## ಕಂದಾಯ–ಆರ್ಥಿಕ ಇಲಾಖೆಗಳ ಅಧಿಕಾರಿಗಳೊಂದಿಗೆ ಕಾನೂನು–ಗೃಹ ಸಚಿವರ ಮಹತ್ವದ ಸಭೆ

**ಬೆಂಗಳೂರು, ಜ.29–**ಮೈಕ್ರೋ ಫೈನಾನ್ಸ್ ಸಂಸ್ಥೆಗಳು ಸಾಲದ ಹಣ ವಸೂಲಿ ಮಾಡುವ ಸಂದರ್ಭದಲ್ಲಿ ಸಾರ್ವಜನಿಕರ ಮೇಲೆ ದೌರ್ಜನ್ಯ ಎಸಗುವುದು, ಕಿರುಕುಳ ನೀಡುವುದನ್ನು ನಿಷೇಧಿಸುವ "ಕರ್ನಾಟಕ ಮೈಕ್ರೋ ಫೈನಾನ್ಸ್ ಪ್ರಿವೆನ್ಷನ್ ಆಫ್ ಕೋಯೆರ್ಸಿವ್ ಆಯಂಡ್ ಇನ್ಹ್ಯೂಮನ್ ಆಯಕ್ಷನ್ 2025" ಮಸೂದೆ ಕುರಿತು ಕಾನೂನು ಸಚಿವರಾದ ಹೆಚ್.ಕೆ.ಪಾಟೀಲ್ ಹಾಗೂ ಗೃಹ ಸಚಿವರಾದ ಡಾ.ಜಿ.ಪರಮೇಶ್ವರ ಅವರು ಕಂದಾಯ ಮತ್ತು ಆರ್ಥಿಕ ಇಲಾಖೆಗಳ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.

ಸಭೆ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಗೃಹ ಸಚಿವ ಡಾ. ಜಿ.ಪರಮೇಶ್ವರ ಅವರು, ಮೈಕ್ರೋ ಫೈನಾನ್ಸ್ ಸಂಸ್ಥೆಗಳು ಸಾರ್ವಜನಿಕರಿಗೆ ತೊಂದರೆ ನೀಡುತ್ತಿರುವುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ. ಇದನ್ನು ತಡೆಗಟ್ಟಲು ತ್ವರಿತವಾಗಿ ಕಾನೂನು ತರಬೇಕು ಎಂದು ಮುಖ್ಯಮಂತ್ರಿಯವರು ಸೂಚಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಹಲವು ವಿಚಾರಗಳ ಕುರಿತು ಸುದೀರ್ಘವಾಗಿ ಚರ್ಚಿಸಿ ನಿರ್ಣಯಗಳನ್ನು ಕೈಗೊಳ್ಳಲಾಗಿದೆ. ಸಮಾಜದಲ್ಲಿ ಕೆಳಸ್ತರದ ಜನರು ಕಿರುಸಾಲ ತೆಗೆದುಕೊಳ್ಳುತ್ತಾರೆ. ಸಾಲ ವಸೂಲಿ ಮಾಡಲು ಅಮಾನವೀಯವಾಗಿ ವರ್ತಿಸಿರುವುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ. ಇಂತಹ ಘಟನೆಗಳನ್ನು ನಿಲ್ಲಿಸಬೇಕಿದೆ. ಜನ ಊರು ಬಿಡುತ್ತಿರುವುದು, ಆತ್ಮಹತ್ಯೆ ಮಾಡಿಕೊಳ್ಳುತ್ತಿರುವುದು ವರದಿಯಾಗುತ್ತಿವೆ.

ಹೀಗಾಗಿ ಮಸೂದೆ ತರಲು ಬಜೆಟ್ ಅಧಿವೇಶನದವರೆಗೂ ಕಾಯಲು ಆಗುವುದಿಲ್ಲ. ಸಭೆಯ ಪ್ರಮುಖ ಅಂಶಗಳನ್ನು ಮುಖ್ಯಮಂತ್ರಿಯವರೊಂದಿಗೆ ಚರ್ಚಿಸಿ, ಕ್ಯಾಬಿನೆಟ್ ಮುಂದೆ ತರಲಾಗುವುದು ಎಂದು ಅವರು ತಿಳಿಸಿದರು.ಮೈಕ್ರೋಫೈನಾನ್ಸ್‌ಗಳ ಅಮಾನುಷ ವರ್ತನೆಯ ಘಟನೆಗಳು ಗಮನಕ್ಕೆ ಬಂದ ಕೂಡಲೇ ಸ್ವಯಂ ಪ್ರೇರಿತ ದೂರು ದಾಖಲಿಸಿಕೊಳ್ಳುವಂತೆ ಪೊಲೀಸರಿಗೆ ಸೂಚಿಸಲಾಗಿದೆ. ಜನರೊಂದಿಗೆ ಒತ್ತಾಯ ಪೂರ್ವಕವಾಗಿ ನಡೆದುಕೊಳ್ಳುವುದು ಸಮಾಜಕ್ಕೆ ಒಳ್ಳೆಯದಲ್ಲ ಎಂದರು.

ಸಾಲ ವಸೂಲಾತಿ ಪ್ರಮಾಣ ಕಡಿಮೆ ಇರಬಹುದು. ಮೈಕ್ರೋಫೈನಾನ್ಸ್ ಸಂಸ್ಥೆಗಳ ಮೇಲಾಧಿಕಾರಿಗಳ ಒತ್ತಡವಿರಬಹುದು. ಆದರೂ ಈ ರೀತಿಯಾಗಿ ನಡೆದುಕೊಳ್ಳುವುದು ಸರಿಯಾದ ಕ್ರಮವಲ್ಲ. ಸಾಲ ಪಡೆಯುವುದು ಮತ್ತು ನೀಡುವುದರ ಕುರಿತು ಜನರಿಗೆ ಜಾಗೃತಿ ಮೂಡಿಸಲಾಗುವುದು ಎಂದು ಹೇಳಿದರು. ಮೈಕ್ರೋಫೈನಾನ್ಸ್ ಸಂಸ್ಥೆಗಳ ಆರ್ಥಿಕ ವ್ಯವಹಾರಗಳಿಗೆ ಕಡಿವಾಣ ಹಾಕುತ್ತಿಲ್ಲ. ಸಾಲ ಇಷ್ಟೇ ಕೊಡಬೇಕು ಎಂಬುದನ್ನು ಹೇಳುತ್ತಿಲ್ಲ. ಆದರೆ, ಜನರಿಂದ ಸಾಲ ವಸೂಲಿ ಮಾಡುವ ಕ್ರಮ ಸರಿಯಾಗಿಲ್ಲ ಎಂದರು.



ಕನಿಷ್ಠ ವೇತನಕ್ಕಾಗಿ ಒತ್ತಾಯಿಸಿ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರ ಸಂಘದ ಸದಸ್ಯರು ಬುಧವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಧರಣಿ ಮುಂದುವರಿಸಿದ್ದಾರೆ.

# ರೈತರ ಎಲ್ಲ ಬೆಳೆಗಳಿಗೆ ನಿಶ್ಚಿತ ದರ ನಿಗದಿಗೆ ಕಾಯ್ದೆ ಅನುಷ್ಠಾನ: ಕೇಂದ್ರ ಸರ್ಕಾರಕ್ಕೆ ಖಂಡ್ರೆ ಒತ್ತಾಯ



**ಸುತ್ತೂರು, ಜ.29–** ಇಂದು ಎಲ್ಲ ವಸ್ತುಗಳಿಗೆ ಎಂ.ಆರ್.ಪಿ. ಇದೆ. ಆದರೆ ರೈತರು ಕಷ್ಟಪಟ್ಟು ಬೆಳೆದ ಫಸಲಿಗೆ ನಿಶ್ಚಿತ ದರ ನಿಗದಿ ಆಗಿಲ್ಲ. ಹೀಗಾಗಿ ಕೇಂದ್ರ ಸರ್ಕಾರ ರೈತರು ಬೆಳೆಯುವ ಎಲ್ಲ ಬೆಳೆಗೆ ನಿಶ್ಚಿತ ದರ ನಿಗದಿಗೆ ಕಾಯಿದೆ ತರಬೇಕು ಎಂದು ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಒತ್ತಾಯಿಸಿದ್ದಾರೆ.

ನಂಜನಗೂಡು ತಾಲೂಕು ಸುತ್ತೂರು ಶ್ರೀಕ್ಷೇತ್ರದಲ್ಲಿ ನಡೆಯುತ್ತಿರುವ ಶ್ರೀ ಶಿವಯೋಗಿ ದೇಶಿಕೇಂದ್ರ ಮಹಾಸ್ವಾಮಿಗಳ ಜಾತ್ರಾ ಮಹೋ ತ್ಸವದ ಭಾಗವಾಗಿ ಕೃಷಿ ವಿಚಾರ ಸಂಕಿರಣದಲ್ಲಿ ಮಾತನಾಡಿದ ಅವರು, ಭಾರತ ಕೃಷಿ ಪ್ರಧಾನ ದೇಶವಾಗಿದ್ದು, ಅನ್ನದಾತನ ಬೆಳೆಗೆ ಕನಿಷ್ಠ ಬೆಂಬಲ ಬೆಲೆ ಸಿಗಲೇಬೇಕು ಎಂಬುದು ತಮ್ಮ ಅಭಿಪ್ರಾಯ ಎಂದರು.

ನಮ್ಮ ದೇಶ ಸ್ವಾತಂತ್ರ್ಯ ಬಂದ ತರುಣದಲ್ಲಿ ಆಹಾರ ಸಮಸ್ಯೆ ಎದುರಿಸುತ್ತಿತ್ತು. ಆದರೆ ಇಂದು ದೇಶದ 140 ಕೋಟಿ ಜನರಿಗೆ ಆಹಾರ ಒದಗಿಸುವುದರ ಜೊತೆಗೆ ಹೆಚ್ಚುವರಿ ಆಹಾರ ಧಾನ್ಯವನ್ನು ರಫ್ತು ಮಾಡುವ ಸಾಮರ್ಥ್ಯ ಪಡೆದಿದೆ ಎಂದರೆ ಅದಕ್ಕೆ ಕರ್ಮ ಯೋಗಿಗಳು, ಕಾಯಕಯೋಗಿಗಳಾದ ರೈತರೇ ಕಾರಣ ಎಂದರು.

ಇಂದು ರೈತರು ಎದುರಿಸುತ್ತಿರುವ ದೊಡ್ಡ ಸಮಸ್ಯೆ ಮಣ್ಣಿನ ಫಲವತ್ತತೆಯಲ್ಲಿ ಕುಸಿತ ಮತ್ತು ಕೃಷಿ ಕಾರ್ಮಿಕರ ಸಮಸ್ಯೆ. ರೈತರು ತಮ್ಮ ಹೊಲಗದ್ದೆಗಳ ಮಣ್ಣಿನ ಫಲವತ್ತತೆ ಕಾಪಾಡಿಕೊಳ್ಳಲು ಸಾಂಪ್ರದಾಯಿಕ ಕೃಷಿಗೆ ಆದ್ಯತೆ ನೀಡಬೇಕು ಮತ್ತು ಯಂತ್ರೋಪಕರಣಗಳ ಬಳಕೆಯಿಂದ ಕೃಷಿ ಕಾರ್ಮಿಕರ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಬೇಕು ಎಂದರು.

ಇಂಥ ಜಾತ್ರಾ ಮಹೋತ್ಸವಗಳಲ್ಲಿ ನಡೆಯುವ ಕೃಷಿ ವಿಚಾರಸಂಕಿರಣ ಮತ್ತು ವಸ್ತು ಪ್ರದರ್ಶನ ರೈತರಿಗೆ ಆಧುನಿಕಕಾಡಿದ್ದರೆ ನಾಡು, ಪ್ರಕೃತಿ ಪರಿಸರ ಉಳಿದರೆ ಮಾತ್ರ ಸಕಲ ಜೀವರಾಶಿ ಉಳಿಯಲು ಸಾಧ್ಯ. ರೈತರು ತಮ್ಮ ಹೊಲಗದ್ದೆಗಳ ಬದುವಿನಲ್ಲಿ ಮರ ಗಿಡ ಬೆಳೆಸಬೇಕು. ಹಸಿರು ವ್ಯಾಪ್ತಿ ಹೆಚ್ಚಿಸಬೇಕು. ವೃಕ್ಷವನ್ನು ನಾವು ರಕ್ಷಿಸಿದರೆ, ವೃಕ್ಷ ನಮ್ಮನ್ನು ರಕ್ಷಿಸುತ್ತದೆ ಎಂದು ಹೇಳಿದರು. ಮಾನವ ವನ್ಯಜೀವಿ ಸಂಘರ್ಷ ಹೆಚ್ಚಳವಾಗುತ್ತಿರುವ ಪ್ರಸಕ್ತ ಸನ್ನಿವೇಶದಲ್ಲಿ ವನ್ಯಜೀವಿಗಳೊಂದಿಗೆ ಸಹಬಾಳ್ವೆ ನಡೆಸುವುದನ್ನು ಕಲಿಯಬೇಕು ಎಂದರು.

ಸುತ್ತೂರು ಜಾತ್ರಾ ಮಹೋತ್ಸವ ಹತ್ತೂರಿಗೆ ಮಾದರಿಯಾಗಿದೆ. ಇಲ್ಲಿ ಸಾಂಸ್ಕೃತಿಕ ಕಾರ್ಯಕ್ರಮ, ವಚನ ಗಾಯನ, ಸಾಂಪ್ರದಾಯಿಕ ಕ್ರೀಡೆಗಳು, ಧಾರ್ಮಿಕ ವಿಚಾರಗಳ ಜೊತೆಗೆ ಕೃಷಿ ಸೇರಿದಂತೆ ಹಲವು ವಿಚಾರ ಸಂಕಿರಣಗಳು ನಡೆಯುತ್ತಿದ್ದು, ಮಾಹಿತಿ ಮನರಂಜನೆ ಎರಡನ್ನೂ ನೀಡುತ್ತಿದೆ. ಹೀಗಾಗಿಯೇ ಸುತ್ತೂರು ಜಾತ್ರೆ ಹತ್ತೂರಿಗೆ ಮಾದರಿ ಎಂಬ ಹೆಸರು ಬಂದಿದೆ ಎಂದರು.ಕಾರ್ಯಕ್ರಮದಲ್ಲಿ ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮೀಜಿ, ಸಂಸತ್ ಸದಸ್ಯ ಬಸವರಾಜ ಬೊಮ್ಮಾಯಿ, ಶಾಸಕರಾದ ಅರವಿಂದ ಬೆಲ್ಲದ್, ಸಿ.ಟಿ. ರವಿ ಮತ್ತಿತರರು ಪಾಲ್ಗೊಂಡಿದ್ದರು.



ದಾವಣಗೆರೆಯ ರಾಜನಹಳ್ಳಿಯಲ್ಲಿನ ಶ್ರೀ ಮಹರ್ಷಿ ವಾಲ್ಮೀಕಿ ಗುರುಪೀಠ ಹಮ್ಮಿಕೊಂಡಿರುವ ಮಹರ್ಷಿ ವಾಲ್ಮೀಕಿ ಜಾತ್ರೆ ವಾರ್ಷಿಕೋತ್ಸವಕ್ಕೆ ಪ್ರತಿಪಕ್ಷ ನಾಯಕ ಅಶೋಕ್ ಅವರನ್ನು ಮಾಜಿ ಶಾಸಕ ರಾಜುಗೌಡ ಆಮಂತ್ರಿಸಿದರು.

## ಮೊದಲನೇ ಪುಟದಿಂದ

ಮೊದಲನೇ ಪುಟದಿಂದ

### 16,300 ಕೋಟಿ: ರಾಷ್ಟ್ರೀಯ ನಿರ್ಣಾಯಕ ಮಿಷನ್‌ಗೆ ಅಸ್ತು

ಇದು ನಿರ್ಣಾಯಕ ಖನಿಜ ತಂತ್ರಜ್ಞಾನಗಳಲ್ಲಿ ಸಂಶೋಧನೆಯನ್ನು ಉತ್ತೇಜಿಸುತ್ತದೆ ಮತ್ತು ನಿರ್ಣಾಯಕ ಖನಿಜಗಳ ಮೇಲಿನ ಶ್ರೇಷ್ಠತೆಯ ಕೇಂದ್ರವನ್ನು ಸ್ಥಾಪಿಸಲು ಪ್ರಸ್ತಾಪಿಸುತ್ತದೆ. "ಇಡೀ ಸರ್ಕಾರದ ವಿಧಾನವನ್ನು ಅಳವಡಿಸಿಕೊಳ್ಳುವ ಮೂಲಕ, ಮಿಷನ್ ತನ್ನ ಉದ್ದೇಶಗಳನ್ನು ಸಾಧಿಸಲು ಸಂಬಂಧಿತ ಸಚಿವಾಲಯಗಳು, ಸಾರ್ವಜನಿಕ ಉದ್ದಿಮೆಗಳು, ಖಾಸಗಿ ಕಂಪನಿಗಳು ಮತ್ತು ಸಂಶೋಧನಾ ಸಂಸ್ಥೆಗಳೊಂದಿಗೆ ನಿಕಟವಾಗಿ ಕೆಲಸ ಮಾಡುತ್ತದೆ" ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ. ನಿರ್ಣಾಯಕ ಖನಿಜ ವಲಯದಲ್ಲಿ ಭಾರತದ ಸ್ವಾವಲಂಬನೆಗಾಗಿ ಪರಿಣಾಮಕಾರಿ ಚೌಕಟ್ಟನ್ನು ಸ್ಥಾಪಿಸುವ ಅವಶ್ಯಕತೆಯಿದೆ ಎಂದು ಹೇಳಿಕೆಯಲ್ಲಿ ಉಲ್ಲೇಖಿಸಲಾಗಿದೆ. "ಆತ್ಮನಿರ್ಭರ ಭಾರತ್ ಉಪಕ್ರಮದ ಭಾಗವಾಗಿ ಮತ್ತು ಹೈಟೆಕ್ ಕೈಗಾರಿಕೆಗಳು, ಶುದ್ಧ ಇಂಧನ ಮತ್ತು ರಕ್ಷಣೆಯಲ್ಲಿ ನಿರ್ಣಾಯಕ ಖನಿಜಗಳ ಅನಿವಾರ್ಯ ಪಾತ್ರವನ್ನು ಗುರುತಿಸಿ, ನಿರ್ಣಾಯಕ ಖನಿಜ ವಲಯದಲ್ಲಿನ ಸವಾಲುಗಳನ್ನು ಎದುರಿಸಲು ಕೇಂದ್ರ ಸರ್ಕಾರ ಕಳೆದ ಎರಡು ವರ್ಷಗಳಲ್ಲಿ ಹಲವಾರು ಉಪಕ್ರಮಗಳನ್ನು ಕೈಗೊಂಡಿದೆ" ಎಂದು ಅದು ಹೇಳಿದೆ.

# ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಸ್ಥಾನಕ್ಕೆ ಚುನಾವಣೆ ಖಚಿತ: ಭಿನ್ನರ ಕಸರತ್ತು

**ಬೆಂಗಳೂರು, ಜ.29–** ಕರ್ನಾಟಕ ಬಿಜೆಪಿ ಘಟಕದ ಬಣ ರಾಜಕೀಯದ ಆರೋಪ ಪ್ರತ್ಯಾರೋಪ ನಿರ್ಣಾಯಕ ಹಂತಕ್ಕೆ ಬಂದು ತಲುಪಿದೆ. ಮಧ್ಯಪ್ರವೇಶಿಸಲೇಬೇಕಾದ ಅನಿವಾರ್ಯತೆಗೆ ಬಿಜೆಪಿ ಹೈಕಮಾಂಡ್ ಸಿಲುಕಿರುವುದರಿಂದ, ರಾಜ್ಯ ಘಟಕದಲ್ಲಿ ಆಮೂಲಾಗ್ರ ಬದಲಾವಣೆಗೆ ತಂತ್ರಗಾರಿಕೆ ರೂಪಿಸಿದೆ.

ಈಗಾಗಲೇ, ರಾಜ್ಯ ಘಟಕದ ಅಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಡೆಯುವುದು ಬಹುತೇಕ ನಿಶ್ಚಿತಗೊಂಡಿದೆ. ಇದೇ ಸಮಯವನ್ನು ಬಳಸಿಕೊಂಡು, ಪ್ರಮುಖವಾಗಿ, ಎರಡು ಬಣಗಳ ನಡುವಿನ ಭಿನ್ನಮತಕ್ಕೆ ಶಾಶ್ವತ ಪರಿಹಾರ ಕಂಡುಕೊಳ್ಳಲು, ಮತ್ತೆರಡು ಪ್ರಮುಖ ವಿಷಯವನ್ನು ಕೈಗೆತ್ತಿಕೊಳ್ಳಲು ನಿರ್ಧರಿಸಿದೆ. ಬಿಜೆಪಿ ರಾಜ್ಯಾಧ್ಯಕ್ಷರ ಹುದ್ದೆಗೆ ಚುನಾವಣೆ ನಡೆದರೆ, ಸೋತ ಬಣಕ್ಕೆ ಹಿನ್ನಡೆಯಾ ಗುವುದು ಸಹಜ. ಅದಾದ ನಂತರ, ಮತ್ತೆ ಭಿನ್ನಮತೀಯ ಚಟುವಟಿಕೆಯಲ್ಲಿ ತೊಡಗಿಸಿಕೊಂಡರೆ ಎನ್ನುವ ಭೀತಿ, ಹೈಕಮಾಂಡಿಗೆ ಎದುರಾಗಿದೆ. ಹಾಗಾಗಿ, ಎರಡೂ ಬಣವನ್ನು ವಿಶ್ವಾಸಕ್ಕೆ ತೆಗೆದು ಕೊಂಡು ಹೋಗಲು ನಿರ್ಧರಿಸಿದೆ.

ರಾಧಾ ಮೋಹನ್ ದಾಸ್ ಅಗರ್ವಾಲ್ ಅವರ ಉಸ್ತುವಾರಿ ರಾಜ್ಯ ಬಿಜೆಪಿ ಘಟಕದಲ್ಲಿ ಅಷ್ಟೇನೂ ಪರಿಣಾಮವನ್ನು ಬೀರುತ್ತಿಲ್ಲ. ಜೊತೆಗೆ, ಕೆಲವು ದಿನಗಳ ಹಿಂದಿನ ಅವರ ಭೇಟಿ, ರಾಜ್ಯ ಬಿಜೆಪಿಯಲ್ಲಿ ಇನ್ನಷ್ಟು ರಂಪ ರಾಮಾಯಣವಾಗಲು ಕಾರಣವಾಯಿತು. ಜೊತೆಗೆ, ಯತ್ನಾಳ್ ಮತ್ತು ರಮೇಶ್ ಜಾರಕಿಹೊಳಿ, ಅವರನ್ನು ಬಹಿರಂಗವಾಗಿಯೇ ಪಕ್ಷಪಾತಿ ಎಂದು ದೂರಿದ್ದರು. ಹಾಗಾಗಿ, ಈ ಬಾರಿ ಕೇಂದ್ರ ಕೃಷಿ ಸಚಿವ ಮತ್ತು ಮೋದಿ ಕ್ಯಾಬಿನೆಟಿನ ಚಾಣಾಕ್ಷ ರಾಜಕಾರಣಿ ಎಂದು ಕರೆಯಲಾಗುವ ಶಿವರಾಜ್ಸಿಂಗ್ ಚವ್ಹಾಣ್ ಅವರನ್ನು ಸಂಧಾನ ಸೂತ್ರದ ಮೂಲಕ ಬೆಂಗಳೂರಿಗೆ ಕಳುಹಿಸಲು ನಿರ್ಧರಿಸಲಾಗಿದೆ ಎನ್ನುವ ಮಾಹಿತಿಯಿದೆ.

ರಾಜ್ಯಾಧ್ಯಕ್ಷರ ಬದಲಾವಣೆಯ ಜೊತೆಗೆ, ಕೋರ್ ಕಮಿಟಿ ಯಲ್ಲಿ ಬದಲಾವಣೆ ತರಲು ನಿರ್ಧರಿಸಲಾಗಿದೆ.ಅಧ್ಯಕ್ಷರ ಚುನಾವಣೆಯಲ್ಲಿ ಸೋಲುವ ಬಣದ ಪ್ರಮುಖರನ್ನೂ ಕೋರ್ ಕಮಿಟಿಯಲ್ಲಿ ಸೇರಿಸಲು ಬಿಜೆಪಿ ಹೈಕಮಾಂಡ್ ನಿರ್ಧರಿಸಿದೆ. ಅದರ ಪ್ರಕಾರ, ಬಸನಗೌಡ ಪಾಟೀಲ್ ಯತ್ನಾಳ್, ರಮೇಶ್ ಜಾರಕಿಹೊಳಿ, ವಿಜಯೇಂದ್ರ, ಆರ್.ಅಶೋಕ್ ಬಳಿ ಪ್ರತ್ಯೇಕವಾಗಿ ಚರ್ಚೆ ನಡೆಸುವಂತೆ, ಶಿವರಾಜ್ ಸಿಂಗ್ ಅವರಿಗೆ ಸೂಚಿಸುವ ಸಾಧ್ಯತೆಯಿದೆ. ಇದಲ್ಲದೇ, ಪದಾಧಿಕಾರಿಗಳ ಪಟ್ಟಿಯಲ್ಲೂ ಆಮೂಲಾಗ್ರ ಬದಲಾವಣೆ ತರಲು, ಹೈಕಮಾಂಡ್ ನಿರ್ಧರಿಸಿದೆ. ತಮಗೆ ಬೇಕಾದವರನ್ನು ಆಯ್ಕೆ ಮಾಡಲಾಗಿದೆ ಎನ್ನುವ ಆರೋಪವೂ ವಿಜಯೇಂದ್ರ ಅವರ ಮೇಲಿದೆ. ಹಾಗಾಗಿ, ಈ ವಿಚಾರದ ಮೂಲಕ ಮತ್ತೆ ತೊಂದರೆ ಬರುವುದು ಬೇಡವೆಂದು ಅದಕ್ಕೂ ಬದಲಾವಣೆ ತರಲು ನಿರ್ಧರಿಸಲಾಗಿದೆ ಎಂದು ಹೇಳಲಾಗುತ್ತಿದೆ. ಇತ್ತೀಚೆಗೆ ವಿಜಯೇಂದ್ರ ವಿರುದ್ಧ ಆಕ್ರೋಶ ಹೊರಹಾಕುತ್ತಿರುವ ಬಿ.ಶ್ರೀರಾಮುಲು ಜೊತೆ ಮಾತುಕತೆ ನಡೆಸಲು ಆರ್. ಅಶೋಕ್ ಗೆ ಸೂಚಿಸಲಾಗಿದೆ. ಇಲ್ಲಿ ಮನವೊಲಿಕೆಯ ನಂತರ, ನಡ್ಡಾ ಮತ್ತು ಅಮಿತ್ ಶಾ ಜೊತೆ ಮಾತುಕತೆ ನಡೆಸಲು ದೆಹಲಿಗೆ ಕಳುಹಿಸುವ ಸಾಧ್ಯತೆ ಕೇಳಿ ಬರುತ್ತಿದೆ.

ಒಟ್ಟಿನಲ್ಲಿ, ಬಿಜೆಪಿ ರಾಜ್ಯಾಧ್ಯಕ್ಷರ ಚುನಾವಣೆಯ ಜೊತೆಗೆ, ಕೋರ್ ಸಮಿತಿಯಲ್ಲಿ ಮತ್ತು ಪದಾಧಿಕಾರಿಗಳ ಬದಲಾವಣೆಯನ್ನು ಮಾಡುವ ಮೂಲಕ, ಬೇರಿನಿಂದಲೇ ಬಿಜೆಪಿ ಭಿನ್ನಮತ ಶಮನಕ್ಕೆ ಹೈಕಮಾಂಡ್ ಮುಂದಾಗಿದೆ. ಏನಾದರೂ ಮಾಡಿ, ಭಿನ್ನಮತವನ್ನು ಶಮನಗೊಳಿಸಿ ಎನ್ನುವುದು ಮೂಲ ಬಿಜೆಪಿ ಕಾರ್ಯಕರ್ತರ ನಿವೇದನೆಯಾಗಿದೆ.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,A/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

### ಕಂದಾಯ ನ್ಯಾಯಾಲಯಗಳಲ್ಲಿ ಸಮರಸಜ್ಜನಂತೆ ಪ್ರಕರಣಗಳ ವಿಲೇವಾರಿ

# ಹತ್ತಾರು ವರ್ಷಗಳಿಂದ ಬಾಕಿ ಇದ್ದ ಬಹುತೇಕ ಪ್ರಕರಣಗಳು ಒಂದೂವರೆ ವರ್ಷದಲ್ಲಿ ವಿಲೇವಾರಿ: ಕೃಷ್ಣ ಬೈರೇಗೌಡ

**ಬೆಂಗಳೂರು, ಜ. 29 :** 10 ವರ್ಷ, 5 ವರ್ಷ ಕ್ಕೂ ಅಧಿಕ ಅವಧಿಯಿಂದ ಬಾಕಿ ಇದ್ದ ಮುಕ್ಕಾಲು ಪ್ರಕರಣಗಳಿಗೆ ಒಂದೂವರೆ ವರ್ಷದಲ್ಲಿ ಮುಕ್ತಿ ಸಿಕ್ಕಿದೆ. ನಮ್ಮ ಸರ್ಕಾರ ಬಂದಾಗ 10 ಸಾವಿರಕ್ಕೂ ಮಿಕ್ಕಿ ಅವಧಿ ಮೀರಿದ ಪ್ರಕರಣಗಳು ಇದ್ದವು. ಈಗ ಕೇವಲ 369 ಪ್ರಕರಣಗಳು ಮಾತ್ರ ತಹಶೀಲ್ದಾರ್ ನ್ಯಾಯಾಲಯಗಳಲ್ಲಿವೆ ಎಂದು ಸಿಎಂ ಗೆ ದಾಖಲೆ ಸಮೇತ ಕಂದಾಯ ಸಚಿವ ಕೃಷ್ಣ ಬೈರೇಗೌಡ ವಿವರಿಸಿದರು. ಬರೀ ವಿಲೇವಾರಿ ಸಾಲದು ವಿಲೇವಾರಿ ಆದರೆ ಮಾತ್ರ ಮೇಲ್ಮನವಿಗಳಿಗೆ ಬ್ರೇಕ್ ಬೀಳುತ್ತದೆ. ಈ ದಿಕ್ಕಲ್ಲಿ ಹೆಚ್ಚಿನ ಗಮನಹರಿಸಿ ಎಂದು ಸಚಿವ ಕೃಷ್ಣಬೈರೇಗೌಡರಿಗೆ ಸಿಎಂ ಸೂಚನೆ ನೀಡಿದರು.



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕೃಷ್ಣಾದಲ್ಲಿ ನಡೆಸಿದ ಕಂದಾಯ ಇಲಾಖೆ ಪ್ರಗತಿ ಪರಿಶೀಲನಾ ಸಭೆಯ ಇತರೆ ಮುಖ್ಯಾಂಶಗಳು ಖಾತೆ ಬದಲಾವಣೆ ಪ್ರಕ್ರಿಯೆಯನ್ನು ಶೇ.65 ಪ್ರಕರಣಗಳಲ್ಲಿ ಒಂದು ದಿನದ ಒಳಗಾಗಿ ಮಾಡಲಾಗುತ್ತಿರುವುದು ಒಳ್ಳೆಯ ಸಂಗತಿ. ಆಟೋ ಮ್ಯುಟೇಶನ್ ಮೂಲಕ ಇದು ಸಾಧ್ಯವಾಗಿದೆ. ಭೂ ಪರಿವರ್ತನೆ ಸಂಪೂರ್ಣ ಪ್ರಕ್ರಿಯೆಯನ್ನು ಒಂದು ತಿಂಗಳ ಒಳಗಾಗಿ ಪೂರ್ಣಗೊಳಿಸಬೇಕು.

ಮಾಸ್ಟರ್ ಪ್ಲಾನ್ ಆದ ಕಡೆ ಮತ್ತೆ ಭೂ ಪರಿವರ್ತನೆ ಅಗತ್ಯವಿಲ್ಲ ಎಂದು ಕಾಯ್ದೆಗೆ ತಿದ್ದುಪಡಿ ಮಾಡಲಾಗಿದೆ. ಈ ಕುರಿತು ಆದೇಶವನ್ನು ಆದಷ್ಟು ಬೇಗನೆ ಹೊರಡಿಸಲು ಸಿಎಂ ಸೂಚನೆ ನಗರ ಪ್ರದೇಶಗಳಲ್ಲಿ ಮಾಸ್ಟರ್ ಪ್ಲಾನ್ ಕಾಲದಿಂದ ಕಾಲಕ್ಕೆ ನವೀಕರಿಸಬೇಕು. ಮ್ಯುಟೇಶನ್, ಭೂ ಪರಿವರ್ತನೆ ಪ್ರಕರಣಗಳಲ್ಲಿ ಜನಸಾಮಾನ್ಯರಿಗೆ ಯಾವುದೇ ಕಿರುಕುಳ, ಅನಗತ್ಯ ವಿಳಂಬವಾಗದಂತೆ ಎಚ್ಚರಿಕೆ ವಹಿಸಿ: ಅಧಿಕಾರಿಗಳಿಗೆ ಸಿಎಂ ಖಡಕ್ ಸೂಚನೆ ಆದಷ್ಟು ಬೇಗನೆ ಮಾಸ್ಟರ್‌ಪ್ಲಾನ್ ಸಿದ್ದಪಡಿಸಬೇಕು.

ಕಂದಾಯ ನ್ಯಾಯಾಲಯಗಳಲ್ಲಿ ಪ್ರಕರಣಗಳನ್ನು ಆದ್ಯತೆ ಮೇರೆಗೆ ವಿಲೇವಾರಿ ಮಾಡಬೇಕು. ವಿಳಂಬಕ್ಕೆ ಅವಕಾಶ ಇರಬಾರದು ತಹಶೀಲ್ದಾರ್ ನ್ಯಾಯಾಲಯಗಳಲ್ಲಿ 3ತಿಂಗಳ ಒಳಗಾಗಿ ಪ್ರಕರಣಗಳ ವಿಲೇವಾರಿ ಮಾಡಬೇಕು ನಮ್ಮ ಸರ್ಕಾರ ಬಂದಾಗ 10 ಸಾವಿರಕ್ಕೂ ಮಿಕ್ಕಿ ಅವಧಿ ಮೀರಿದ ಪ್ರಕರಣಗಳು ಇದ್ದವು. ಈಗ ಕೇವಲ 369 ಪ್ರಕರಣಗಳು ಮಾತ್ರ ತಹಶೀಲ್ದಾರ್ ನ್ಯಾಯಾಲಯಗಳಲ್ಲಿವೆ. ಪ್ರಕರಣಗಳ ವಿಲೇವಾರಿ ತ್ವರಿತಗೊಳಿಸುವ ಜತೆಗೆ ನ್ಯಾಯದಾನದ ಗುಣಮಟ್ಟ ಸಹ ಸುಧಾರಿಸಬೇಕು. ಆಅ ನ್ಯಾಯಾಲಯಗಳಲ್ಲಿ ಹತ್ತಾರು ವರ್ಷಗಳಿಂದ ಬಾಕಿ ಉಳಿದಿದ್ದ ಪ್ರಕರಣಗಳಲ್ಲಿ ಕೇವಲ ಒಂದು ವರ್ಷದಲ್ಲಿ ಶೇ.36ರಷ್ಟು ಪ್ರಕರಣಗಳ ವಿಲೇವಾರಿ ತಹಶೀಲ್ದಾರ್–ಆ ಕೋರ್ಟ್‌ಗಳಲ್ಲಿ ಪ್ರಕರಣಗಳು ಸಮರೋಪಾದಿಯಲ್ಲಿ ವಿಲೇವಾರಿ ಆಗುತ್ತಿದೆ. ಆದರೆ ಉಪ ವಿಭಾಗಾಧಿಕಾರಿ ನ್ಯಾಯಾಲಯಗಳಲ್ಲಿ ವಿಲೇವಾರಿ ವೇಗ ಕಡಿಮೆ ಇರುವುದನ್ನು ತಾಂತ್ರಿಕ ಕಾರಣಗಳ ಸಮೇತ ಸಚಿವ ಕೃಷ್ಣ ಬೈರೇಗೌಡರು ಸಿಎಂ ಗೆ ವಿವರಿಸಿದರು.

ಇದನ್ನು ಕಾಲಮಿತಿಯೊಳಗೆ ವಿಲೇವಾರಿ ಮಾಡಬೇಕು. ಉಪವಿಭಾಗಾಧಿಕಾರಿ ನ್ಯಾಯಾಲಯಗಳ ಕಾರ್ಯವೈಖರಿ ಸುಧಾರಿಸಬೇಕು. ಈ ಬಗ್ಗೆ ಉಪ ವಿಭಾಗಾಧಿಕಾರಿಗಳಿಗೆ ಕೊನೆಯ ಎಚ್ಚರಿಕೆ ಕೊಡಿ ಎಂದು ಸಿ.ಎಂ ಸೂಚಿಸಿದರು.

ಜಿಲ್ಲಾಧಿಕಾರಿ ನ್ಯಾಯಾಲಯಗಳಲ್ಲಿ 9947 ಒಂದು ವರ್ಷಕ್ಕೂ ಅಧಿಕ ಅವಧಿಯಿಂದ ಬಾಕಿಯಿತ್ತು. ಈಗ ಇದರ ಪ್ರಮಾಣ ಕೇವಲ 6 ಸಾವಿರಕ್ಕೆ ಇಳಿದಿದೆ. ಬೆಂಗಳೂರು ವ್ಯಾಪ್ತಿಯಲ್ಲಿ ಪ್ರಕರಣಗಳ ತ್ವರಿತ ವಿಲೇವಾರಿಗೆ 18 ವಿಶೇಷ ಉಪವಿಭಾಗಾಧಿಕಾರಿಗಳನ್ನು ನೇಮಕ ಮಾಡಲಾಗಿದೆ ಜಮೀನು ಖಾತೆಗೆ ಆಧಾರ್ ಸೀಡಿಂಗ್ ಮಾಡಲಾಗುತ್ತಿದೆ. ರಾಜ್ಯದಲ್ಲಿ ಇದುವರೆಗೆ 2.22 ಕೋಟಿ ಖಾತೆಗಳಿಗೆ ಆಧಾರ ಸೀಡಿಂಗ್ ಮಾಡಲಾಗಿದ್ದು, ಇದರಿಂದ ನಕಲಿ ದಾಖಲೆ ಸೃಷ್ಟಿಸುವುದನ್ನು ತಡೆಯಲು ಸಾಧ್ಯವಾಗಿದೆ. ಭೂ ಪರಿವರ್ತನೆಯಾಗದೆ ವಾಣಿಜ್ಯ ಉದ್ದೇಶಗಳಿಗೆ ಜಮೀನು ಬಳಕೆ ಪ್ರಕರಣಗಳನ್ನು ಪತ್ತೆ ಹಚ್ಚಲು ಇದರಿಂದ ಸಾಧ್ಯವಾಗಿದೆ.

ಅನಧಿಕೃತ ಬಡಾವಣೆಗಳಿಗೆ ಖಾತಾ ನೀಡುವುದನ್ನು ಸ್ಥಗಿತಗೊಳಿಸಲು ಈಗಾಗಲೇ ಸೂಚನೆ ನೀಡಿದ್ದೇವೆ. ಒಂದು ಅವಧಿಗೆ ಬಿ ಖಾತೆ ನೀಡುವ ಪ್ರಕ್ರಿಯೆ ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಿ, ಇನ್ನು ಮುಂದೆ ಅನಧಿಕೃತ ಬಡಾವಣೆಗಳು ತಲೆ ಎತ್ತದಂತೆ ನೋಡಿಕೊಳ್ಳಬೇಕು ಎನ್ನುವ ಸೂಚನೆ ನೀಡಿದರು. ರಾಜ್ಯದಲ್ಲಿ ಹಲವು ಪ್ರಕರಣಗಳಲ್ಲಿ ಜಮೀನುಗಳ ಖಾತೆ ಇನ್ನೂ ನಿಧನ ಹೊಂದಿದವರ ಹೆಸರಿನಲ್ಲಿಯೇ ಇದೆ. ಪೌತಿ ಖಾತೆ ಅಭಿಯಾನದ ಮೂಲಕ ಮಾಲಿಕರ ಹೆಸರಿಗೆ ಜಮೀನು ಮಾಡುವ ನೋಂದಣಿ ಮಾಡುವ ಕಾರ್ಯವನ್ನು ತ್ವರಿತಗೊಳಿಸಬೇಕು ಎನ್ನುವ ಸೂಚನೆ ನೀಡಿದರು.






## ಇಸ್ರೋ ಹೊಸ ಮೈಲಿಗಲ್ಲು : 100ನೇ ರಾಕೆಟ್ ಯಶಸ್ವಿ ಉಡಾವಣೆ

**ಶ್ರೀಹರಿಕೋಟಾ, ಜ. 29 :** ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ ಬುಧವಾರ ಬೆಳಗ್ಗೆ ಶ್ರೀಹರಿಕೋಟಾದ ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರದಿಂದ ತನ್ನ ಐತಿಹಾಸಿಕ 100ನೇ ರಾಕೆಟ್ ಯಶಸ್ವಿಯಾಗಿ ಉಡಾಯಿಸಿದೆ. ಎನ್.ವಿ.ಎಸ್–02 ಉಪಗ್ರಹದೊಂದಿಗೆ ಜಿಎಸ್‌ಎಲ್‌ವಿ–ಈ15 ಬೆಳಗ್ಗೆ 6.23ಕ್ಕೆ ಬಾಹ್ಯಾಕಾಶ ಕೇಂದ್ರದ ಎರಡನೇ ಉಡಾವಣಾ ಪ್ಯಾಡ್‌ನಿಂದ ನಭಕ್ಕೆ ಚಿಮ್ಮಿತು ಮತ್ತು 19 ನಿಮಿಷಗಳ ಉಪಗ್ರಹವನ್ನು ಉದ್ದೇಶಿಸಿದಂತೆ ಜಿಯೋಸಿಂಕ್ರೋನಸ್ ವರ್ಗಾವಣೆ ಕಕ್ಷೆಯಲ್ಲಿ ಇರಿಸಿದೆ. ಜಿಎಸ್‌ಎಲ್‌ವಿ – ಈ 15 ಮೂಲಕ ಎನ್.ವಿ.ಎಸ್–02 ಉಪಗ್ರಹವನ್ನು ನಿಖರವಾಗಿ ಉದ್ದೇಶಿತ ಕಕ್ಷೆಗೆ ಸೇರಿಸುವ ಮೂಲಕ ಈ ವರ್ಷದ ಮೊದಲ ಉಡಾವಣೆಯು



ಯಶಸ್ವಿಯಾಗಿ ನೆರವೇರಿದೆ ಎಂದು ಇಸ್ರೋದ ಬಾಹ್ಯಾಕಾಶ ಕೇಂದ್ರದಿಂದ ಘೋಷಿಸಲು ನನಗೆ ತುಂಬಾ ಸಂತೋಷವಾಗುತ್ತಿದೆ. ಇದು ನಮ್ಮ 100ನೇ ಉಡಾವಣೆಯಾಗಿದೆ. ನಮ್ಮ ಬಾಹ್ಯಾಕಾಶ ಪ್ರಯಾಣದ ಮಹತ್ವದ ಮೈಲಿಗಲ್ಲು ಎಂದು ಉಪಗ್ರಹ ಉಡಾವಣೆ ಬಳಿಕ ಇಸ್ರೋ ಅಧ್ಯಕ್ಷ ಡಾ. ವಿ. ನಾರಾಯಣನ್ ಹೇಳಿದ್ದಾರೆ.

ಇದುವರೆಗಿನ 100 ಉಡಾವಣೆಗಳಲ್ಲಿ ಇಸ್ರೋ 548 ಉಪಗ್ರಹಗಳನ್ನು ಕಕ್ಷೆಗೆ ಸೇರಿಸಿದೆ. ನಾವು 433 ವಿದೇಶಿ ಉಪಗ್ರಹಗಳಿಗೆ 23 ಟನ್ ಸೇರಿದಂತೆ ಒಟ್ಟು 120 ಟನ್ ಪೇಲೋಡ್ ಅನ್ನು ಕಕ್ಷೆಗೆ ತಲುಪಿಸಿದ್ದೇವೆ ಎಂದು ಈ ತಿಂಗಳ ಆರಂಭದಲ್ಲಿ ಇಸ್ರೋ ಉಸ್ತುವಾರಿ ವಹಿಸಿಕೊಂಡ ಡಾ. ನಾರಾಯಣನ್ ತಿಳಿಸಿದ್ದಾರೆ.

**ಎರಡು ರೀತಿಯ ಸೇವೆಗಳನ್ನು ಒದಗಿಸುತ್ತದೆ :** ಸ್ಟ್ಯಾಂಡರ್ಡ್ ಪೊಸಿಷನಿಂಗ್ ಸರ್ವಿಸ್ ಮತ್ತು ನಿರ್ಬಂಧಿತ ಸೇವೆ. **NavIC SPS** ಪ್ರಾಥಮಿಕ ಸೇವಾ ಪ್ರದೇಶದಲ್ಲಿ 20 ಮೀಟರ್ (2) ಗಿಂತ ಉತ್ತಮ ಸ್ಥಾನ ನಿಖರತೆ ಮತ್ತು 40 ನ್ಯಾನೊಸೆಕೆಂಡ್ (2) ಗಿಂತ ಉತ್ತಮ ಸಮಯದ ನಿಖರತೆಯನ್ನು ಒದಗಿಸುತ್ತದೆ. ಎರಡನೇ ತಲೆಮಾರಿನ ಉಪಗ್ರಹಗಳಲ್ಲಿ ಮೊದಲನೆಯದಾದ **NVS**–01 ಅನ್ನು ಮೇ 29, 2023 ರಂದು ಜಿಎಸ್‌ಎಲ್‌ವಿ–ಈ12 ನಲ್ಲಿ ಉಡಾವಣೆ ಮಾಡಲಾಗಿತ್ತು. ಮೊದಲ ಬಾರಿಗೆ, ಓಗಿಖ–01 ನಲ್ಲಿ ಸ್ಥಳೀಯ ಪರಮಾಣು ಗಡಿಯಾರವನ್ನು ಹಾರಿಸಲಾಗಿತ್ತು.

## ಮೀನುಗಾರಿಕಾ ಇಲಾಖೆ ವತಿಯಿಂದ ಎಲ್ಲಾ ಕೆರೆಗಳಿಗೆ ಮೀನು ಮರಿ ಬಿಡುವ ಕಾರ್ಯ

**ಬೆಂಗಳೂರು, ಜ. 29 :** ರಾಜ್ಯ ಸರ್ಕಾರವು ಕೆರೆಗಳಿಂದ ಆದಾಯ ಸಂಗ್ರಹಿಸಲು ಹೊಸ ಉಪಾಯವೊಂದನ್ನು ಮಾಡಿದೆ. ಈವರೆಗೆ ಜಲಮೂಲವಾಗಿದ್ದ ಕೆರೆಗಳನ್ನು ಆದಾಯದ ಮೂಲವಾಗಿ ಪರಿವರ್ತಿಸಲು ಸಿದ್ದರಾಮಯ್ಯ ಸರ್ಕಾರವು ಹೊಸ ಹೆಜ್ಜೆಯೊಂದನ್ನು ಇಟ್ಟಿದೆ. ಈ ಬಗ್ಗೆ ಸಿಎಂ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಕೃಷ್ಣಾದಲ್ಲಿ ನಡೆದ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರದ ಸಭೆಯಲ್ಲಿ ಮಾಹಿತಿ ನೀಡಿದ್ದಾರೆ.

ರಾಜ್ಯದಲ್ಲಿರುವ ಎಲ್ಲ ಕೆರೆಗಳಿಂದ ಆದಾಯ ಸಂಗ್ರಹಿಸಲು ಯೋಜನೆ ರೂಪಿಸಿರುವ ಸರ್ಕಾರವು ಕೆರೆಗಳಿಗೆ ಮೀನು ಮರಿಗಳನ್ನು ಬಿಡಲು ಮುಂದಾಗಿದೆ. ಮೀನುಗಾರಿಕಾ ಇಲಾಖೆ ವತಿಯಿಂದ ಎಲ್ಲ ಕೆರೆಗಳಿಗೆ ಮೀನು ಮರಿಗಳನ್ನು ಬಿಡುವ ಕಾರ್ಯ ಮಾಡಿದರೆ, ಆದಾಯ ಗಳಿಸಲು ಸಾಧ್ಯವಿದೆ ಎಂದು ಸಿದ್ದರಾಮಯ್ಯ ಹೇಳಿದ್ದಾರೆ. ರಾಜ್ಯದಲ್ಲಿ ಒಟ್ಟು 40,998 ಕೆರೆಗಳಿದ್ದು,



ಇವುಗಳ ಪೈಕಿ ಗ್ರಾಮೀಣಾಭಿವೃದ್ಧಿ ಇಲಾಖೆ ವ್ಯಾಪ್ತಿಯಲ್ಲಿ 26,365 ಕೆರೆಗಳು, ಸಣ್ಣ ನೀರಾವರಿಯಲ್ಲಿ 3,247, ಬಿಬಿಎಂಪಿ ವ್ಯಾಪ್ತಿಯಲ್ಲಿ 117 ಕೆರೆಗಳಿವೆ. ರಾಜ್ಯದಲ್ಲಿ 30 ಸಾವಿರ ಕೆರೆಗಳ ಸರ್ವೇ ಕಾರ್ಯವನ್ನು ಕಂದಾಯ ಇಲಾಖೆ ಈಗಾಗಲೇ ಪೂರ್ಣಗೊಳಿಸಿದೆ.

ಉಳಿದಿರುವ 10,754 ಕೆರೆಗಳ ಸಮೀಕ್ಷೆ ಕಾರ್ಯವನ್ನು ಆರು ತಿಂಗಳ ಒಳಗಾಗಿ ಪೂರ್ಣಗೊಳಿಸಬೇಕು ಎಂದು ಗಡುವು ನೀಡಿದ್ದಾರೆ.ಕೆರೆ ಒತ್ತುವರಿ ತೆರವು ಕಾರ್ಯ ಬಾಕಿಯಿರುವ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಲಾಗುವುದು. ಮಳೆಗಾಲದ ಒಳಗಾಗಿ ಕೆರೆ ಒತ್ತುವರಿಯನ್ನು ತೆರವುಗೊಳಿಸಿ, ಕೆರೆಗಳನ್ನು ಅಭಿವೃದ್ಧಿಪಡಿಸಲು ಕ್ರಮ ಕೈಗೊಳ್ಳಬೇಕು. ಕೆರೆಗಳ ಸಂರಕ್ಷಣೆ ಕಾರ್ಯವನ್ನು ನರೇಗಾ ಅಡಿಯಲ್ಲಿ ದೊಡ್ಡ ಪ್ರಮಾಣದಲ್ಲಿ ಕೈಗೆತ್ತಿಕೊಳ್ಳಬೇಕು ಎಂದು ಸೂಚನೆ ನೀಡಿದ್ದಾರೆ.

ಮೀನುಗಾರಿಕಾ ಇಲಾಖೆ ವತಿಯಿಂದ ಎಲ್ಲ ಕೆರೆಗಳಿಗೆ ಮೀನು ಮರಿಗಳನ್ನು ಬಿಡುವ ಕಾರ್ಯ ಮಾಡಿದರೆ ಆದಾಯ ಗಳಿಸಲು ಸಾಧ್ಯವಿದೆ. ನಗರ ಪ್ರದೇಶದ ಕೆರೆಗಳು ಮಾತ್ರವಲ್ಲದೆ, ರಾಜ್ಯದ ಎಲ್ಲ ಕೆರೆಗಳ ಮಾಲಿನ್ಯದ ಮಟ್ಟವನ್ನು ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧಿಕಾರಿಗಳು ಪರಿಶೀಲಿಸಿ ನಿಯಮಿತವಾಗಿ ವರದಿ ಸಲ್ಲಿಸಬೇಕು ಎಂದು ಸಿಎಂ ಸಿದ್ದರಾಮಯ್ಯ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಭೂ ದಾಖಲೆಗಳ ರಕ್ಷಣೆಗೆ ವಂಚಕರಿಂದ ದುರುಪಯೋಗ ಆಗದಂತೆ ಹಾಗೂ ದಾಖಲೆ ತಿದ್ದಲು ಅವಕಾಶ ಆಗದಂತೆ "ಭೂ ಸುರಕ್ಷಾ" ಪರಿಣಾಮಕಾರಿಯಾಗಿ ಜಾರಿಯಾಗಬೇಕು ಎಂದೂ ಸಿ.ಎಂ ಸೂಚನೆ ನೀಡಿದ್ದಾರೆ. ಕಂದಾಯ ಇಲಾಖೆಯಡಿ ಈಗಾಗಲೇ 8 ಕೋಟಿ ಮೂಲ ದಾಖಲೆಗಳ ಕಂಪ್ಯೂಟರೀಕರಣ ನಡೆದಿದೆ. ಖದೀಮರು ತಿದ್ದಲು ಅವಕಾಶ ಆಗದಂತೆ ದಾಖಲೆಗಳಿಗೆ ಡಿಜಿಟಲ್ ಭದ್ರತೆ ಒದಗಿಸಲಾಗಿದೆ ಎಂದು ಸಚಿವ ಕೃಷ್ಣ ಬೈರೇಗೌಡ ಅವರು ಸಿಎಂ ಗಮನಕ್ಕೆ ತಂದಿದ್ದಾರೆ. ಇಲಾಖೆಯಲ್ಲಿ ತಂತ್ರಾಂಶವನ್ನು ಸಮರ್ಪಕವಾಗಿ ಬಳಸಿಕೊಳ್ಳುವ ಮೂಲಕ ಕಂದಾಯ ವ್ಯವಸ್ಥೆಯಲ್ಲಿ ಸುಧಾರಣಾ ಕಾರ್ಯ ಕೈಗೊಳ್ಳಲಾಗಿದೆ. ನಕ್ಷಾ ಯೋಜನೆ ಮೂಲಕ ನಗರ ಪ್ರದೇಶದಲ್ಲಿ ಡ್ರೋನ್ ಸರ್ವೆ ಮೂಲಕ ಪ್ರಾಪರ್ಟಿ ಕಾರ್ಡ್ ನೀಡುತ್ತಿದ್ದೇವೆ. 21 ಜಿಲ್ಲೆಗಳಲ್ಲಿ ಡ್ರೋನ್ ಮೂಲಕ ಸರ್ವೇ ಕಾರ್ಯವನ್ನು ಕೈಗೊಳ್ಳಲಾಗಿದೆ. ಉಳಿದ ಜಿಲ್ಲೆಗಳಲ್ಲೂ ಡ್ರೋನ್ ಸರ್ವೆ ಆರಂಭಿಸಿ ಎಂದು ಸಿದ್ದರಾಮಯ್ಯ ಸೂಚನೆ ನೀಡಿದ್ದಾರೆ.

## ತುಮಕೂರು 2ನೇ ಅಂ.ರಾ. ವಿಮಾನ ನಿಲ್ದಾಣ: 12 ಜಿಲ್ಲೆಗಳಿಗೆ ಅನುಕೂಲ

**ಬೆಂಗಳೂರು, ಜ. 29 :** ಬೆಂಗಳೂರಿನಲ್ಲಿ ರಾಜ್ಯ ಸರ್ಕಾರ ಹೊಸದಾಗಿ ಎರಡನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಿಸುವ ಯೋಜನೆಗೆ ಕೈ ಹಾಕಿದೆ. ಇದಾಗುತ್ತಿದ್ದಂತೆ ಎಲ್ಲಿ ನಿರ್ಮಿಸಬೇಕು ಎಂಬುದು ಅಂತಿಮವಾಗಿಲ್ಲ. ತುಮಕೂರು ಬಳಿ ನಿರ್ಮಿಸುವಂತೆ ಒತ್ತಡ ಹೆಚ್ಚಾಗುತ್ತಿದೆ. ಒಂದು ವೇಳೆ ತುಮಕೂರು ಸಮೀಪ ಬೆಂಗಳೂರು ಎರಡನೇ ವಿಮಾನ ನಿರ್ಮಾಣವಾದರೆ ಬರೋಬ್ಬರಿ 21 ಜಿಲ್ಲೆಗಳಿಗೆ ಅನುಕೂಲವಾಗಲಿದೆ ಎಂದು ಸ್ವತಃ ಗೃಹ ಸಚಿವ ಜಿ.ಪರಮೇಶ್ವರ ಅವರೇ ಹೇಳಿದ್ದಾರೆ.




ಸದಾಶಿವನಗರದಲ್ಲಿ ಬುಧವಾರ ಸುದ್ದಿಗಾರರ ಜೊತೆಗೆ ವಿಮಾನ ನಿಲ್ದಾಣ, ಮೈಕ್ರೋ ಫೈನಾನ್ಸ್ ಸೇರಿ ಕೆಲವು ಪ್ರಶ್ನೆಗಳಿಗೆ ಉತ್ತರಿಸಿದರು. ಈ ವೇಳೆ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಬಗ್ಗೆ ಪ್ರತಿಕ್ರಿಯಿಸಿ, ಹೊಸ ಏರ್ಪೋರ್ಟ್ ತುಮಕೂರಿಗೆ ನೀಡುವಂತೆ ಕೇಳುತ್ತಿದ್ದೇವೆ. ತುಮಕೂರಿನ ಭಾಗದಲ್ಲಿ ನಿರ್ಮಾಣವಾದರೆ ಉತ್ತರ ಕರ್ನಾಟಕ ಭಾಗದ 21 ಜಿಲ್ಲೆಗಳಿಗೂ ಅನುಕೂಲವಾಗಲಿದೆ. ಈಗಿರುವ ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕು ಸಂಪರ್ಕವಾಗುತ್ತದೆ ಎಂದು ತಿಳಿಸಿದರು.ತುಮಕೂರುವರೆಗೆ ಮೆಟ್ರೋ ಯೋಜನೆ ಸಮಗ್ರ ಯೋಜನಾ ವರದಿ (ಡಿಪಿಆರ್) ಇನ್ನು ಅಂತಿಮವಾಗಿಲ್ಲ. ಹೈದರಾಬಾದ್ ಕಂಪನಿಗೆ ನೀಡಲಾಗಿದೆ. ಡಿಪಿಆರ್ ವರದಿ ನೀಡಿಲ್ಲ. ವರದಿ ನೀಡಿದ ನಂತರ ತೀರ್ಮಾನ ತೆಗೆದುಕೊಳ್ಳುತ್ತೇವೆ. ತದನಂತರ ಕೇಂದ್ರ ಸರ್ಕಾರದ ಅನುಮತಿ ಕೇಳುತ್ತೇವೆ ಎಂದು ಅವರು ವಿವರಿಸಿದರು.

ಮೈಕ್ರೋಫೈನಾನ್ಸ್ ಸಂಸ್ಥೆಗಳು ದೌರ್ಜನ್ಯ, ತೊಂದರೆ ನೀಡುತ್ತಿರುವ ಕುರಿತು ಪೊಲೀಸರಿಗೆ ದೂರು ನೀಡಿದರೆ ತಕ್ಷಣ ಕ್ರಮ ಕೈಗೊಳ್ಳಲಿದ್ದಾರೆ. ದೂರು ಬಂದ ಕೂಡಲೇ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಲಾಗಿದೆ. ಸುಮೋಟೊ ದಾಖಲಿಸುವಂತೆಯೂ ತಿಳಿಸಲಾಗಿದೆ ಎಂದರು.

ಮೈಕ್ರೋಫೈನಾನ್ಸ್ ಸಂಸ್ಥೆಗಳು ದೌರ್ಜನ್ಯ, ತೊಂದರೆ ನೀಡುತ್ತಿರುವ ಕುರಿತು ಪೊಲೀಸರಿಗೆ ದೂರು ನೀಡಿದರೆ ತಕ್ಷಣ ಕ್ರಮ ಕೈಗೊಳ್ಳಲಿದ್ದಾರೆ ಎಂದರು.ಮೈಕ್ರೋ ಫೈನಾನ್ಸ್ ಸಂಸ್ಥೆಗಳು ಸಾರ್ವಜನಿಕರಿಗೆ ತೊಂದರೆ ನೀಡುತ್ತಿರುವುದನ್ನು ತಡೆಯಲು ಕಾನೂನು ರೂಪಿಸಲಾಗುತ್ತಿದೆ. ಕಾನೂನು ಸಚಿವರು ಹಾಗೂ ಕಂದಾಯ ಸಚಿವರೊಂದಿಗೆ ಸಭೆ ಕರೆಯಲಾಗಿದೆ. ಜಿಲ್ಲಾಧಿಕಾರಿಗಳಿಗೆ ಹೆಚ್ಚಿನ ಅಧಿಕಾರ ನೀಡಬೇಕು ಎಂಬ ನಿಟ್ಟಿನಲ್ಲಿ ಕಾನೂನು ರೂಪಿಸಲಾಗುತ್ತಿದೆ. ಸಹಾಯವಾಣಿಯನ್ನು ಆರಂಭಿಸಲಾಗುವುದು. ಸಭೆಯಲ್ಲಿ ಅಂತಿಮವಾದರೆ ಮುಂದಿನ ಸಚಿವ ಸಂಪುಟ ಸಭೆ ಮುಂದೆ ತರುತ್ತೇವೆ ಎಂದು ಹೇಳಿದರು.

ಮುಖ್ಯಮಂತ್ರಿ ನೇಮಕ ಮಾಡುವುದು ಕಾಂಗ್ರೆಸ್ ಹೈಕಮಾಂಡ್. ಶಾಸಕರ ಅಭಿಪ್ರಾಯ ಕೇಳಬೇಕಿಲ್ಲ ಎಂದು ರಾಮನಗರ ಶಾಸಕರ ಹೇಳಿಕೆ ನೀಡಿದ್ದಾರೆ. ಹೈಕಮಾಂಡ್ ಸೂಚನೆ ಶಾಸಕರಿಗೆ ಅನ್ವಯವಾಗುವುದಿಲ್ಲವೇ ಎಂಬ ಪ್ರಶ್ನೆಗೆ ಉತ್ತರಿಸಿ, ಹೈಕಮಾಂಡ್ ಸೂಚನೆ ಶಾಸಕರಿಗು ಮತ್ತು ಮಂತ್ರಿಗಳಿಗು ಎಲ್ಲರಿಗೂ ಅನ್ವಯಯಾವಗುತ್ತದೆ. ಪಕ್ಷದಲ್ಲಿ ಯಾರು ಆ ರೀತಿ ಹೇಳಿಕೆ ಕೊಡಬಾರದು ಎಂದು ಹೈಕಮಾಂಡ್ ಸೂಚಿಸಿದ ಮೇಲೆ ಎಲ್ಲರಿಗೂ ಅನ್ವಯವಾಗುತ್ತದೆ. ಹೈಕಮಾಂಡ್ ಮತ್ತು ಶಾಸಕರು ಆಯ್ಕೆ ಮಾಡುತ್ತಾರೆ. ಮೊದಲು ಶಾಸಕರ ಅಭಿಪ್ರಾಯ ಪಡೆಯುತ್ತಾರೆ. ಆನಂತರ ಅವರು ತೀರ್ಮಾನ ಮಾಡುತ್ತಾರೆ. ಬೆಂಬಲ ಸೇರಿದಂತೆ ಬೇರೆಬೇರೆ ವಿಚಾರಗಳನ್ನು ಆಧರಿಸಿ ಪ್ರಕಟಿಸುತ್ತಾರೆ ಎಂದು ತಿಳಿಸಿದರು.

## ಪರಿಶಿಷ್ಟ ಜಾತಿ ಅಲೆಮಾರಿ, ವಿಮುಕ್ತ ಬುಡಕಟ್ಟು ಗುಂಪುಗಳಿಗೆ ಶೇ.4 ರಷ್ಟು ಮೀಸಲಾತಿಗೆ ಮನವಿ



**ಬೆಂಗಳೂರು, ಜ, 29 ;** ಪರಿಶಿಷ್ಟ ಜಾತಿ ಅಲೆಮಾರಿ, ವಿಮುಕ್ತ ಬುಡಕಟ್ಟು ಗುಂಪುಗಳಿಗೆ ಒಳಮೀಸಲಾತಿಯಲ್ಲಿ ಕನಿಷ್ಟ ಶೇ 4 ರಷ್ಟು ಮೀಸಲಾತಿ ಕಲ್ಪಿಸುವಂತೆ ಮತ್ತು ವಿವಿಧ 12 ಬೇಡಿಕೆಗಳನ್ನು ಒಳಗೊಂಡ ಮತ್ತು ಪರಿಶೀಲನಾರ್ಹ ವೈಜ್ಞಾನಿಕ ದತ್ತಾಂಶಗಳನ್ನು ಕ್ರೋಡೀಕರಿಸಿ ಮೀಸಲಾತಿ ಕುರಿತು ಸರ್ಕಾರಕ್ಕೆ ಶಿಫಾರಸ್ಸು ಮಾಡುವಂತೆ ನ್ಯಾ. ಎಚ್.ಎನ್. ನಾಗಮೋಹನ್‌ದಾಸ್ ನೇತೃತ್ವದ ಏಕಸದಸ್ಯ ವಿಚಾರಣಾ ಆಯೋಗಕ್ಕೆ ಕರ್ನಾಟಕ ಪ.ಜಾ ಮತ್ತು ಪ.ವ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಪಲ್ಲವಿ .ಜಿ ಇಂದು ವಿಸ್ತೃತ ಮನವಿ ಸಲ್ಲಿಸಿದರು.

ನಗರದಲ್ಲಿಂದು ನ್ಯಾ. ನಾಗಮೋಹನ್‌ದಾಸ್ ಅವರನ್ನು ಭೇಟಿ ಮಾಡಿ ಒಳ ಮೀಸಲಾತಿ ಕುರಿತು ವಿಸ್ತೃತ ಸಮಾಲೋಚನೆ ನಡೆಸಿತು.

ಸಾರ್ವಜನಿಕ ಶಿಕ್ಷಣ ಮತ್ತು ಉದ್ಯೋಗದಲ್ಲಿ ಪರಿಶಿಷ್ಟ ಜಾತಿಗಳಲ್ಲಿ ವಿವಿಧ ಸಮುದಾಯಗಳ ಪ್ರಾತಿನಿಧ್ಯದ ಕುರಿತು ಪರಿಶೀಲನಾರ್ಹ ದಾಖಲೆಗಳು ಹಾಗೂ ದತ್ತಾಂಶಗಳನ್ನು ಸಂಗ್ರಹಿಸಿ, ಒಟ್ಟುಗೂಡಿಸಿ ಆಂತರಿಕ ಮೀಸಲಾತಿ ಅನುಷ್ಠಾನ ಕುರಿತು ನಡೆಸುತ್ತಿರುವ ಪರಿಶೀಲನೆಯಲ್ಲಿ ವಾಸ್ತಾವಂಶಗಳಿಗೆ ಹೆಚ್ಚಿನ ಆದ್ಯತೆ ನೀಡಬೇಕು. ಶೋಷಿತರಾಗಿಯೇ ಬದುಕುತ್ತಿರುವ ಅಲೆಮಾರಿಗಳು, ಸಾಮಾಜಿಕ ಕಳಂಕಕ್ಕೆ ಒಳಗಾಗಿರುವ ವಿಮುಕ್ತ ಬುಡಕಟ್ಟುಗಳು (ಡಿಎನ್‌ಟಿ) ಮತ್ತು ಸೂಕ್ಷ್ಮ ಸಮುದಾಯಗಳು ಮೀಸಲಾತಿ ರುಚಿಯನ್ನೇ ಸವಿಯದ ಜಾತಿಗಳಾಗಿವೆ. ಅಲ್ಪಸಂಖ್ಯಾತ, ಅಸಂಘಟಿತ, ಸಮುದಾಯಗಳಿಗೆ ಭೂಮಿ, ವಸತಿ, ಮೂಲಭೂತ ಸೌಕರ್ಯ ಹಾಗೂ ವಿಶೇಷ ಕಾರ್ಯಕ್ರಮಗಳನ್ನು ರೂಪಿಸಿ ಆರ್ಥಿಕ ಸೌಲಭ್ಯಗಳನ್ನು ಒದಗಿಸಿ ಸಮಾಜದ ಮುಖ್ಯವಾಹಿನಿಗೆ ತರಲು ಒಳಮೀಸಲಾತಿ ಅತ್ಯುತ್ತಮ ಮಾರ್ಗವಾಗಿದೆ. ಇಂತಹ ಸಮುದಾಯಗಳಿಗೆ ಸಾಮಾಜಿಕ ನ್ಯಾಯದಡಿಯಲ್ಲಿ ಸಂವಿಧಾನ ಬದ್ದವಾಗಿ ಅವಕಾಶಗಳನ್ನು ಕಲ್ಪಿಸಲು ಇತ್ತೀಚಿನ ಸರ್ವೋಚ್ಚ ನ್ಯಾಯಾಲಯದ ಒಳವರ್ಗೀಕರಣದ ತೀರ್ಪು ಅತ್ಯಂತ ಮಹತ್ವಪೂರ್ಣದ್ದಾಗಿದೆ.

ಪರಿಶಿಷ್ಟ ಜಾತಿಯಲ್ಲಿನ 101 ಸಮುದಾಯಗಳಿಗೆ ಸರ್ಕಾರ ಗುರುತಿಸಿರುವ ಅಲೆಮಾರಿತನದ ಹಿನ್ನೆಲೆಯುಳ್ಳ ಪರಿಶಿಷ್ಟ ಜಾತಿಯ 51 ಸಮುದಾಯಗಳು ನೆಲೆ ಮತ್ತು ನೆಲದ ಒಡೆತನವಿಲ್ಲದೇ, ಒಂದೆಡೆ ನೆಲೆ ನಿಲ್ಲಲಾಗದ ಸ್ಥಿತಿಯಲ್ಲಿವೆ. 2011 ಜನಗಣತಿ 14 ವರ್ಷಗಳ ಹಿಂದಿನದ್ದಾಗಿದ್ದು, ಇದೀಗ ಇರುವ ಅಂಕಿಅಂಶಗಳ ನಡುವೆ ಅಜಗಜಾಂತರ ವ್ಯತ್ಯಾಸವಿದೆ. ಹಾಗಾಗಿ ಜನಸಂಖ್ಯೆಯನ್ನು ಮಾನದಂಡವಾಗಿ ಪರಿಗಣಿಸದೆ ಹಿಂದುಳಿದಿರುವಿಕೆಯೇ ಪ್ರಧಾನ ಮಾನದಂಡವನ್ನಾಗಿಸಿ ಪರಿಶಿಷ್ಟ ಜಾತಿಯಲ್ಲಿರುವ ಅವಕಾಶ ವಂಚಿತರಿಗೆ ಮೀಸಲಾಗಿಗಾಗಿ ಶಿಫಾರಸ್ಸು ಮಾಡಬೇಕು. ಸರ್ವೋಚ್ಚ ನ್ಯಾಯಾಲಯದ ತೀರ್ಪಿನಲ್ಲಿಯು ಸಮುದಾಯಗಳ ಇದನ್ನೇ ಹೇಳುದ್ದು, ಒಳ ವರ್ಗೀಕರಣ ಶಿಕ್ಷಣ ಮತ್ತು ಉದ್ಯೋಗಕ್ಕೆ ಮಾತ್ರ ಸೀಮಿತಗೊಳಿಸದೇ ರಾಜಕೀಯ, ಸಹಕಾರ ಮತ್ತು ಸ್ಥಳೀಯ ಸಂಸ್ಥೆಯ ಚುನಾವಣೆಗಳಿಗೂ ಒಳಮೀಸಲಾತಿಯನ್ನು ವಿಸ್ತರಿಸಿ ನೇಮಕಾತಿ, ಸೀಟು ಹಂಚಿಕೆ ಹಾಗೂ ಬಡ್ತಿಯಲ್ಲಿ ರೋಸ್ಟರ್ ವ್ಯವಸ್ಥೆಯನ್ನು ಅಳವಡಿಸಿ, ಬ್ಯಾಕ್‌ಲಾಗ್, ಹೊರ ಸಂಪನ್ಮೂಲ ನೇಮಕಾತಿ, ಕೇಂದ್ರ ಮತ್ತು ರಾಜ್ಯ ಸರ್ಕಾರದ ನೇಮಕಾತಿ ಮತ್ತು ಶೈಕ್ಷಣಿಕ ಪ್ರವೇಶಾತಿಗಳಿಗೂ ಒಳಗೊಂಡಂತೆ ವರ್ಗಾಧಾರಿತ ಪುನರಾವರ್ತನೆ, ಆವರ್ತ ಬ್ಯಾಕ್‌ಲಾಗ್ ನಿಯಮಗಳನ್ನು ಅನ್ವಯ ಆಗುವಂತೆ ನೀತಿ ರೂಪಿಸಲು ಶಿಫಾರಸ್ಸು ಮಾಡಬೇಕು ಎಂದು ಕೋರಿದೆ.

ನಿಯೋಗದಲ್ಲಿ ವ್ಯವಸ್ಥಾಪಕ ನಿರ್ದೇಶಕ ಮಲ್ಲಿಕಾರ್ಜುನ ಮತ್ತು ವಿಶೇಷ ಕರ್ತವ್ಯಾಧಿಕಾರಿ ಬಿ.ಎಸ್. ಆನಂದ್ ಕುಮಾರ್ ಏಕಲವ್ಯ ಮತ್ತಿತರರು ಇದ್ದರು.

# ಬಿವೈವಿ ವಿರುದ್ಧ ಸುಧಾಕರ್ ಕಿಡಿ

**ಬೆಂಗಳೂರು, ಜ, 29;** ರಾಜ್ಯ ಬಿಜೆಪಿಯಲ್ಲಿ ಮತ್ತೆ ಭಿನ್ನಮತ ಸ್ಫೋಟಗೊಂಡಿದ್ದು, ಒಬ್ಬರಾದ ಮೇಲೆ ಒಬ್ಬರು ಬಹಿರಂಗವಾಗಿಯೇ ರಾಜ್ಯಾಧ್ಯಕ್ಷ ವಿಜಯೇಂದ್ರ ವಿರುದ್ಧ ವಾಗ್ದಾಳಿ ನಡೆಸುತ್ತಿದ್ದಾರೆ. ಬಿಜೆಪಿ ಹಿರಿಯ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್, ಮಾಜಿ ಸಚಿವರಾದ ರಮೇಶ್ ಜಾರಕಿಹೊಳಿ, ಹಾಗೂ ಶ್ರೀರಾಮುಲು ನಂತರ ಇದೀಗ ವಿಜಯೇಂದ್ರ ವಿರುದ್ಧ ಮತ್ತೊಬ್ಬ ಮಾಜಿ ಸಚಿವ ಹಾಗೂ ಹಾಲಿ ಸಂಸದ ಡಾ. ಕೆ. ಸುಧಾಕರ್ ಅವರು ಬಹಿರಂಗವಾಗಿಯೇ ಗುಡುಗಿದ್ದಾರೆ.



ಚಿಕ್ಕಬಳ್ಳಾಪುರ ಬಿಜೆಪಿ ಜಿಲ್ಲಾಧ್ಯಕ್ಷರಾಗಿ ಸಂದೀಪ್ ಅವರನ್ನು ಆಯ್ಕೆ ಮಾಡಿರುವುದರಿಂದ ಸಿಡಿದೆದ್ದಿರುವ ಸುಧಾಕರ್ ಇಂದು ಬೆಂಗಳೂರಿನಲ್ಲಿ ಸುದ್ದಿಗೋಷ್ಠಿಯಲ್ಲಿ ಬಹಿರಂಗವಾಗಿ ವಿಜಯೇಂದ್ರ ವಿರುದ್ಧ ವಾಗ್ದಾಳಿ ನಡೆಸಿದರು. ಜಿಲ್ಲಾಧ್ಯಕ್ಷರ ನೇಮಕದಲ್ಲಿ ವಿಜಯೇಂದ್ರ ಅವರು ಏಕಪಕ್ಷೀಯ ನಿರ್ಧಾರ ಕೈಗೊಂಡಿದ್ದಾರೆ ಎಂದ ಆರೋಪಿಸಿದ ಚಿಕ್ಕಬಳ್ಳಾಪುರ ಬಿಜೆಪಿ ಸಂಸದ ಸುಧಾಕರ್ ಅವರು, ರಾಜ್ಯಾಧ್ಯಕ್ಷ ಸ್ಥಾನದಿಂದ ವಿಜಯೇಂದ್ರ ಅವರನ್ನು ಕೆಳಗಿಳಿಸಬೇಕು ಎಂದು ಆಗ್ರಹಿಸಿದ್ದಾರೆ. ನಿಮ್ಮ ನಾಯಕತ್ವದಲ್ಲಿ ಕೋಲಾರ, ಚಿಕ್ಕಬಳ್ಳಾಪುರದಲ್ಲಿ ಒಂದು ಸೀಟು ಗೆಲ್ಲಿ ನೋಡೋಣ ಎಂದು ಕೆ. ಸುಧಾಕರ್ ಅವರು ವಿಜಯೇಂದ್ರ ಅವರಿಗೆ ಬಹಿರಂಗ ಸವಾಲು ಹಾಕಿದ್ದಾರೆ.

ತಮಗೆ ಬೇಕಾದವರಿಗೆ ಅಧ್ಯಕ್ಷ, ರಾಜ್ಯ ಕಾರ್ಯದರ್ಶಿ, ರಾಜ್ಯ ಪ್ರಧಾನ ಕಾರ್ಯದರ್ಶಿ, ರಾಜ್ಯ ಉಪಾಧ್ಯಕ್ಷರನ್ನು ಮಾಡಿಕೊಂಡಿದ್ದಾರೆ. ಇವತ್ತಿನ ರಾಜ್ಯಾಧ್ಯಕ್ಷ ಮಿಸ್ಟರ್ ಬಿ.ವೈ. ವಿಜಯೇಂದ್ರ ಅವರ ಧೋರಣೆ ಬೇಸರ ತಂದಿದೆ ಎಂದು ಅಸಮಾಧಾನ ಹೊರಹಾಕಿದರು. ಬಿಜೆಪಿಯನ್ನು ನಂಬಿ ಇಲ್ಲಿ ಆಂತರಿಕ ಪ್ರಜಾಪ್ರಭುತ್ವ, ಆರ್‌ಎಸ್‌ಎಸ್ ಆದರ್ಶ ಇದೆ ಎಂದು ಪಕ್ಷದ ತತ್ವ ಸಿದ್ದಾಂತ ಒಪ್ಪಿ ಚಿಕ್ಕಬಳ್ಳಾಪುರದಿಂದ ಸ್ಪರ್ಧೆ ಮಾಡಿದೆ.

ಬಿಜೆಪಿಗೆ ಮರಳು ಭೂಮಿಯಂತಿದ್ದ ಚಿಕ್ಕಬಳ್ಳಾಪುರದಲ್ಲಿ ನನ್ನ ರಾಜಕೀಯ ಭವಿಷ್ಯವನ್ನು ಒತ್ತೆ ಇಟ್ಟು ಬಿಜೆಪಿ ಸೇರಿದ್ದೆ.

**ವಿಜಯೇಂದ್ರ ದ್ವೇಷದ ರಾಜಕಾರಣ ಮಾಡುತ್ತಿದ್ದಾರೆ. ಬಿಎಸ್ ವೈ ಅವರ ಯಾವ ಗುಣ ವಿಜಯೇಂದ್ರ ಬಳಿ ಇಲ್ಲ.ಕೇವಲ ಹಠ, ದ್ವೇಷದ ರಾಜಕಾರಣ ಮಾಡುತ್ತಿದ್ದಾರೆ. ಬಿ.ವೈ. ವಿಜಯೇಂದ್ರ ರಾಜಕೀಯವಾಗಿ ನನ್ನ ಸಮಾಧಿ ಮಾಡಲು ಹೊರಟಿದ್ದಾರೆ ಎಂದು ಬಿ.ವೈ. ವಿಜಯೇಂದ್ರ ವಿರುದ್ಧ ಚಿಕ್ಕಬಳ್ಳಾಪುರ ಸಂಸದ ಡಾ.ಕೆ ಸುಧಾಕರ್ ಆಕ್ರೋಶ ಅವರ ಹಾಕಿದರು. ವರಿಷ್ಠರನ್ನು ಭೇಟಿಯಾಗಿ ನಿಮ್ಮ ಎಲ್ಲಾ ವ್ಯವಹಾರ ಗಮನಕ್ಕೆ ತರುತ್ತೇನೆ. ಬೊಮ್ಮಾಯಿ ಜೊತೆಗೆ ಚೆನ್ನಾಗಿ ಕೆಲಸ ಮಾಡಿದ್ದೇವೆ ಎಂದು ನಮ್ಮ ಮೇಲೆ ದ್ವೇಷವೇ.? ವಿಜಯೇಂದ್ರ ಮಾಜಿ ಸಿಎಂ ಯಡಿಯೂರಪ್ಪನವರ ಮಗ ಆಗಿರಬಹುದು, ಆದರೆ ಬಿಎಸ್‌ವೈಗೆ ಹೋಲಿಕೆ ಮಾಡಲು ಸಾಧ್ಯವೇ ಇಲ್ಲ. ವಿಜಯೇಂದ್ರ ಹಿಂಬಾಲಕರು ನನ್ನನ್ನು ಸೋಲಿಸಲು ಪ್ರಯತ್ನ ಪಟ್ಟರು. ಇವರದ್ದು ದ್ವೇಷದ ರಾಜಕಾರಣ ಎಂದು ಕಿಡಿಕಾರಿದರು.**

ಯಡಿಯೂರಪ್ಪನವರನ್ನು ಸಿಎಂ ಮಾಡಬೇಕು ಎಂದು 17 ಜನ ಬಿಜೆಪಿಗೆ ಬಂದೆವು. ಯಡಿಯೂರಪ್ಪ ನವರು ರಾಜೀನಾಮೆ ಕೊಟ್ಟ ಮೇಲೆ ಬೊಮ್ಮಾಯಿ ಅವರ ಜೊತೆ ಕೂಡಾ ಅಷ್ಟೇ ವಿಶ್ವಾಸದಿಂದ ಕೆಲಸ ಮಾಡಿದ್ದೇನೆ. ಅಂತಿಮವಾಗಿ ನನಗೆ ಬಿಜೆಪಿ ತತ್ವ ಸಿದ್ಧಾಂತ ಅಷ್ಟೇ ಮುಖ್ಯ. ಪಕ್ಷ ಏನು ಹೇಳಿದೆಯೋ ಅದನ್ನು ಮಾಡಿಕೊಂಡು ಬಂದಿದ್ದೇನೆ. ಒಂದು ಬಾರಿ ನನಗೆ ಚಿಕ್ಕಬಳ್ಳಾಪುರದಲ್ಲಿ ಆಘಾತ ಆಯಿತು. ಇವತ್ತು ಪಕ್ಷ ಕಟ್ಟುತ್ತೇವೆ ಎಂದು ಹೊರಟಿದ್ದವರು ಟಾರ್ಗೆಟ್ ಮಾಡಿ ಸೋಲಿಸಲು ಪ್ರಯತ್ನ ಮಾಡಿದರು ಎಂದು ಪರೋಕ್ಷವಾಗಿ ವಿಜಯೇಂದ್ರ ವಿರುದ್ಧ ವಾಗ್ದಾಳಿ ನಡೆಸಿದರು.

# ಮೌನಿ ಅಮಾವಾಸ್ಯೆಯಂದು 5 ಕೋಟಿಗೂ ಹೆಚ್ಚು ಯಾತ್ರಿಕರ ಪವಿತ್ರಸ್ನಾನ



**ಪ್ರಯಾಗರಾಜ್, ಜ. 29 :** ಬುಧವಾರ ಇಲ್ಲಿ ಮೌನಿ ಅಮಾವಾಸ್ಯೆಯ ಸಂದರ್ಭದಲ್ಲಿ ಮಹಾ ಕುಂಭದ ಸಮಯದಲ್ಲಿ ಸಂತರು, ಋಷಿಗಳು, ಭಕ್ತರು ಮತ್ತು ಕಲ್ಪವಾಸಿಗಳು ಸೇರಿದಂತೆ ಐದು ಕೋಟಿಗೂ ಹೆಚ್ಚು ಯಾತ್ರಿಕರು ಗಂಗಾ, ಯಮುನಾ ಮತ್ತು ಅತೀಂದ್ರಿಯ ಸರಸ್ವತಿಯ ಸಂಗಮದಲ್ಲಿ ಪವಿತ್ರ ಸ್ನಾನ ಮಾಡಿದರು. 10 ಲಕ್ಷಕ್ಕೂ ಹೆಚ್ಚು ಕಲ್ಪವಾಸಿಗಳು ಸೇರಿದಂತೆ 5.04 ಕ್ಕೂ ಹೆಚ್ಚು ಭಕ್ತರು ಮೌನಿ ಅಮಾವಾಸ್ಯೆಯ ಶುಭ ಸಂದರ್ಭದಲ್ಲಿ ಸಂಗಮ ಮತ್ತು ಇತರ ದಂಡೆಗಳಲ್ಲಿ ಸ್ನಾನ ಮಾಡಿದರು ಎಂದು ಅಧಿಕೃತ ವಕ್ತಾರರು ತಿಳಿಸಿದ್ದಾರೆ. "ಜನವರಿ 13 ರಂದು ಮಹಾ ಕುಂಭ ಪ್ರಾರಂಭವಾದಾಗಿನಿಂದ ಇಲ್ಲಿಯವರೆಗೆ 19.94 ಕೋಟಿ ಭಕ್ತರು ಪವಿತ್ರ ಸ್ನಾನ ಮಾಡಿದ್ದಾರೆ" ಎಂದು ಅವರು ಹೇಳಿದರು.

ಮೌನಿ ಅಮಾವಾಸ್ಯೆಯಂದು 10 ಕೋಟಿಗೂ ಹೆಚ್ಚು ಜನರು ಪವಿತ್ರ ಸ್ನಾನ ಮಾಡುವ ನಿರೀಕ್ಷೆಯಿದೆ ಎಂದು ಉಲ್ಲೇಖಿಸಬಹುದು. ಮಹಾ ಕುಂಭಕ್ಕೆ ಸ್ವಾಗತಿಸಲು ಸ್ನಾನ ಮಾಡುತ್ತಿದ್ದ ಭಕ್ತರ ಮೇಲೆ ಹೂವಿನ ದಳಗಳನ್ನು ಸುರಿಸಲಾಯಿತು. ಆರಂಭದಲ್ಲಿ ಕಾಲ್ತುಳಿತದ ಕಾರಣ ರದ್ದಾದ 13 ಅಖಾರಗಳ ಅಮೃತ ಸ್ನಾನವು ಮಧ್ಯಾಹ್ನದ ನಂತರ ಮತ್ತೆ ಆರಂಭವಾಯಿತು, ನಾಗಾ ಸಾಧುಗಳು ಅಧಿಕಾರ ವಹಿಸಿಕೊಂಡರು. ಜಾತ್ರೆಯ ಪ್ರದೇಶದಲ್ಲಿ ಅತಿಯಾದ ಜನಸಂದಣಿ ಮತ್ತು ಕಾಲ್ತುಳಿತದಂತಹ ಅಹಿತಕರ ಸಂದರ್ಭಗಳಿಂದಾಗಿ ಅಖಾರಗಳ ಅಮೃತ ಸ್ನಾನವು ವಿಳಂಬವಾಯಿತು. ಅಖಿಲ ಭಾರತ ಅಖಾಡ ಪರಿಷತ್ ಮತ್ತು ಹರಿದ್ವಾರ ಮೂಲದ ಮಾನಸ ದೇವಿ ದೇವಾಲಯ ಟ್ರಸ್ಟ್‌ನ ಅಧ್ಯಕ್ಷ ಮಹಾಂತ್ ರವೀಂದ್ರ ಪುರಿ ಹೇಳಿದರು, "ಎಲ್ಲಾ ಅಖಾರಗಳು ಸ್ನಾನ ಮಾಡುವುದು ನಮ್ಮ ಪ್ರಯತ್ನವಾಗಿದೆ. ನಾವು ನಮ್ಮ ಜನರ ಸಂಖ್ಯೆಯನ್ನು ಕಡಿಮೆ ಮಾಡುತ್ತೇವೆ."

ಮೌನಿ ಅಮಾವಾಸ್ಯೆಯಂದು ಮಹಾನಿರ್ವಾಣಿ ಅಖಾರವು ಮೊದಲು ಸ್ನಾನ ಮಾಡುತ್ತದೆ. ಈ ಬಾರಿ ಎಲ್ಲಾ ಅಖಾರಗಳ ಅಮೃತ ಸ್ನಾನದ ಕಾರ್ಯಕ್ರಮವನ್ನು ಒಂದು ಗಂಟೆ ಮುಂಚಿತವಾಗಿ ಮುಂದೂಡಲಾಯಿತು. ಮಹಾನಿರ್ವಾಣಿ ಮತ್ತು ಅಟಲ್ 4 ಗಂಟೆಗೆ ಶಿಬಿರದಿಂದ ಹೊರಟು ಸಂಜೆ 5.40 ಕ್ಕೆ ಘಾಟ್ ಖಾಲಿ ಮಾಡಬೇಕಾಯಿತು.

ಇಂದಿಗೂ, ಎರಡೂ ಅಖಾರಗಳು ಅಮೃತ ಸ್ನಾನಕ್ಕೆ ಹೊರಟಿದ್ದವು ಆದರೆ ಆಡಳಿತದ ಕೋರಿಕೆಯ ಮೇರೆಗೆ ತಮ್ಮ ಶಿಬಿರಕ್ಕೆ ಮರಳಿದವು. ಅವರ ದೇವರು ಮತ್ತು ಕೆಲವು ಮಹಾಮಂಡಲೇಶ್ವರರು ಮುಂದೆ ಹೋದರು ಎಂದು ಅವರು ಹೇಳಿದರು. ಸ್ನಾನಕ್ಕೆ ಹೋದ ನಂತರ ದೇವತೆಗಳು ಹಿಂತಿರುಗುವುದಿಲ್ಲ, ಅವರಿಗೆ ಭದ್ರತೆ ಒದಗಿಸಲಾಗುತ್ತದೆ ಮತ್ತು ಸ್ನಾನ ಮಾಡಲು ಅವಕಾಶ ನೀಡಲಾಗುತ್ತದೆ.

ಮೌನಿ ಅಮಾವಾಸ್ಯೆ ಮಾಘ ಮಾಸದ ಅತಿದೊಡ್ಡ ಸ್ನಾನೋತ್ಸವ ಎಂದು ಅಧಿಕೃತ ಮೂಲಗಳು ತಿಳಿಸಿವೆ. ಸ್ನಾನದ ಅನುಕ್ರಮವು ಮಧ್ಯರಾತ್ರಿಯಿಂದ ನಿರಂತರವಾಗಿ ನಡೆಯುತ್ತಿದೆ. ವೇದ ಸಂಶೋಧನಾ ಸಂಸ್ಥೆ ಮತ್ತು ಧಾರ್ಮಿಕ ತರಬೇತಿ ಕೇಂದ್ರದ ಮಾಜಿ ಆಚಾರ್ಯ ಡಾ. ಆತ್ಮರಾಮ್ ಗೌತಮ್ ಅವರು ಮೌನಿ ಅಮಾವಾಸ್ಯೆಯಂದು ಅಮೃತ ಯೋಗದ ಅಪರೂಪದ ಕಾಕತಾಳೀಯತೆ ರೂಪುಗೊಳ್ಳುತ್ತಿದೆ ಎಂದು ಹೇಳಿದರು. ಪವಿತ್ರ ಸಮಯದಲ್ಲಿ ಮೌನವಾಗಿ ಸ್ನಾನ ಮಾಡುವುದರಿಂದ ಭಕ್ತರು ಬಯಸಿದ ಫಲಿತಾಂಶವನ್ನು ಪಡೆಯುತ್ತಾರೆ. ಕೃಷ್ಣ ಪಕ್ಷದ ಅಮಾವಾಸ್ಯೆ ದಿನಾಂಕವು ಜನವರಿ 28 ರಂದು ಸಂಜೆ 7:10 ರಿಂದ ಜನವರಿ 29 ರಂದು ಸಂಜೆ 6:27 ರವರೆಗೆ ಇರುತ್ತದೆ. ಸೂರ್ಯ, ಚಂದ್ರ ಮತ್ತು ಬುಧ ಮಕರ ರಾಶಿಯಲ್ಲಿ ಸಾಗುತ್ತಾರೆ. ಗುರು ವೃಷಭ ರಾಶಿಯಲ್ಲಿರುತ್ತಾರೆ, ಇದರಿಂದಾಗಿ ಅಮೃತ ಯೋಗವು ರೂಪುಗೊಳ್ಳುತ್ತದೆ. ಶ್ರಾವಣ ನಕ್ಷತ್ರವು ಬೆಳಗ್ಗೆ 8:40 ರಿಂದ ಪ್ರಾರಂಭವಾಯಿತು, ಇದು ತುಂಬಾ ಪ್ರಯೋಜನಕಾರಿಯಾಗಿದೆ.

ಮಹಾ ಕುಂಭದಲ್ಲಿ ಅತ್ಯಂತ ಮುಖ್ಯವಾದದ್ದು ಮೌನಿ ಅಮಾವಾಸ್ಯೆ, ಇದರಲ್ಲಿ ಭಕ್ತರು ಅಮೃತವನ್ನು ಪಡೆಯಲು ತ್ರಿವೇಣಿಯಲ್ಲಿ ಸ್ನಾನ ಮಾಡುತ್ತಾರೆ. ಈ ಬಾರಿ ಅದೇ ಸ್ನಾನೋತ್ಸವದಂದು ಗುರು ವೃಷಭ ರಾಶಿಯಲ್ಲಿ ಸಾಗುತ್ತಿದ್ದು, ಅಮೃತ ಯೋಗವು ರೂಪುಗೊಳ್ಳುವುದು ಬಹಳ ಅಪರೂಪ. ಸ್ನಾನ ಮಾಡುವಾಗ ಮೌನವಾಗಿರುವುದು ಅವಶ್ಯಕ. ಈ ಸಂದರ್ಭದಲ್ಲಿ ಪೂರ್ವಜರಿಗೆ ತರ್ಪಣ ಮತ್ತು ಪಿಂಡದಾನವನ್ನು ಸಹ ಮಾಡಲಾಗುತ್ತದೆ ಎಂದು ಗೌತಮ ಹೇಳಿದರು.

## ಮನೆಗೆಲಸದವರ ಹಕ್ಕುಗಳ ರಕ್ಷಣೆ: ಕಾಯ್ದೆ ರೂಪಿಸಲು ಕೇಂದ್ರಕ್ಕೆ ಸುಪ್ರೀಂ ಸೂಚನೆ



**ನವದೆಹಲಿ, ಜ. 29 :** ಮನೆಗೆಲಸದವರ ಹಕ್ಕುಗಳನ್ನು ರಕ್ಷಿಸಲು ಸಮಗ್ರ ಕಾಯಿದೆ ರೂಪಿಸುವಂತೆ ಕೇಂದ್ರ ಸರ್ಕಾರಕ್ಕೆ ಸುಪ್ರೀಂ ಕೋರ್ಟ್ ಬುಧವಾರ ಸೂಚಿಸಿದೆ. ಮನೆಗೆಲಸದವರ ಹಕ್ಕುಗಳ ರಕ್ಷಣೆಗಾಗಿ ಸಮಗ್ರ ಕಾನೂನು ರೂಪಿಸುವ ಸಾಧ್ಯತೆ ಪರಿಶೀಲಿಸುವ ಸಂಬಂಧ ಸಮಿತಿ ರಚಿಸುವಂತೆ ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯ ಹಾಗೂ ಸಂಬಂಧಪಟ್ಟ ಸಚಿವಾಲಯಗಳಿಗೆ ನ್ಯಾ. ಸೂರ್ಯಕಾಂತ್ ಮತ್ತು ಎನ್ ಕೋಟೀಶ್ವರ್ ಸಿಂಗ್ ಅವರಿದ್ದ ಪೀಠ ಆದೇಶಿಸಿದೆ.

ಮನೆ ಮಾಲೀಕನೊಬ್ಬ ಮನೆಗೆಲಸದಾಕೆಗೆ ಕೆಲಸ ತೊರೆಯದಂತೆ ನಿರ್ಬಂಧ ವಿಧಿಸಿದ ಹಿನ್ನೆಲೆಯಲ್ಲಿ ಆತನ ವಿರುದ್ಧ ದಾಖಲಾಗಿದ್ದ ಕ್ರಿಮಿನಲ್ ಮೊಕದ್ದಮೆ ರದ್ದುಗೊಳಿಸಿದ ನ್ಯಾಯಾಲಯ ಈ ಆದೇಶ ನೀಡಿದೆ.

ಮನೆ ಮಾಲೀಕನ ವಿರುದ್ಧ ಐಪಿಸಿ ಸೆಕ್ಷನ್ 370 (ಮಾನವ ಕಳ್ಳಸಾಗಣೆ), 343 (ಅಕ್ರಮ ಬಂಧನ) ಮತ್ತು 120 ಬಿ (ಕ್ರಿಮಿನಲ್ ಪಿತೂರಿ) ಅಡಿ ಪ್ರಕರಣ ದಾಖಲಿಸಲಾಗಿತ್ತು. ಮನೆಗೆಲಸದಾಕೆ ಮತ್ತು ಆಕೆಯನ್ನು ಕೆಲಸಕ್ಕೆ ನಿಯೋಜಿಸಿದ್ದ ಏಜೆನ್ಸಿಯಲ್ಲಿ ಕೆಲಸ ಮಾಡುವ ವ್ಯಕ್ತಿಗಳ ನಡುವೆ ಜಗಳ ಉಂಟಾದ ಬಳಿಕ ಪೊಲೀಸರು ತನ್ನನ್ನು ಸುಳ್ಳೇ ಬಂಧಿಸಿದ್ದಾರೆ ಎಂದು ಆತ ದೂರಿದ್ದರು. ಏಜೆನ್ಸಿಯಲ್ಲಿ ಕೆಲಸ ಮಾಡುವವರ ಮೇಲೂ ಅತ್ಯಾಚಾರದ ಆರೋಪವನ್ನು ಮನೆಗೆಲಸದಾಕೆ ಹೊರಿಸಿದ್ದಳು.

ತನ್ನ ವಿರುದ್ಧದ ಕ್ರಿಮಿನಲ್ ಮೊಕದ್ದಮೆ ರದ್ದುಗೊಳಿಸುವಂತೆ 2018 ರಲ್ಲಿ ಮನೆ ಮಾಲೀಕ ಉತ್ತರಾಖಂಡ ಹೈಕೋರ್ಟ್ ಮೊರೆ ಹೋಗಿದ್ದರು. ಪ್ರಕರಣ ಈಗಾಗಲೇ ರಾಜಿ ಸಂಧಾನದ ಮೂಲಕ ಇತ್ಯರ್ಥಗೊಂಡಿದೆ ಎಂದು ಆತ ತಿಳಿಸಿದ್ದರು. ಆತನ ಮನವಿಗೆ ಮನೆಗೆಲಸದಾಕೆಯೂ ಬೆಂಬಲಿಸಿದ್ದರು.

ಮತ್ತೊಬ್ಬ ಕೆಲಸದಾಕೆಯನ್ನು ಹುಡುಕಿಕೊಡುವವರೆಗೂ ಕೆಲಸ ಬಿಡುವಂತಿಲ್ಲ ಎಂದು ಮಾಲೀಕ ಆದರೆ 2016ರಿಂದಲೂ ತನ್ನನ್ನು ಕೆಲಸ ತೊರೆಯದಂತೆ ನಿರ್ಬಂಧಿಸಿದ್ದರು ಎಂಬುದಾಗಿ ಮನೆಗೆಲಸದ ಮಹಿಳೆ ಪೊಲೀಸರಿಗೆ ನೀಡಿದ ಹೇಳಿಕೆಯನ್ನು ಆಧರಿಸಿ ಹೈಕೋರ್ಟ್ ಆರೋಪಿಯ ಮನವಿಯನ್ನು ವಜಾಗೊಳಿಸಿತ್ತು.

ಅಂತಹ ಕೃತ್ಯಗಳು ಐಪಿಸಿ ಸೆಕ್ಷನ್ 370ರ ಅಡಿಯಲ್ಲಿ ಬರಲಿದ್ದು ಇದು ರಾಜಿ ಸಂಧಾನದ ಮೂಲಕ ಇತ್ಯರ್ಥಪಡಿಸಿಕೊಳ್ಳುವಂತಹ ಪ್ರಕರಣವಲ್ಲ ಎಂದಿತ್ತು. ಹೀಗಾಗಿ ಮನೆ ಮಾಲೀಕ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದರು. ಇಂದು ಆತನ ವಿರುದ್ಧದ ಪ್ರಕರಣವನ್ನು ನ್ಯಾಯಾಲಯ ರದ್ದುಗೊಳಿಸಿದೆ.

## ಸಿಎಂ ಆತಿಶಿಗೆ ಜಾರಿಯಾಗಿದ್ದ ಸಮನ್ಸ್ ರದ್ದು



**ನವದೆಹಲಿ, ಜ. 29:** ಬಿಜೆಪಿ ನಾಯಕ ಪ್ರವೀಣ್ ಶಂಕರ್ ಕಪೂರ್ ಸಲ್ಲಿಸಿದ್ದ ಮಾನನಷ್ಟ ಮೊಕದ್ದಮೆಯಲ್ಲಿ ಮುಖ್ಯಮಂತ್ರಿ ಆತಿಶಿ ಅವರಿಗೆ ನೀಡಲಾಗಿದ್ದ ಸಮನ್ಸ್ ಅನ್ನು ದೆಹಲಿ ನ್ಯಾಯಾಲಯ ಮಂಗಳವಾರ ರದ್ದುಗೊಳಿಸಿದೆ. ಪಕ್ಷ ಬದಲಾಯಿಸಲು ಬಿಜೆಪಿಯು ತನಗೆ ಮತ್ತು ತಮ್ಮ ಪಕ್ಷದ ಶಾಸಕರಿಗೆ ಹಣ ನೀಡುವ ಮೂಲಕ ಪುಸಲಾಯಿಸಲು ಪ್ರಯತ್ನಿಸಿದೆ ಎಂದು ಅವರು ಆತಿಶಿ ಆರೋಪಿಸಿದ್ದರು, ಇದರ ನಂತರ ಏಪ್ರಿಲ್‌ನಲ್ಲಿ ಬಿಜೆಪಿ ಅವರ ವಿರುದ್ಧ ಮೊಕದ್ದಮೆ ಹೂಡಿತ್ತು.

ಮಾನನಷ್ಟ ಮೊಕದ್ದಮೆ

ಮೇ ತಿಂಗಳಲ್ಲಿ ಮುಖ್ಯ ಮೆಟ್ರೋಪಾಲಿಟನ್ ಮ್ಯಾಜಿಸ್ಟ್ರೇಟ್ ಆತಿಶಿ ಅವರಿಗೆ ಸಮನ್ಸ್ ಜಾರಿ ಮಾಡುವಂತೆ ನಿರ್ದೇಶಿಸಿತ್ತು. ಈ ಆದೇಶವನ್ನು ರೂಸ್ ಅವೆನ್ಯೂ ನ್ಯಾಯಾಲಯದ ವಿಶೇಷ ನ್ಯಾಯಾಧೀಶ ವಿಶಾಲ್ ಗೋಗ್ನೆ ರದ್ದುಗೊಳಿಸಿದ್ದಾರೆ. ಮಂಗಳವಾರ, ಗೋಗ್ನೆ ಸಮನ್ಸ್ ರದ್ದುಗೊಳಿಸುವ ಪ್ರಮುಖ ತತ್ವ ಎಂದು ವಾಕ್ ಸ್ವಾತಂತ್ರ್ಯವನ್ನು ಉಲ್ಲೇಖಿಸಿದ್ದಾರೆ. ಇದು ಒಂದು ಪ್ರಮುಖ ತತ್ವವಾಗಿ ವಾಕ್ ಸ್ವಾತಂತ್ರ್ಯವಾಗಿದೆ. ದೂರುದಾರರ ವ್ಯಾಖ್ಯಾನವನ್ನು ಒಪ್ಪಿಕೊಂಡರೆ, ಭಾರತದ ಪ್ರತಿಯೊಂದು ರಾಜಕೀಯ ಪಕ್ಷದ ಬಹುತೇಕ ಎಲ್ಲಾ ಉನ್ನತ ನಾಯಕರು ಮಾನನಷ್ಟ ಮೊಕದ್ದಮೆಗೆ ಗುರಿಯಾಗುತ್ತಾರೆ ಎಂದು ನ್ಯಾಯಾಧೀಶರು ಹೇಳಿದ್ದಾರೆ. ದೆಹಲಿಯಲ್ಲಿ ವಿಧಾನಸಭಾ ಚುನಾವಣಾ ಪ್ರಚಾರದ ಮಧ್ಯೆ ಇದು ನಡೆದಿದ್ದು, ರಾಷ್ಟ್ರ ರಾಜಧಾನಿಯಲ್ಲಿ ಫೆಬ್ರವರಿ 5 ರಂದು ಮತದಾನ ನಡೆಯಲಿದ್ದು, ಫೆಬ್ರವರಿ 8 ರಂದು ಮತಗಳ ಎಣಿಕೆ ನಡೆಯಲಿದೆ.

ಬಿಜೆಪಿಯು ತಮ್ಮ ಪಕ್ಷದ ಶಾಸಕರನ್ನು ಬೇಟೆಯಾಡಲು ಮತ್ತು ಸರ್ಕಾರವನ್ನು ಉರುಳಿಸಲು ಪ್ರಯತ್ನಿಸುತ್ತಿದೆ ಎಂದು ಎಎಪಿ ಮಾಡಿದ ಆರೋಪಗಳಿಗೆ ಸಂಬಂಧಿಸಿದಂತೆ ಬಿಜೆಪಿ ನಾಯಕ ಕಪೂರ್ ಏಪ್ರಿಲ್‌ನಲ್ಲಿ ಆತಿಶಿ ಮತ್ತು ಆಮ್ ಆದ್ಮಿ ಪಕ್ಷದ ಮುಖ್ಯಸ್ಥ ಅರವಿಂದ್ ಕೇಜ್ರಿವಾಲ್ ವಿರುದ್ಧ ಮಾನನಷ್ಟ ಮೊಕದ್ದಮೆ ಹೂಡಿದ್ದರು. ದೆಹಲಿ ಬಿಜೆಪಿಯ ಮಾಧ್ಯಮ ವಿಭಾಗದ ಮುಖ್ಯಸ್ಥರಾಗಿರುವ ಕಪೂರ್ ಈ ಬಗ್ಗೆ ಪ್ರತಿಕ್ರಿಯಿಸಿ, ಈ ಆರೋಪಗಳು ಸುಳ್ಳಾಗಿದ್ದು, ಎಎಪಿ ತನ್ನ ಪ್ರತಿಪಾದನೆಯನ್ನು ಬೆಂಬಲಿಸಲು ಯಾವುದೇ ಪುರಾವೆಗಳನ್ನು ನೀಡಿಲ್ಲ ಎಂದು ಹೇಳಿಕೊಂಡರು.

ಇದೇ 27, 2024 ರಂದು ಕೇಜ್ರಿವಾಲ್ ಮಾಡಿದ ಟ್ವೀಟ್ ಅನ್ನು ಉಲ್ಲೇಖಿಸಿದ್ದರು. ಅದರಲ್ಲಿ, ದೆಹಲಿಯ ಆಡಳಿತ ಪಕ್ಷವನ್ನು ತೊರೆದು ರಾಷ್ಟ್ರ ರಾಜಧಾನಿಯಲ್ಲಿ ಸರ್ಕಾರವನ್ನು ಉರುಳಿಸಲು ಬಿಜೆಪಿಯು ಆಮ್ ಆದ್ಮಿ ಪಕ್ಷದ ಏಳು ಶಾಸಕರಿಗೆ ತಲಾ 25 ಕೋಟಿ ರೂ.ಗಳ ಆಮಿಷ ನೀಡಿದೆ ಎಂದು ಆರೋಪಿಸಿದ್ದರು. ಆ ಸಮಯದಲ್ಲಿ ಸಚಿವರಾಗಿದ್ದ ಆತಿಶಿ , ಅದೇ ದಿನ ದೆಹಲಿಯಲ್ಲಿ ಬಿಜೆಪಿ ಆಪರೇಷನ್ ಕಮಲ 2.0 ಅನ್ನು ಪ್ರಾರಂಭಿಸಿದೆ ಎಂದು ಆರೋಪಿಸಿದ್ದರು.

## ರೀಲ್ಸ್ ಮಾಡುತ್ತಿದ್ದ ವೈದ್ಯರು: ಹೃದಯಾಘಾತದಿಂದ ಮಹಿಳೆ ಸಾವು




**ನವದೆಹಲಿ, ಜ. 29:** ಉತ್ತರ ಪ್ರದೇಶದ ಮೈನ್ಪುರಿಯ ಆಸ್ಪತ್ರೆಯಲ್ಲಿ ಕರ್ತವ್ಯದಲ್ಲಿದ್ದ ವೈದ್ಯರು ತಮ್ಮ ಮೊಬೈಲ್ ಫೋನ್‌ನಲ್ಲಿ ಇನ್ಸ್ಟಾಗ್ರಾಮ್ ರೀಲ್‌ಗಳನ್ನು ವೀಕ್ಷಿಸುತ್ತಿದ್ದಾಗ 60 ವರ್ಷದ ಮಹಿಳೆಯೊಬ್ಬರು ಹೃದಯಾಘಾತದಿಂದ ಸಾವನ್ನಪ್ಪಿದ್ದಾರೆ ಎಂದು ವರದಿಯಾಗಿದೆ. ಜಿಲ್ಲೆಯ ಮಹಾರಾಜ ತೇಜ್ ಸಿಂಗ್ ಜಿಲ್ಲಾ ಆಸ್ಪತ್ರೆಯಲ್ಲಿ ಮಂಗಳವಾರ ನಡೆದ ಈ ಘಟನೆಯು ರೋಗಿಯ ಕುಟುಂಬ ಸದಸ್ಯರಲ್ಲಿ ಆಕ್ರೋಶವನ್ನು ಹುಟ್ಟುಹಾಕಿದ್ದು, ಇಡೀ ಘಟನೆ ಸಿಸಿಟಿವಿಯಲ್ಲಿ ದಾಖಲಾಗಿದೆ.

ಪ್ರವೇಶ್ ಕುಮಾರಿ ತೀವ್ರ ಎದೆನೋವು ಎಂದು ಹೇಳಿದ್ದರಿಂದ ಅವರ ಮಗ ಗುರುಶರಣ್ ಸಿಂಗ್ ಅವರನ್ನು ಡಾ. ಆದರ್ಶ್ ಸೆಂಗರ್ ಕರ್ತವ್ಯದಲ್ಲಿದ್ದ ಜಿಲ್ಲಾ ಆಸ್ಪತ್ರೆಗೆ ಕರೆದೊಯ್ದರು. ಅವರು ಸಹಾಯಕ್ಕಾಗಿ ಪದೇ ಪದೇ ಮನವಿ ಮಾಡಿದರೂ ವೈದ್ಯರು ಕುಳಿತಲ್ಲೇ ಕುಳಿತು ಇನ್ಸ್ಟಾಗ್ರಾಮ್ ಮತ್ತು ಫೇಸ್‌ಬುಕ್‌ನಲ್ಲಿ ರೀಲ್‌ಗಳನ್ನು ನೋಡುತ್ತಿದ್ದರು ಎಂದು ಗುರುಶರಣ್ ಆರೋಪಿಸಿದ್ದಾರೆ. ಬದಲಾಗಿ, ಅವರು ನರ್ಸಿಂಗ್ ಸಿಬ್ಬಂದಿಗೆ ರೋಗಿಗೆ ಚಿಕಿತ್ಸೆ ನೀಡುವಂತೆ ಸೂಚಿಸಿದರು.

ನನ್ನ ತಾಯಿಯ ಸ್ಥಿತಿ ತೀವ್ರ ಹದಗೆಟ್ಟಾಗ ನಾವು ಹತಾಶೆಯಿಂದ ಕೂಗಾಡಿದೆವು. ಸಿಟ್ಟಿಗೆದ್ದ ಡಾ. ಸೆಂಗಾರ್ ಕೊನೆಗೆ ಎದ್ದು ನಿಂತರು. ಆದರೆ ಸಹಾಯ ಮಾಡುವ ಬದಲು ನನ್ನ ಕಪಾಳಮೋಕ್ಷ ಮಾಡಿದರು. ಆ ಹೊತ್ತಿಗೆ, ನನ್ನ ತಾಯಿ ಈಗಾಗಲೇ ಮೃತಪಟ್ಟಿದ್ದರು ಎಂದು ಗುರುಶರಣ್ ಹೇಳಿದರು. ಉದ್ವಿಗ್ನತೆ ಹೆಚ್ಚಾಗುತ್ತಿದ್ದಂತೆ, ಆಸ್ಪತ್ರೆಯಲ್ಲಿ ಭಾರೀ ಪೊಲೀಸ್ ಪಡೆಯನ್ನು ನಿಯೋಜಿಸಲಾಗಿತ್ತು. ಪರಿಸ್ಥಿತಿಯ ಗಂಭೀರತೆಯನ್ನು ಅರಿತ ಮುಖ್ಯ ವೈದ್ಯಕೀಯ ಅಧೀಕ್ಷಕ (ಸಿಎಂಎಸ್) ಮದನ್ ಲಾಲ್ ಕೂಡ ಸ್ಥಳಕ್ಕೆ ಆಗಮಿಸಿದರು.

ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸಲಾಗುತ್ತಿದೆ. ಆರೋಪಗಳು ನಿಜವೆಂದು ಕಂಡುಬಂದರೆ, ವೈದ್ಯರ ವಿರುದ್ಧ ಕಠಿಣ ಇಲಾಖಾ ಕ್ರಮ ಕೈಗೊಳ್ಳಲಾಗುವುದು ಎಂದು ಪ್ರಕರಣದ ಸಂಪೂರ್ಣ ತನಿಖೆಗೆ ಭರವಸೆ ನೀಡಿದ ಮದನ್ ಲಾಲ್ ಹೇಳಿದರು. ಪೊಲೀಸರು ಘಟನೆಯ ಬಗ್ಗೆ ತನಿಖೆ ಆರಂಭಿಸಿದ್ದಾರೆ.

## ಚುನಾವಣಾ ಪ್ರಚಾರಕ್ಕಾಗಿ ತಾಹಿರ್ ಹುಸೇನ್‌ಗೆ 6 ದಿನಗಳ ಪೆರೋಲ್



**ನವದೆಹಲಿ, ಜ. 29 :** ಆಮ್ ಆದ್ಮಿ ಪಕ್ಷದ ಮಾಜಿ ಕೌನ್ಸಿಲರ್ ಮತ್ತು 2020ರ ದೆಹಲಿ ಗಲಭೆ ಆರೋಪಿ ತಾಹಿರ್ ಹುಸೇನ್‌ಗೆ ಸುಪ್ರೀಂಕೋರ್ಟ್ ಆರು ದಿನಗಳ ಕಸ್ಟಡಿ ಪೆರೋಲ್ ಅನ್ನು ಅನುಮೋದಿಸಿದೆ. ಫೆಬ್ರವರಿ 5ರ ದೆಹಲಿ ವಿಧಾನಸಭಾ ಚುನಾವಣೆಗೆ ಪ್ರಚಾರ ಮಾಡಲು ಅವರಿಗೆ ಅವಕಾಶ ನೀಡಿದೆ.

ನ್ಯಾ. ವಿಕ್ರಮ್‌ನಾಥ್ ನೇತೃತ್ವದ ಮೂವರು ನ್ಯಾಯಾಧೀಶರ ಪೀಠವು ಹುಸೇನ್ ಅವರನ್ನು ಜನವರಿ 29ರಿಂದ ಫೆಬ್ರವರಿ 3ರವರೆಗೆ ಪ್ರತಿದಿನ 12 ಗಂಟೆಗಳ ಕಾಲ ಬಿಡುಗಡೆ ಮಾಡಬಹುದು ಎಂದು ತೀರ್ಪು ನೀಡಿದೆ. ೦ಖಒಖಒ ಅಭ್ಯರ್ಥಿಯಾಗಿ ಅವರು ಸ್ಪರ್ಧಿಸುತ್ತಿರುವ ಮುಸ್ತಾಬಾದ್ ಕ್ಷೇತ್ರದಲ್ಲಿ ಪ್ರಚಾರ ಮಾಡಲು ಅವಕಾಶ ನೀಡಿದೆ.

ಪೊಲೀಸ್ ಮೇಲ್ವಿಚಾರಣೆಯಲ್ಲಿ, ಹುಸೇನ್ ಹಗಲಿನಲ್ಲಿ ತಿಹಾರ್ ಜೈಲಿನಿಂದ ಹೊರಹೋಗಲು ಅನುಮತಿ ನೀಡಲಾಗಿದೆ. ಮತ್ತೆ ರಾತ್ರಿ ಜೈಲಿಗೆ ಹಿಂತಿರುಗಬೇಕಿದೆ. ಮೊದಲ ಎರಡು ದಿನಗಳ ಭದ್ರತಾ ವೆಚ್ಚವನ್ನು ಭರಿಸಲು 2.47 ಲಕ್ಷವನ್ನು ಮುಂಚಿತವಾಗಿ ಠೇವಣಿ ಇಡುವಂತೆ ನ್ಯಾಯಾಲಯವು ಅವರಿಗೆ ಸೂಚಿಸಿದೆ. ಉಳಿದ ನಾಲ್ಕು ದಿನಗಳವರೆಗೆ ಎರಡು ಕಂತುಗಳಲ್ಲಿ ನಂತರದ ಪಾವತಿಗಳನ್ನು ಮಾಡಬೇಕಿದೆ.

ಹುಸೇನ್ ಅವರ ಜಾಮೀನು ಅರ್ಜಿಯ ಕುರಿತು ದೆಹಲಿ ಹೈಕೋರ್ಟ್ ಮುಂದೆ ನಿರ್ಧಾರಕ್ಕಾಗಿ ಕಾಯುತ್ತಿರುವಾಗ ಈ ಆದೇಶ ಬಂದಿದೆ. ಇದಕ್ಕೂ ಮೊದಲು, ಜನವರಿ 22 ರಂದು ನ್ಯಾಯಮೂರ್ತಿ ಪಂಕಜ್ ಮಿಥಲ್ ಮತ್ತು ನ್ಯಾಯಮೂರ್ತಿ ಅಹ್ಸಾನುದ್ದೀನ್ ಅಮಾನುಲ್ಲಾ ಅವರನ್ನೊಳಗೊಂಡ ದ್ವಿಸದಸ್ಯ ಪೀಠವು ವಿಭಿನ್ನ ತೀರ್ಪು ನೀಡಿತು. ನ್ಯಾ. ಮಿಥಲ್ ಹುಸೇನ್ ಅವರ ಅರ್ಜಿಯನ್ನು ತಿರಸ್ಕರಿಸಿದರೆ, ನ್ಯಾ. ಅಮಾನುಲ್ಲಾ ಅವರಿಗೆ ಮಧ್ಯಂತರ ಜಾಮೀನು ನೀಡಬೇಕೆಂದು ತೀರ್ಪು ನೀಡಿದರು.

ಪ್ರಚಾರ ಮಾಡಲು ಅವಕಾಶ ನೀಡಬೇಕೆಂದು ಎಐಎಂಐಎಂ ಅಭ್ಯರ್ಥಿ ಸುಪ್ರೀಂ ಕೋರ್ಟ್ ಅನ್ನು ಕೋರಿದ್ದರು. ಹುಸೇನ್ ಪರವಾಗಿ ಹಾಜರಾದ ಹಿರಿಯ ವಕೀಲ ಸಿದ್ಧಾರ್ಥ್ ಅಗರ್ವಾಲ್, ಪ್ರಚಾರಕ್ಕೆ ಕೇವಲ ನಾಲ್ಕರಿಂದ ನಾಲ್ಕು ದಿನಗಳು ಮಾತ್ರ ಉಳಿದಿವೆ, ಆದ್ದರಿಂದ ಅವರು ಪೊಲೀಸ್ ಕಸ್ಟಡಿಯಲ್ಲಿ ಮತದಾರರೊಂದಿಗೆ ಸಂಪರ್ಕ ಸಾಧಿಸಲು ಅವಕಾಶ ನೀಡಲಾಗಿದೆ ಎಂದು ನ್ಯಾಯಮೂರ್ತಿಗಳಾದ ನಾಥ್, ಸಂಜಯ್ ಕರೋಲ್ ಮತ್ತು ಸಂದೀಪ್ ಮೆಹ್ತಾ ಅವರ ಪೀಠಕ್ಕೆ ತಿಳಿಸಿದರು.

## ಒಂದು ಕೋಟಿ ವಿಮೆ ಪರಿಹಾರಕ್ಕಾಗಿ ತಂಗಿ ಕೊಲೆ



**ಹೈದರಾಬಾದ್, ಜ. 29:** ಆಂಧ್ರಪ್ರದೇಶದ ಪ್ರಕಾಶಂ ಜಿಲ್ಲೆಯ ರಿಯಲ್ ಎಸ್ಟೇಟ್ ಉದ್ಯಮಿಯೊಬ್ಬ ವಿಚ್ಛೇದಿತ ಮತ್ತು ಮಕ್ಕಳಿಲ್ಲದ ತನ್ನ ತಂಗಿಯನ್ನು ಒಂದು ಕೋಟಿ ರೂಪಾಯಿ ವಿಮೆ ಪಡೆಯಲು ವಂಚಿಸಿ ಕೊಂದಿರುವ ಆರೋಪದ ಮೇಲೆ ಬಂಧಿಸಲಾಗಿದೆ. ಫೆಬ್ರವರಿ 2, 2024 ರಂದು ಪೊಡಿಲಿಯ ಪೆಟ್ರೋಲ್ ಬಂಕ್ ಬಳಿ ನಡೆದ ಈ ಅಪರಾಧಕ್ಕಾಗಿ ಆರೋಪಿ 30 ವರ್ಷದ ಮಾಲಪತಿ ಅಶೋಕ್ ಕುಮಾರ್ ಅವರನ್ನು ಬಂಧಿಸಲಾಗಿದೆ ಎಂದು ಪೊಲೀಸರು ಮಂಗಳವಾರ ದೃಢಪಡಿಸಿದ್ದಾರೆ.

ಹೆಚ್ಚಿನ ಸಾಲ ಮಾಡಿಕೊಂಡಿದ್ದ ಕುಮಾರ್, ತನ್ನ ಸಹೋದರಿಯ ಜೀವಕ್ಕೆ ಬಹು ವಿಮಾ ಕಂಪನಿಗಳೊಂದಿಗೆ ವಿಮೆ ಮಾಡಿಸಿ, ಆಕೆಯನ್ನು ಕೊಲೆ ಮಾಡಿದ್ದಾನೆ. ಅದನ್ನು ಅಪಘಾತ ಎಂದು ಬಿಂಬಿಸುವ ಯೋಜನೆಯನ್ನು ರೂಪಿಸಿದ್ದ ಎನ್ನಲಾಗಿದೆ. ತನ್ನ ಯೋಜನೆಯನ್ನು ಕಾರ್ಯಗತಗೊಳಿಸುವ ಮೊದಲು ಪಾಲಿಸಿಗಳು ಜಾರಿಯಲ್ಲಿವೆ ಎಂದು ಖಚಿತಪಡಿಸಿಕೊಂಡು ಅಪರಾಧವನ್ನು ನಿಖರವಾಗಿ ಯೋಜಿಸಿದ್ದ ಎಂದು ತನಿಖಾಧಿಕಾರಿಗಳು ಬಹಿರಂಗಪಡಿಸಿದ್ದಾರೆ.

ಘಟನೆಯ ದಿನ, ಓಂಗೋಲ್‌ಗೆ ಆಸ್ಪತ್ರೆ ಭೇಟಿಯ ನೆಪದಲ್ಲಿ ಕುಮಾರ್ ತನ್ನ ಸಹೋದರಿಯನ್ನು ತನ್ನ ಕಾರಿಗೆ ಕರೆದೊಯ್ದನು. ಹಿಂದಿರುಗುವ ಪ್ರಯಾಣದಲ್ಲಿ, ಆಕೆಗೆ ನಿದ್ರೆ ಮಾತ್ರೆಗಳನ್ನು ನೀಡಿ ಅವಳನ್ನು ಕೊಂದು ಹಾಕಿದನು. ನಂತರ ಕೊಲೆಯನ್ನು ಅಪಘಾತವೆಂದು ಬಿಂಬಿಸಲು ಪ್ರಯತ್ನಿಸಿದನು ಎಂದು ಪೊಲೀಸರು ತಿಳಿಸಿದ್ದಾರೆ.

ತನಿಖೆಯ ನಂತರ, ಅಧಿಕಾರಿಗಳು ಕುಮಾರ್ ಅವರನ್ನು ಬಂಧಿಸಿ ಭಾರತೀಯ ದಂಡ ಸಂಹಿತೆಯ 120 (ಬಿ) (ಕ್ರಿಮಿನಲ್ ಪಿತೂರಿ), 302 (ಕೊಲೆ), ಮತ್ತು 201 (ಸಾಕ್ಷ್ಯಗಳ ಕಣ್ಮರೆಗೆ ಕಾರಣವಾಗುವುದು) ಸೇರಿದಂತೆ ಹಲವಾರು ಸೆಕ್ಷನ್‌ಗಳ ಅಡಿಯಲ್ಲಿ ಅವರ ಮೇಲೆ ಆರೋಪ ಹೊರಿಸಿದರು. ಅವನಿಗೆ ಸಹಚರರು ಇದ್ದಾರೆಯೇ ಅಥವಾ ಹಿಂದೆ ಇದೇ ರೀತಿಯ ಅಪರಾಧಗಳಿಗೆ ಪ್ರಯತ್ನಿಸಿದ್ದಾರೆಯೇ ಎಂದು ನಿರ್ಧರಿಸಲು ಹೆಚ್ಚಿನ ವಿಚಾರಣೆಗಳು ನಡೆಯುತ್ತಿವೆ.

## ಹಂದಿ ಸಾಕಣೆ ವಲಯಕ್ಕೆ ಥಾಯ್ ಕಂಪನಿ ಪ್ರವೇಶ: ವಿರೋಧ




**ಗೌಹಾತಿ, ಜ. 29 :** ಥೈಲ್ಯಾಂಡ್ ಮೂಲದ ಚರೋಯೆನ್ ಪೋಕ್ಫಂಡ್ (ಸಿಪಿ) ಗ್ರೂಪ್‌ಗೆ ರಾಜ್ಯಾದ್ಯಂತ ಹಂದಿ ಸಾಕಣೆ ಘಟಕಗಳನ್ನು ಸ್ಥಾಪಿಸಲು ರಾಜ್ಯ ಸರ್ಕಾರ ಹಸಿರು ನಿಶಾನೆ ತೋರಿಸಿರುವುದನ್ನು ವಿರೋಧಿಸಿ ಅಸ್ಸಾಂನಲ್ಲಿ 10 ಲಕ್ಷಕ್ಕೂ ಹೆಚ್ಚು ಹಂದಿ ಸಾಕಾಣಿಕೆದಾರರು ಅನಿಶ್ಚಿತ ಭವಿಷ್ಯವನ್ನು ಎದುರಿಸುತ್ತಿದ್ದಾರೆ. ಈ ಬೆಳವಣಿಗೆಯು ಬಹುರಾಷ್ಟ್ರೀಯ ದೈತ್ಯ ಕಂಪನಿಯಿಂದ ಹೆಚ್ಚಿದ ಸ್ಪರ್ಧೆಯಿಂದಾಗಿ ಆರ್ಥಿಕ ನಷ್ಟದ ಭಯದಲ್ಲಿರುವ ಸ್ಥಳೀಯ ರೈತರಿಂದ ತೀವ್ರ ವಿರೋಧವನ್ನು ಹುಟ್ಟುಹಾಕಿದೆ.

ಆಲ್ ಅಸ್ಸಾಂ ಪಿಗ್ ಫಾರ್ಮರ್ಸ್ ಅಸೋಸಿಯೇಷನ್ (ಎಎಪಿಎಫ್‌ಎ) ಜಂಟಿ ಕಾರ್ಯದರ್ಶಿ ಭರತ್ ಹಂಡಿಕ್ ಮಾತನಾಡಿ, ಸಿಪಿ ಗ್ರೂಪ್ ಅಸ್ಸಾಂನ ಹಂದಿ ಸಾಕಾಣಿಕೆ ಮತ್ತು ಕೋಳಿ ಸಾಕಾಣಿಕೆ ವಲಯಕ್ಕೆ ಪ್ರವೇಶಿಸುವ ಬಗ್ಗೆ ಕಳವಳ ವ್ಯಕ್ತಪಡಿಸಿದರು. ಥೈಲ್ಯಾಂಡ್‌ನ ಅತಿದೊಡ್ಡ ಸಂಘಟನೆಯಾದ ಈ ಸಂಘವು ರಾಜ್ಯದ ಕೃಷಿ ವಲಯದಲ್ಲಿ, ವಿಶೇಷವಾಗಿ ಹಂದಿ ಸಾಕಾಣಿಕೆಯಲ್ಲಿ ಭಾರಿ ಹೂಡಿಕೆ ಮಾಡಲು ಯೋಜಿಸುತ್ತಿದೆ ಎಂದು ಅವರು ಆತಂಕ ವ್ಯಕ್ತಪಡಿಸಿದರು.

ಜನವರಿ 23 ರಂದು ವೀಡಿಯೊ ಕಾನ್ಫರೆನ್ಸ್ ಮೂಲಕ ನಡೆದ ಸಿಪಿ ಗ್ರೂಪ್ ಅಧ್ಯಕ್ಷ ಆದಿರೇಕ್ ಶ್ರೀಪ್ರತಾಕ್ ಮತ್ತು ಅಸ್ಸಾಂ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ನಡುವಿನ ಚರ್ಚೆಗಳು ಹಂದಿಮಾಂಸವನ್ನು ಸಾಂಸ್ಕೃತಿಕ ಪಾಕಪದ್ಧತಿಯಾಗಿ ಪ್ರಚಾರ ಮಾಡುವತ್ತ ಗಮನಹರಿಸಿದವು. ಅಸ್ಸಾಂನ ಕಂದಾಯ ಸಚಿವ ಕೇಶಬ್ ಮಹಾಂತ ಕೂಡ ಸಭೆಯಲ್ಲಿ ಭಾಗವಹಿಸಿದ್ದರು. ವಾರ್ಷಿಕ $65 ಬಿಲಿಯನ್ ಆದಾಯ ಹೊಂದಿರುವ ಸಿಪಿ ಗ್ರೂಪ್, ಪಶು ಆಹಾರ ಉತ್ಪಾದನೆ, ಜಾನುವಾರು ಸಾಕಣೆ, ಆಹಾರ ಸಂಸ್ಕರಣೆ ಮತ್ತು ಆರೋಗ್ಯ ರಕ್ಷಣೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಕಾರ್ಯನಿರ್ವಹಿಸುತ್ತದೆ.

ಫೆಬ್ರವರಿ 25–26 ರಂದು ಗುವಾಹಟಿಯಲ್ಲಿ ನಡೆಯುವ ಅಡ್ವಾಂಟೇಜ್ ಅಸ್ಸಾಂ 2.0 ಎಂಬ ವ್ಯಾಪಾರ ಕಾರ್ಯಕ್ರಮದಲ್ಲಿ ಭಾಗವಹಿಸಲು ಸಿಪಿ ಗ್ರೂಪ್ ಅನ್ನು ಆಹ್ವಾನಿಸಲಾಗಿದೆ. ಸ್ಥಳೀಯ ರೈತರು ಈ ಕಾರ್ಯಕ್ರಮದಲ್ಲಿ ಸಮೂಹದ ಭಾಗವಹಿಸುವಿಕೆಯನ್ನು ವಿರೋಧಿಸದಿದ್ದರೂ, ಸಿಪಿ ಗ್ರೂಪ್ ರಾಜ್ಯದಲ್ಲಿ ದೊಡ್ಡ ಪ್ರಮಾಣದ ಹಂದಿ ಸಾಕಣೆ ಕೇಂದ್ರಗಳನ್ನು ಸ್ಥಾಪಿಸಲು ರಾಜ್ಯ ಸರ್ಕಾರವು ತಿಳುವಳಿಕೆ ಪತ್ರಕ್ಕೆ (ಎಂಒಯು) ಸಹಿ ಹಾಕಬಹುದು ಎಂದು ಅವರು ಭಯಪಡುತ್ತಾರೆ.

ಇಂತಹ ಕ್ರಮವು ಸಣ್ಣ ಪ್ರಮಾಣದ ಹಂದಿ ಸಾಕಣೆದಾರರಿಗೆ ಹಾನಿಕಾರಕವಾಗಿದೆ ಎಂದು ಹ್ಯಾಂಡಿಕ್ ಎಚ್ಚರಿಸಿದ್ದಾರೆ. ಸಿಪಿ ಗ್ರೂಪ್‌ನ ಕೈಗಾರಿಕಾ–ಪ್ರಮಾಣದ ಕಾರ್ಯಾಚರಣೆಗಳು ಬೆಲೆಗಳನ್ನು ಕಡಿಮೆ ಮಾಡುತ್ತದೆ, ಸ್ಥಳೀಯ ರೈತರು ಸ್ಪರ್ಧಿಸಲು ಅಸಾಧ್ಯವಾಗುತ್ತದೆ. ಅಸ್ಸಾಂನಲ್ಲಿ 10 ಲಕ್ಷಕ್ಕೂ ಹೆಚ್ಚು ಸಣ್ಣ ಹಂದಿ ಸಾಕಣೆದಾರರು ಸ್ವಾವಲಂಬಿಗಳಾಗಿದ್ದು, ಸರ್ಕಾರದ ಬೆಂಬಲವಿಲ್ಲದೆ ಉದ್ಯೋಗವನ್ನು ಒದಗಿಸುತ್ತಿದ್ದಾರೆ. ಸಿಪಿ ಗ್ರೂಪ್ ಈ ವಲಯಕ್ಕೆ ಪ್ರವೇಶಿಸಿದರೆ, ಅವರು ಕಡಿಮೆ ಬೆಲೆಗೆ ಹಂದಿಗಳನ್ನು ಪೂರೈಸುತ್ತಾರೆ, ಇದು ನಮ್ಮನ್ನು ಆರ್ಥಿಕ ಸಂಕಷ್ಟಕ್ಕೆ ತಳ್ಳುತ್ತದೆ ಎಂದು ಅವರು ಹೇಳಿದರು.

ಸಿಪಿ ಗ್ರೂಪ್ ಒಂದು ವರ್ಷಕ್ಕೂ ಹೆಚ್ಚು ಕಾಲ ಅಸ್ಸಾಂನ ಹಂದಿ ಸಾಕಣೆ ಉದ್ಯಮವನ್ನು ಪ್ರವೇಶಿಸಲು ಲಾಬಿ ಮಾಡುತ್ತಿದೆ ಎಂದು ಹ್ಯಾಂಡಿಕ್ ಗಮನಸೆಳೆದರು. ಸ್ಥಳೀಯ ರೈತರ ಮೇಲೆ ಇದರ ಪರಿಣಾಮದ ಬಗ್ಗೆ ಪಶುವೈದ್ಯಕೀಯ ಸಚಿವ ಅತುಲ್ ಬೋರಾ ಆರಂಭದಲ್ಲಿ ಅವರ ಪ್ರವೇಶವನ್ನು ವಿರೋಧಿಸಿದ್ದರು. ಆದರೆ, ಈ ವಲಯದಲ್ಲಿ ಕಡಿಮೆ ಅನುಭವ ಹೊಂದಿರುವ ಸಚಿವ ಕೃಷ್ಣೇಂದು ಪಾಲ್ ಅವರ ನೇತೃತ್ವದಲ್ಲಿ ಸರ್ಕಾರದ ನಿಲುವು ಬದಲಾದಂತೆ ಕಾಣುತ್ತದೆ ಎಂದರು.

ಹಂದಿಮಾಂಸವು ಅಸ್ಸಾಂ ಮತ್ತು ಈಶಾನ್ಯದಲ್ಲಿ ಜನಪ್ರಿಯ ಆಹಾರವಾಗಿದ್ದು, ಈ ಪ್ರದೇಶವು ಭಾರತದ ಒಟ್ಟು ಹಂದಿ ಜನಸಂಖ್ಯೆಯ 38.42% ರಷ್ಟಿದೆ. ಅಸ್ಸಾಂನಲ್ಲಿ ಮಾತ್ರ 1.63 ಮಿಲಿಯನ್ ಹಂದಿಗಳಿದ್ದು, ದೇಶದ ಒಟ್ಟು ಹಂದಿ ಜನಸಂಖ್ಯೆಯ 15.89% ರಷ್ಟಿದೆ. ಹಂದಿಮಾಂಸಕ್ಕೆ ಹೆಚ್ಚುತ್ತಿರುವ ಬೇಡಿಕೆಯೊಂದಿಗೆ, ಸರ್ಕಾರವು ವಿದೇಶಿ ಸ್ಪರ್ಧೆಯನ್ನು ಆಹ್ವಾನಿಸುವ ಬದಲು ಸ್ಥಳೀಯ ಕೃಷಿಯನ್ನು ಬಲಪಡಿಸುವತ್ತ ಗಮನಹರಿಸಬೇಕು ಎಂದು ಸ್ಥಳೀಯ ರೈತರು ವಾದಿಸುತ್ತಾರೆ.

ರಾಜ್ಯ ಸರ್ಕಾರವು ತನ್ನ ಯೋಜನೆಗಳೊಂದಿಗೆ ಮುಂದುವರಿಯುತ್ತಿರುವುದರಿಂದ, ಅಸ್ಸಾಂನ ಹಂದಿ ಸಾಕಣೆದಾರರ ಭವಿಷ್ಯವು ಅನಿಶ್ಚಿತವಾಗಿದೆ. ಸ್ಥಳೀಯ ರೈತರ ಕಲ್ಯಾಣಕ್ಕೆ ಆದ್ಯತೆ ನೀಡುವಂತೆ ಮತ್ತು ಬಹುರಾಷ್ಟ್ರೀಯ ಸಂಸ್ಥೆಗಳು ಉದ್ಯಮವನ್ನು ಏಕಸ್ವಾಮ್ಯಗೊಳಿಸುವುದನ್ನು ತಡೆಯಲು ರೈತ ಸಮುದಾಯವು ಸರ್ಕಾರವನ್ನು ಒತ್ತಾಯಿಸಿದೆ.

## ಜನಿಸಲಿರುವ ಮಗುವಿನೊಳಗೆ ಭ್ರೂಣ ಪತ್ತೆ

**ಮುಂಬೈ, ಜ. 29:** ಅತ್ಯಂತ ಅಪರೂಪದ ವೈದ್ಯಕೀಯ ವಿದ್ಯಮಾನದಲ್ಲಿ, ಮಹಾರಾಷ್ಟ್ರದ ಬುಲ್ಧಾನಾದಲ್ಲಿ ಹುಟ್ಟಲಿರುವ ಮಗುವಿನ ಹೊಟ್ಟೆಯೊಳಗೊಂದು ಭ್ರೂಣ ಪತ್ತೆಯಾಗಿದೆ. ಎರಡು ದಿನಗಳ ಹಿಂದೆ 32 ವರ್ಷದ ಮಹಿಳೆಯೊಬ್ಬರು ಸೋನೋಗ್ರಫಿಗೆ ಒಳಗಾದಾಗ ಸರ್ಕಾರಿ ಆಸ್ಪತ್ರೆಯಲ್ಲಿ ಭ್ರೂಣದಲ್ಲಿ ಭ್ರೂಣ ಪ್ರಕರಣ ಪತ್ತೆಯಾಗಿದೆ. ಈ ಅಪರೂಪದ ಜನ್ಮಜಾತ ಅಸಂಗತತೆಯನ್ನು ವಿಶ್ವಾದ್ಯಂತ ಸುಮಾರು 200 ಪ್ರಕರಣಗಳಲ್ಲಿ ಮಾತ್ರ ದಾಖಲಿಸಲಾಗಿದೆ, ಭಾರತದಲ್ಲಿ ಕೇವಲ 15–20 ಪ್ರಕರಣಗಳು ವರದಿಯಾಗಿವೆ.

ಆರಂಭದಲ್ಲಿ ನನಗೆ ಆಶ್ಚರ್ಯವಾಯಿತು, ನಂತರ ಚಿತ್ರಗಳನ್ನು ಎಚ್ಚರಿಕೆಯಿಂದ ಮರುಪರಿಶೀಲಿಸಿದೆ ಎಂದು ಭ್ರೂಣವನ್ನು ಕಂಡುಹಿಡಿದ ಸ್ತ್ರೀರೋಗ ತಜ್ಞ ಡಾ. ಪ್ರಸಾದ್ ಅಗರ್ವಾಲ್ ಹೇಳಿದರು. ಅದು ಬೆಳವಣಿಗೆಯಾಗುತ್ತಿರಲಿಲ್ಲ, ಇದು ನಿಜಕ್ಕೂ ಭ್ರೂಣದದೊಳಗೊಂದು ಭ್ರೂಣದ ಪ್ರಕರಣವಾಗಿತ್ತು ಎಂದು ಅವರು ಹೇಳಿದರು.

ಮಹಿಳೆ ತನ್ನ ಒಂಬತ್ತನೇ ತಿಂಗಳ ಗರ್ಭಧಾರಣೆಯಲ್ಲಿದ್ದಳು, ಈ ಅಸಂಗತತೆಯು ಅತ್ಯಂತ ಅಪರೂಪ ಮತ್ತು ಅನಿರೀಕ್ಷಿತತೆಯಿಂದಾಗಿ ಹಿಂದಿನ ಸ್ಕ್ಯಾನ್‌ಲ್ಲಿ ಪತ್ತೆಯಾಗಲಿಲ್ಲ. ಹಿಂದಿನ ಸೋನೋಗ್ರಫಿಯಲ್ಲಿ ಇದನ್ನು ಪತ್ತೆಯಾಗಿರಲಿಲ್ಲ. ಏಕೆಂದರೆ, ಇದು ಬಹಳ ಅಪರೂಪದ ಸ್ಥಿತಿಯಾಗಿದ್ದು, ಅಂತಹ ಸ್ಥಿತಿ ಅಸ್ತಿತ್ವದಲ್ಲಿರಬಹುದು ಎಂದು ಯಾರೂ ಊಹಿಸಲೂ ಸಾಧ್ಯವಿಲ್ಲ. ಆದ್ದರಿಂದ, ನಾನು ಒಂದೆರಡು ವೈದ್ಯರಿಂದ ವಿವರವಾದ ಅಧ್ಯಯನವನ್ನು ಮಾಡಿ ಅದನ್ನು ದೃಢಪಡಿಸಿದೆ ಎಂದು ಡಾ. ಅಗರ್ವಾಲ್ ಹೇಳಿದರು.

ತಾಯಿಗೆ ಸಾಮಾನ್ಯ ಹೆರಿಗೆಯಾಗುವ ಸಾಧ್ಯತೆಯಿದೆ ಎಂದು ಬುಲ್ಧಾನಾ ಆಸ್ಪತ್ರೆಯ ಸಿವಿಲ್ ಸರ್ಜನ್ ಡಾ. ಭಗವತ್ ಭೂಸಾರಿ ವಿವರಿಸಿದರು. ಆದರೂ, ಜನನದ ನಂತರ ಮಗುವಿಗೆ ತಕ್ಷಣದ ವೈದ್ಯಕೀಯ ಆರೈಕೆಯ ಅಗತ್ಯವಿರಬಹುದು ಎಂದು ಅವರು ಹೇಳಿದರು.

ಈ ಸ್ಥಿತಿಯ ನಿಖರವಾದ ಕಾರಣವನ್ನು ಸಂಪೂರ್ಣವಾಗಿ ಅರ್ಥಮಾಡಿಕೊಳ್ಳಲಾಗಿಲ್ಲ. ಆದರೆ, ಇದು ಒಂದೇ ರೀತಿಯ ಅವಳಿಗಳ ಬೆಳವಣಿಗೆಯ ಸಮಯದಲ್ಲಿ ಅಸಹಜತೆಯಿಂದ ಉಂಟಾಗುತ್ತದೆ ಎಂದು ನಂಬಲಾಗಿದೆ. ಪರಾವಲಂಬಿ ಅವಳಿ ಸ್ವತಂತ್ರವಾಗಿ ಬದುಕಲು ಸಾಧ್ಯವಿಲ್ಲವಾದ್ದರಿಂದ ಇದನ್ನು ನಿಜವಾದ ಅವಳಿ ಗರ್ಭಧಾರಣೆಯ ಬದಲು ಬೆಳವಣಿಗೆಯ ಅಸಂಗತತೆ ಎಂದು ಪರಿಗಣಿಸಲಾಗುತ್ತದೆ.



ಚಿಕ್ಕಮಗಳೂರಿನಲ್ಲಿ ಬುಧವಾರ ನಡೆದ 21ನೇ ರಾಜ್ಯಮಟ್ಟದ ನಗೆ (ನಗು) ಮತ್ತು ಯೋಗ ಸಮಾವೇಶದ ಅಂಗವಾಗಿ ಮಹಿಳೆಯರು ಮೆರವಣಿಗೆಯಲ್ಲಿ ಪಾಲ್ಗೊಂಡರು.

# ಕುಂಭಮೇಳ: ಕಾಲ್ತುಳಿತದಲ್ಲಿ ಕರ್ನಾಟಕದ ನಾಲ್ವರ ಸಾವು: ಅಶೋಕ್ ಸಂತಾಪ



**ಬೆಂಗಳೂರು, ಜ, 29;** ಉತ್ತರ ಪ್ರದೇಶದ ಪ್ರಯಾಗ್ರಾಜನಲ್ಲಿ ನಡೆಯುತ್ತಿರುವ ಮಹಾ ಕುಂಭಮೇಳದಲ್ಲಿ ಇಂದು ಮುಂಜಾನೆ ಸಂಭವಿಸಿದ ಕಾಲ್ತುಳಿತದಲ್ಲಿ ಬೆಳಗಾವಿ ಮೂಲದ ನಾಲ್ವರು ಮೃತಪಟ್ಟಿರುವ ಸುದ್ದಿ ಆಘಾತ ಮೂಡಿಸಿದ್ದು, ತಮ್ಮವರನ್ನು ಕಳೆದುಕೊಂಡ ಕುಟುಂಬಸ್ಥರಿಗೆ ಶ್ರದ್ಧಾಂಜಲಿ ಸಲ್ಲಿಸುವುದಾಗಿ ವಿಧಾನಸಭೆ ಪ್ರತಿಪಕ್ಷ ನಾಯಕ ಆರ್. ಅಶೋಕ್ ಹೇಳಿದ್ದಾರೆ.

ಅಲ್ಲಿನ ಸ್ಥಳೀಯ ಆಡಳಿತದೊಂದಿಗೆ ಸಂಪರ್ಕ ಸಾಧಿಸಿ ಮೃತದೇಹಗಳನ್ನು ಕರ್ನಾಟಕಕ್ಕೆ ತರಲು ಮತ್ತು ಗಾಯಾಳುಗಳಿಗೆ ಸೂಕ್ತ ಚಿಕಿತ್ಸೆ ಕೊಡಿಸಲು ರಾಜ್ಯ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಹೇಳಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, 144 ವರ್ಷಕ್ಕೊಮ್ಮೆ ನಡೆಯುವ ಈ ಮಹಾ ಕುಂಭಮೇಳದಲ್ಲಿ ಪಾಲ್ಗೊಳ್ಳಲು ದೇಶದ ಮೂಲೆ ಮೂಲೆಯಿಂದ ಕೋಟ್ಯಂತರ ಭಕ್ತರು ಆಗಮಿಸುತ್ತಿದ್ದು ಮೌನಿ ಅಮಾವಾಸ್ಯೆಯ ವಿಶೇಷ ದಿನವಾದ ಇಂದು ಸುಮಾರು 10 ಕೋಟಿ ಜನ ಪವಿತ್ರ ಸ್ನಾನ ಮಾಡಿದ್ದಾರೆ.

ವಿಶ್ವದ ಅತ್ಯಂತ ದೊಡ್ಡ ಧಾರ್ಮಿಕ ಸಮ್ಮೇಳನ ಎನಿಸಿಕೊಂಡಿರುವ ಇಂತಹ ಬೃಹತ್ ಕಾರ್ಯಕ್ರಮದಲ್ಲಿ ಭಾಗಿಯಾಗಲು ತೆರಳುತ್ತಿರುವ ಕನ್ನಡಿಗರು ಕುಂಭ ಮೇಳದಲ್ಲಿ ಪಾಲ್ಗೊಳ್ಳುವಾಗ ಅಲ್ಲಿನ ಸ್ಥಳೀಯ ಆಡಳಿತ, ಪೊಲೀಸ್ ಸಿಬ್ಬಂದಿಗಳು ಮತ್ತು ಆಯೋಜಕರು ಕಾಲಕಾಲಕ್ಕೆ ನೀಡುವ ಸೂಚನೆಗಳನ್ನು ಪಾಲಿಸಿ ಅವರಿಗೆ ಸಹಕರಿಸಬೇಕು. ಯಾವುದೇ ಗಾಳಿ ಸುದ್ದಿಗಳಿಗೆ, ಊಹಾಪೋಹಗಳಿಗೆ ಕಿವಿಗೊಡಬೇಡಿ. ನಿಮ್ಮೊಡನೆ ಪ್ರಯಾಣ ಮಾಡಿರುವ ಸ್ನೇಹಿತರು ಅಥವಾ ಕುಟುಂಬಸ್ಥರ ಗುಂಪಿನ ಜೊತೆಗಿರಿ. ಸಣ್ಣ ಮಕ್ಕಳು, ವಯಸ್ಸಾದವರು ಜೊತೆಗಿದ್ದರೆ ಅವರ ಮೇಲೆ ವಿಶೇಷ ಗಮನ ಕೊಡಿ. ಪ್ರತಿಯೊಬ್ಬರಿಗೂ ಪುಣ್ಯ ಸ್ನಾನ ಮಾಡುವ ಅವಕಾಶ ಕಲ್ಪಿಸಲು ಅಲ್ಲಿನ ರಾಜ್ಯ ಸರ್ಕಾರ ಮತ್ತು ಸ್ಥಳೀಯ ಆಡಳಿತ ಎಲ್ಲ ರೀತಿಯ ವ್ಯವಸ್ಥೆಗಳನ್ನು ಮಾಡಿದೆ. ಆದ್ದರಿಂದ ಯಾರೂ ಆತುರ ಪಡದೆ, ಗಡಿಬಿಡಿ ಮಾಡಿಕೊಳ್ಳದೆ ಪವಿತ್ರ ಸ್ನಾನ ಮಾಡಿ ಸುರಕ್ಷಿತವಾಗಿ ಹಿಂತಿರುಗಿ ಬನ್ನಿ ಎಂದಿದ್ದಾರೆ.

# ಹಜ್ ಯಾತ್ರೆಗೆ ಸರ್ಕಾರದಿಂದ ಸಬ್ಸಿಡಿ ಕೊಡುವುದಿಲ್ಲ: ಸಚಿವ ಜಮೀರ್ ಖಾನ್



**ಬೆಂಗಳೂರು, ಜ. 29 :** ನಮ್ಮ ದೇಶದ ಯಾವುದೇ ರಾಜ್ಯದಲ್ಲಿಯೂ ಹಜ್ ಯಾತ್ರೆಗೆ ಸರ್ಕಾರದಿಂದ ಸಬ್ಸಿಡಿ ಕೊಡುವುದಿಲ್ಲ. ಹಜ್ ಕಮಿಟಿಗೆ 90 ಸಾವಿರ ರೂ. ಫುಲ್ ಪೇಮೆಂಟ್ ಕಟ್ಟಲಾಗುತ್ತದೆ. ಇನ್ನು ಖಾಸಗಿ ಏಜೆನ್ಸಿಗಳು 5 ಲಕ್ಷ ರೂ. ತೆಗೆದುಕೊಳ್ಳುತ್ತಾರೆ. ಇದನ್ನು ತಿಳಿದುಕೊಂಡು ಸಿ.ಟಿ.ರವಿ ಮಾತನಾಡಬೇಕು ಎಂದು ಸಚಿವ ಜಮೀರ್ ಅಹಮದ್ ಖಾನ್ ತಿಳಿಸಿದರು.

ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ಅವರ ಹಜ್ ಸಬ್ಸಿಡಿಯನ್ನ ರದ್ದು ಮಾಡಿ ಎಂಬ ಹೇಳಿಕೆ ಕುರಿತು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ನಮ್ಮ ರಾಜ್ಯದಲ್ಲಿ ಹಜ್ ಸಬ್ಸಿಡಿ ಯಾವುದೂ ಇಲ್ಲ. ಯಾರು ಹಜ್ ಯಾತ್ರೆಗೆ ಹೋಗುತ್ತಾರೋ ಅವರೆಲ್ಲರೂ ಫುಲ್ ಹಣವನ್ನು ಕಟ್ಟುತ್ತಾರೆ. ಇಲ್ಲಿ ಯಾರಿಗೂ ಸಬ್ಸಿಡಿ ಇಲ್ಲ. ಹಜ್ ಕಮಿಟಿಯಿಂದ ಪ್ರತಿಯೊಬ್ಬರಿಗೂ 90 ಸಾವಿರ ರೂ. ತೆಗೆದು ಕೊಳ್ಳುತ್ತಾರೆ. ಆದರೆ, ಖಾಸಗಿ ಏಜೆನ್ಸಿಯ ಮೂಲಕ ಹೋಗುವವರಿಗೆ 5 ಲಕ್ಷ ರೂ. ತೆಗೆದುಕೊಳ್ಳುತ್ತಾರೆ. ಕೇಂದ್ರ, ರಾಜ್ಯ ಸರ್ಕಾರ ಇರಲಿ, ನಮಗೆ ಯಾವ ಸಬ್ಸಿಡಿ ಇಲ್ಲ ಎಂದು ಹೇಳಿದರು.

ರಾಜ್ಯದಲ್ಲಿ ಸಿ.ಟಿ. ರವಿ ಅವರು ಸಚಿವರಾಗಿ ಕೆಲಸ ಮಾಡಿದ್ದಾರೆ. ಏನಾದರೂ ಮಾತನಾಡುವುದಕ್ಕೂ ಮುನ್ನ ಸಂಪೂರ್ಣವಾಗಿ ವಿಚಾರವನ್ನು ತಿಳಿದುಕೊಂಡು ಮಾತನಾಡಬೇಕು. ಇಡೀ ದೇಶದಲ್ಲಿ ಯಾವುದೇ ರಾಜ್ಯದಲ್ಲಿ ಹಜ್ ಸಬ್ಸಿಡಿ ಕೊಡುತ್ತಿಲ್ಲ. ಹಜ್ ಕ್ಯಾಂಪ್ನಲ್ಲಿ ಸಹಾಯ ಮಾಡುವುದೇ ನಮಗೆ ಕೊಡುವ ಸಬ್ಸಿಡಿ ಆಗಿದೆ. ಇದನ್ನು ಬಿಟ್ಟರೆ ಬೇರೇನೂ ಸೌಲಭ್ಯಗಳಿಲ್ಲ ಎಂದು ಸಿ.ಟಿ. ರವಿ ವಿರುದ್ಧ ಕಿಡಿಕಾರಿದರು.

ಬೇರೆಯವರು ತೆರಿಗೆ ಹಣದಲ್ಲಿ ಹಜ್ ಸಬ್ಸಿಡಿ ನೀಡುತ್ತಿದ್ದಾರೆ ಎಂಬ ಆರೋಪವನ್ನು ನಾವು ಒಪ್ಪಿಕೊಳ್ಳುವುದಿಲ್ಲ. ಹಜ್ ಸಬ್ಸಿಡಿ ಎಲ್ಲಿ ಕೊಡ್ತಾ ಇದ್ದಾರೆ ರೀ ಯಾರದ್ದು ಇದು ಎಂದು ತಿಳಿದುಕೊಂಡು ಮಾತನಾಡಬೇಕು. ಇಲ್ಲಿ ಮುಖ್ಯವಾಗಿ ಹಜ್ ಕಮಿಟಿ ಇರುವುದು ಸೆಂಟ್ರಲ್ ಗೌರ್ನಮೆಂಟ್ ಅವರದ್ದು, ಮೊದಲು ಸಿ.ಟಿ. ರವಿ ಈ ಮಾಹಿತಿ ತಿಳಿದುಕೊಳ್ಳಬೇಕು ಸಚಿವ ಜಮೀರ್ ಅಹಮದ್ ಖಾನ್ ತಿರುಗೇಟು ಕೊಟ್ಟಿದ್ದಾರೆ.

# ಮಲ್ಲಿಕಾರ್ಜುನ್ ಖರ್ಗೆ ಹೇಳಿಕೆಗೆ ಬಿಜೆಪಿ ತೀವ್ರ ಖಂಡನೆ

**ಬೆಂಗಳೂರು, ಜ. 29 :** ಕಾಂಗ್ರೆಸ್ ಪಕ್ಷದ ಹಿಂದೂ ವಿರೋಧಿ ಚಿಂತನೆಗಳಿಗೆ ಕೊನೆ ಮೊದಲು ಎಂಬುದಿಲ್ಲ. ಸಮಯ ಸಿಕ್ಕಿದಾಗಲೆಲ್ಲಾ ಹಿಂದೂ ಧಾರ್ಮಿಕ ಆಚರಣೆಗಳ ವಿರುದ್ಧ ಕಾಂಗ್ರೆಸ್ ನಾಯಕರು ಟೀಕಿಸುತ್ತಾರೆ. ಕುಂಭಸ್ನಾನದ ವಿರುದ್ಧ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ ನೀಡಿರುವ ಹೇಳಿಕೆ ಖಂಡನೀಯ ಎಂದು ಬಿಜೆಪಿ ವಾಗ್ದಾಳಿ ನಡೆಸಿದೆ. ಕುಂಭಮೇಳದಂತಹ ಪರಂಪರಾಗತ ಹಿಂದೂ ಧಾರ್ಮಿಕ ಆಚರಣೆಗಳ ಬಗ್ಗೆ ಮಾತನಾಡುವ ಕಾಂಗ್ರೆಸ್ ನಾಯಕರಿಗೆ ಅನ್ಯ ಮತದ ಯಾತ್ರೆ–ಆಚರಣೆಗಳ ಬಗ್ಗೆ ಮಾತನಾಡುವ ಧಮ್ ಇದೆಯಾ ಹಿಂದೂಗಳ ಸಹಿಷ್ಣುತೆಯನ್ನು ಜಾಸ್ತಿ ಪರೀಕ್ಷಿಸಬೇಡಿ.

ಈಗಾಗಲೇ ಐಸಿಯುನಲ್ಲಿ ಉಸಿರಾಡುತ್ತಿರುವ ಕಾಂಗ್ರೆಸ್, ಬಹುಸಂಖ್ಯಾತ ಸನಾತನ ಧರ್ಮೀಯರ ತಾಳ್ಮೆಯನ್ನು ಇನ್ನಷ್ಟು ಕೆಣಕಿದರೆ ಧೂಳೀಪಟವಾಗುವುದು ನಿಶ್ಚಿತ ಎಂದು ಕಾಂಗ್ರೆಸ್ ವಿರುದ್ಧ ಬಿಜೆಪಿ ಕಿಡಿಕಾರಿದೆ.ಇನ್ನೂ ಬಿಜೆಪಿ ನಾಯಕರ ಟೀಕೆಗೆ ಸಚಿವ ಪ್ರಿಯಾಂಕ್ ಖರ್ಗೆ ತಿರುಗೇಟು ನೀಡಿದ್ದು, ಬಿಜೆಪಿಯವರು ಮೊದಲು ಹಿಂದೂ ಧರ್ಮದ ಅಧ್ಯಯನ ಮಾಡಲಿ, ಪಾಪ, ಪುಣ್ಯಗಳು ನದಿಗಳಲ್ಲಿ ಮುಳುಗೇಳುವುದರಿಂದ ನಿರ್ಧಾರವಾಗುವುದಿಲ್ಲ, ನಾವು ಮಾಡಿದ ಕೆಟ್ಟ ಕೆಲಸಗಳಿಗೆ ಕುಂಭ ಸ್ನಾನದಿಂದ ಮಾಫಿಯೂ ದೊರಕುವುದಿಲ್ಲ. ಗಂಗಾ ಸ್ನಾನ ಮಾಡಿದರೆ ಕೆಟ್ಟವನು ಒಳ್ಳೆಯವನಾಗುವುದಿಲ್ಲ, ಕರ್ಮ, ಕಾಯಕಗಳು ಮಾತ್ರ ನಮ್ಮನ್ನು ಉದ್ಧರಿಸಬಲ್ಲವು ಎನ್ನುವುದನ್ನು ಹಲವು ಮಹನೀಯರು ಹೇಳಿದ್ದಾರೆ. ಬಿಜೆಪಿಯವರು ಧರ್ಮದ ಹೆಸರು ಹೇಳಿಕೊಂಡು ರಾಜಕಾರಣ ಮಾಡುವುದನ್ನು ಬಿಟ್ಟು, ಸಾಧನೆ ಹೇಳಿಕೊಂಡು ರಾಜಕಾರಣ ಮಾಡಿ ತೋರಿಸಲಿ ಎಂದು ಕಿಡಿಕಾರಿದ್ದಾರೆ.

ಪ್ರಶ್ನೆಗಳನ್ನು ಎತ್ತಿದರೆ, ವಸ್ತು ಸ್ಥಿತಿಯನ್ನು ಹೇಳಿದರೆ ಹಿಂದೂ ವಿರೋಧಿ ಎಂದು ಹೇಳಿ ಉತ್ತರದಾಯಿತ್ವದಿಂದ ಜಾರಿಕೊಳ್ಳುವುದು ಬಿಜೆಪಿಯ ಹಳೆ ಚಾಳಿ ಬಿಜೆಪಿ ಏನಾದರೂ 12ನೇ ಶತಮಾನದಲ್ಲಿ ಇದ್ದಿದ್ದರೆ ಮೌಢ್ಯದ ವಿರುದ್ಧ ವಚನ ಚಳವಳಿ ಕಟ್ಟಿದ್ದ ಶರಣರಿಗೂ ಹಿಂದೂ ವಿರೋಧಿ ಪಟ್ಟ ಕಟ್ಟಿಬಿಡುತ್ತಿದ್ದರೊ ಏನೋ ಆದರೆ ಆಗಿನ ಮನುವಾದಿಗಳು ಶರಣರಿಗೆ ಪೀಡಿಸಿದ್ದರು ಎನ್ನುವುದು ಇತಿಹಾಸ. ಉತ್ತರದ ಕಾಶಿಯಲಿ ಕತ್ತೆ ಮಿಂದ್ಯೆ ತರಲು ದಕ್ಷಿಣದ ದೇಶಕದು ಕುದುರೆಯಹುದೆ ಎಂದು ಹೇಳಿದ ಕುವೆಂಪುರನ್ನು ಹಿಂದೂ ವಿರೋಧಿ ಎನ್ನುವ ದಮ್ಮು ತಾಕತ್ತು ಇದೆಯೇ ನೀರ ಕಂಡಲ್ಲಿ ಮುಳುಗುವರಯ್ಯ ಮರ ಕಂಡಲ್ಲಿ ಸುತ್ತುವರಯ್ಯ ಬತ್ತುವ ಜಲವ ಒಣಗುವ ಮರವ ಮೆಚ್ಚಿದವರು ನಿನ್ನನೆತ್ತಬಲ್ಲರು ಕೂಡಲ ಸಂಗಮದೇವ.

ವೇದಕ್ಕೆ ಬರೆಯ ಕಟ್ಟುವೆ, ಶಾಸ್ತ್ರಕ್ಕೆ ನಿಗಳವನಿಕ್ಕುವೆ, ತರ್ಕದ ಬೆನ್ನ ಬಾರನೆತ್ತುವ ಆಗಮದ ಮೂಗ ಕೊಯ್ಯುವೆ ನೋಡಯ್ಯ ಎಂದ ಬಸವಣ್ಣರನ್ನು ಹಿಂದೂ ವಿರೋಧಿ ಎನ್ನುವಿರಾವೇದ ಶಾಸ್ತ್ರ ಪುರಾಣಗಳೆಂಬ ಕೊಟ್ಟಣ ಕುಟ್ಟುತ್ತಾ ನುಚ್ಚು ತೌಡು ಕಾಣಿರೋ ಎಂದ ಅಕ್ಕಮಹಾದೇವಿಯನ್ನು ಹಿಂದೂ ವಿರೋಧಿ ಎನ್ನುವಿರಾ ಕಟ್ಟಿದ ಲಿಂಗವ ಬಿಟ್ಟು ಬೆಟ್ಟದ ಲಿಂಗಕ್ಕೆ ಹೋಗಿ ಹೊಟ್ಟೆಯಡಿಯಾಗಿ ಬೀಳುವ ಲೊಟ್ಟೆ ಮೂಗನ ಕಂಡರೆ ಮೆಟ್ಟಿದ ಎಡಪಾದರಕ್ಷೆಯ ತಕ್ಕೊಂಡು ಲಟಲಟನೆ ಹೊಡೆ' ಎಂದ ಅಂಬಿಗರ ಚೌಡಯ್ಯರನ್ನು ಹಿಂದೂ ವಿರೋಧಿ ಎನ್ನುವಿರಾ ಕಲ್ಲಮನೆಯಡಿ ಕಲ್ಲದೇವರ ಮಾಡಿ, ಆ ಕಲ್ಲು ಕಲ್ಲ ಮೇಲೆ ಕೆಡೆದರೆ ದೇವರೆತ್ತ ಹೋದರೋ ಎಂದಿದ್ದ ಅಲ್ಲಮರನ್ನು ಹಿಂದೂ ವಿರೋಧಿ ಎನ್ನುವಿರಾ"ಸೌ ಚುಹೇ ಖಾಕೆ ಬಿಲ್ಲಿ ಹಜ್ ಕೊ ಚಲೀ" ಎಂಬ ನುಡಿಗಟ್ಟು ಉರ್ದುವಿನಲ್ಲೂ ಇದೆ, ಯಾವ ಧರ್ಮವೂ ಕೂಡ ಕೆಟ್ಟ ಕೆಲಸ ಮಾಡಿ ಪುಣ್ಯ ಕ್ಷೇತ್ರಕ್ಕೆ ಬಂದರೆ ಪಾಪ ಪರಿಹಾರವಾಗುತ್ತದೆ ಎಂದಿಲ್ಲ, ನಿಮ್ಮ ಒಳ್ಳೆಯ ಕೆಲಸಗಳೇ ನಿಮ್ಮ ಪುಣ್ಯಕ್ಕೆ ದಾರಿ ಎನ್ನುತ್ತವೆ ಎಂದು ವಚನಗಳ ಮೂಲಕ ಬಿಜೆಪಿ ವಿರುದ್ಧ ಸಚಿವ ಪ್ರಿಯಾಂಕ್ ಖರ್ಗೆ ಅವರು ತಿರುಗೇಟು ನೀಡಿದ್ದಾರೆ.

# ಕಾವೇರಿ ಕುಡಿಯುವ ನೀರಿನ ದರ ಏರಿಕೆ ಅನಿವಾರ್ಯ: ಡಿ.ಸಿ.ಎಂ



**ಬೆಂಗಳೂರು, ಜ. 29 :** ರಾಜ್ಯ ಸರ್ಕಾರ ಇತ್ತೀಚೆಗೆ ಸಾರ್ವಜನಿಕ ಬಸಗಳ ಪ್ರಯಾಣ ದರ ಶೇಕಡಾ 15ರಷ್ಟು ಏರಿಕೆ ಮಾಡಿದ ಬೆನ್ನಲ್ಲೆ ಬೆಂಗಳೂರು ಜನರಿತೆ ನೀರಿನ ದರ ಏರಿಕೆಗೆ ಶಾಕ್ ನೀಡಲಾಗಿದೆ. ಕಾವೇರಿ ಕುಡಿಯುವ ನಿರೀನ ದರವನ್ನು ಶೀಘ್ರವೇ ಹೆಚ್ಚಿಸಲಾಗುವುದು ಎಂದು ಸ್ವತಃ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಹೇಳಿದ್ದಾರೆ. ಸರ್ಕಾರದ ಈ ನಿರ್ಧಾರಕ್ಕೆ ವ್ಯಾಪಕ ವಿರೋಧ ವ್ಯಕ್ತವಾಗುತ್ತಿದೆ.

ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಕಳೆದ ಹತ್ತು ವರ್ಷಗಳಿಂದ ಬೆಂಗಳೂರು ಜಲ ಮಂಡಳಿಯ ಬೆಲೆಯನ್ನು ಹೆಚ್ಚಿಸಿಲ್ಲ. ಕೊಳಗೇರಿ ನಿವಾಸಿಗಳಿಗೆ ಉಚಿತ ನೀರು ಪೂರೈಸಲು ಆಗದೆ ಅವರುಗಳ ಸ್ವಾಭಿಮಾನಕ್ಕೆ ಅಪಮಾನ ತರುವಂತಹ ರೀತಿಯ ಹೇಳಿಕೆ ನೀಡಬಾರದು. ಕಾವೇರಿ ನೀರಿನ ದರವನ್ನು ಹೆಚ್ಚಿಸುವುದಾಗಿ ಡಿಸಿಎಂ ಡಿಕೆ ಶಿವಕುಮಾರ್ ಹೇಳಿದ್ದಾರೆ. ಯಾವ ಕಾರಣಕ್ಕೆ ನೀರಿನ ದರ ಹೆಚ್ಚಿಸಲು ಬಿಡುವುದಿಲ್ಲ ಎಂದು ಆಮ್ ಆದ್ಮಿ ಪಕ್ಷದ ನಾಯಕ, ಮಾಧ್ಯಮ ಸಂಚಾಲಕ ಜಗದೀಶ್ ವಿ.ಸದಂ ಎಚ್ಚರಿಕೆ ನೀಡಿದ್ದಾರೆ. ಬುಧವಾರ ಎಎಪಿ ಪ್ರಕಟಣೆ ಹೊರಡಿಸಿದ್ದು, ಉಪಮುಖ್ಯಮಂತ್ರಿಗಳ ನೀರಿನ ದರ ಏರಿಕೆ ನಿರ್ಣಯ ಖಂಡಿಸಿದೆ. ಕಾವೇರಿ ನದಿಯಿಂದ ನಗರಕ್ಕೆ ಸರಬರಾಜು ಆಗುವ ನೀರಿನ ಪೈಪ್‌ಲೈನ್‌ಗಳಲ್ಲಿನ ಶೇಕಡಾ 35ರಷ್ಟು ನೀರು ಸೋರಿಕೆ ಆಗುತ್ತಿದೆ. ಈ ಬಗ್ಗೆ ಜಲಮಂಡಳಿಯೇ ಅಂದಾಜು ಮಾಡಿದೆ. ಇಂದಿಗೂ ಸಹ ನಷ್ಟು ಇದೆ ಎಂದು ಜಲ ಮಂಡಳಿಯೇ ತನ್ನ ವರದಿಯಲ್ಲಿ ತಿಳಿಸಿದೆ ಎಂದು ಸದಂ ಅವರು ಹೇಳಿದರು.

ಸದ್ಯದ ಪರಿಸ್ಥಿತಿ ಹೀಗಿರುವಾಗ ದುರಸ್ತಿ ಕಾರ್ಯಗಳಿಗೆ ಪ್ರತಿವರ್ಷ ಜಲಮಂಡಳಿಯು ಖರ್ಚು ಮಾಡುತ್ತಿರುವ ಸಾವಿರಾರು ಕೋಟಿ ರೂಪಾಯಿ ಜನತೆಯ ತೆರಿಗೆ ಹಣ ಯಾರ ಜೇಬಿಗೆ ಸೇರುತ್ತಿದೆ. ಎಲ್ ಅಂಡ್ ಟಿ ಕಂಪನಿ ಜಲ ಮಂಡಳಿಯ ಕಾಮಗಾರಿಯನ್ನು ತೆಗೆದುಕೊಳ್ಳದಿರುವ ಕಾರಣ ಏನು ಎಂಬುದನ್ನು ಡಿ.ಕೆ. ಶಿವಕುಮಾರ್ ತಿಳಿಸಬೇಕು ಎಂದು ಆಗ್ರಹಿಸಿದರು. ಈ ಹಿಂದಿನ ಬಿಜೆಪಿ ಸರ್ಕಾರ ಕೊರೊನಾ ಸಂದರ್ಭದಲ್ಲಿ ಬೆಂಗಳೂರಿನಾದ್ಯಂತ 10,000 ಕೋಟಿ ರೂ.ಗಳನ್ನು ಖರ್ಚು ಮಾಡಿ ಹೊಸ ಪೈಪುಗಳನ್ನು ಅಳವಡಿಸಿದ ಕಾಮಗಾರಿಗಳಲ್ಲಿ ಸಾವಿರಾರು ಕೋಟಿ ಭ್ರಷ್ಟಾಚಾರ ಆಗಿದೆ. ಈ ಬಗ್ಗೆ ಗೊತ್ತಿದ್ದರೂ 40% ಕಮಿಷನ್ ಹೆಸರು ಹೇಳಿಕೊಂಡು ಅಧಿಕಾರಕ್ಕೆ ಬಂದ ಡಿ.ಕೆ. ಶಿವಕುಮಾರ್ ಎಕೆ ಇನ್ನೂ ತನಿಖೆಗೆ ಆದೇಶವನ್ನು ನೀಡಿಲ್ಲ ಎಂದು ಕಿಡಿ ಕಾರಿದರು.ಬೆಂಗಳೂರು ಜಲ ಮಂಡಳಿಯಲ್ಲಿ ಯಾರಿಗೂ ಗೊತ್ತಾಗದ ರೀತಿಯಲ್ಲಿ ಪ್ರತಿ ವರ್ಷ ನಡೆಯುವ ಸಾವಿರಾರು ಕೋಟಿ ರೂ. ಗಳ ಭ್ರಷ್ಟಾಚಾರಗಳನ್ನು ಮುಂದುವರಿಸಿಕೊಂಡು ಹೋಗುತ್ತಿದ್ದಾರೆ.

ಕಾವೇರಿ ನೀರಿನ ಸೋರಿಕೆ ತಡೆಗಟ್ಟಿಲ್ಲ. ನೀರಿನ ಅಕ್ರಮ ಸಂಪರ್ಕಗಳಿಗೆ ಕಡಿವಾಣ ಹಾಕಿಲ್ಲ. ಕೇವಲ ತಮ್ಮ ಸ್ವಾರ್ಥ ನೋಡಿಕೊಳ್ಳುತ್ತಿದ್ದಾರೆ. ಇದೀಗ ನೀರಿನ ದರ ಏರಿಕೆ ಮಾಡಲು ಸಜ್ಜಾಗಿದ್ದಾರೆ. ಇದರಿಂದ ಬೆಂಗಳೂರು ನಿವಾಸಿಗಳು ಆರ್ಥಿಕವಾಗಿ ತತ್ತರಿಸುವಂತಹ ಸ್ಥಿತಿಗೆ ತಲುಪುತ್ತಾರೆ ಎಂದು ಕಳವಳ ವ್ಯಕ್ತಪಡಿಸಿದರು. ಸರ್ಕಾರ ನೀರಿನ ದರ ಏರಿಕೆ ನಿರ್ಧಾರದಿಂದ ಹಿಂದೆ ಸರಿಯದಿದ್ದರೆ, ಆಮ್ ಆದ್ಮಿ ಪಕ್ಷ ಈ ಬಗ್ಗೆ ತೀವ್ರ ಹೋರಾಟಕ್ಕೆ ಇಳಿಯಬೇಕಾಗುತ್ತದೆ ಎಂದು ಅವರು ಎಚ್ಚರಿಕೆ ನೀಡಿದ್ದಾರೆ.

## ಅನ್ಯಪಕ್ಷಗಳ ನಾಯಕರಿಗೆ ಡಿಕೆಶಿ ಗಾಳ

ಅನ್ಯಪಕ್ಷಗಳಲ್ಲಿರುವ ಪ್ರಭಾವಿ ನಾಯಕರನ್ನು ಕಾಂಗ್ರೆಸ್‌ಗೆ ಸೆಳೆಯುವ ತಂತ್ರಗಾರಿಕೆಯನ್ನು ಕೆಪಿಸಿಸಿ ಅಧ್ಯಕ್ಷ ಹಾಗೂ ಡಿ.ಸಿ.ಎಂ. ಡಿ.ಕೆ.ಶಿವಕುಮಾರ್ ಮುಂದು ವರೆಸಿದ್ದು, ಹಲವು ನಾಯಕರಿಗೆ ಗಾಳ ಹಾಕಿದ್ದಾರೆ. ಬಿಜೆಪಿಯಲ್ಲಿರುವ ಶ್ರೀರಾಮುಲುರವರನ್ನು ಸೆಳೆಯುವ ತೆರೆಮರೆಯ ಯತ್ನ ಮುಂದುವರೆದಿದ್ದು, ಇದೀಗ ತುರುವೇಕೆರೆಯ ಮಾಜಿ ಶಾಸಕ ಮಸಾಲೆ ಜಯರಾಂ ಅವರನ್ನು ಕಾಂಗ್ರೆಸ್‌ಗೆ ಡಿ.ಕೆ.ಶಿವಕುಮಾರ್ ಆಹ್ವಾನಿಸಿದ್ದಾರೆ. ನಿನ್ನೆ ತಮ್ಮ ಪುತ್ರನ ಮದುವೆ ಆಮಂತ್ರಣ ನೀಡಲು ಮಸಾಲೆ ಜಯರಾಂ ಅವರು ಡಿ.ಕೆ.ಶಿವಕುಮಾರ್‌ರವರ ಮನೆಗೆ ಆಗಮಿಸಿದ್ದರು. ಈ ಸಂದರ್ಭದಲ್ಲಿ ಡಿ.ಕೆ. ಶಿವಕುಮಾರ್‌ರವರು ಹಲವು ನಾಯಕರ ಜೊತೆ ಚರ್ಚೆ ನಡೆಸಿದ್ದು ಪಕ್ಷ ಸೇರ್ಪಡೆ ಬಗ್ಗೆ ಅಭಿಪ್ರಾಯ ಸಂಗ್ರಹಿಸಿದ್ದಾರೆ ಎನ್ನಲಾಗಿದೆ. ಮಸಾಲೆ ಜಯರಾಂ ಅವರನ್ನು ಬೆಮೆಲ್ ಕಾಂತರಾಜು ಅವರು ಡಿ.ಕೆ. ಶಿವಕುಮಾರ್‌ರವರ ಮನೆಗೆ ಕರೆತಂದಿದ್ದರು. ಕಾಂತರಾಜು ಕಾಂಗ್ರೆಸ್ನಿಂದ, ಮಸಾಲೆ ಜಯರಾಂ ಬಿಜೆಪಿಯಿಂದ ತುರುವೇಕೆರೆ ವಿಧಾನಸಭಾ ಕ್ಷೇತ್ರದ ಚುನಾವಣೆಯಲ್ಲಿ ಸ್ಪರ್ಧಿಸಿದ್ದರು. ಡಿ.ಕೆ.ಶಿವಕುಮಾರ್‌ರವರ ಸೂಚನೆಯೊಂದಿಗೆ ಕಾಂತರಾಜು ಅವರು ಬೇರೆ ಕ್ಷೇತ್ರಗಳತ್ತ ಗಮನ ಹರಿಸಿದ್ದು, ಮಸಾಲೆ ಜಯರಾಂ ಕಾಂಗ್ರೆಸ್‌ಗೆ ಬಂದರೆ ತುರುವೇಕೆರೆಯನ್ನು ಬಿಟ್ಟುಕೊಡುವಂತೆ ಚರ್ಚೆಯಾಗಿದೆ ಎನ್ನಲಾಗಿದೆ.

ಬೆಮೆಲ್ ಕಾಂತರಾಜು ಅವರಿಗೆ ದೊಡ್ಡಬಳ್ಳಾಪುರ ಕ್ಷೇತ್ರದತ್ತ ಗಮನ ಹರಿಸಲು ಸೂಚನೆ ನೀಡಲಾಗಿದೆ. ದಾಸರಹಳ್ಳಿ ಅಥವಾ ತುಮಕೂರು ಗ್ರಾಮಾಂತರ ಕ್ಷೇತ್ರದ ಮೇಲೂ ಕಾಂತರಾಜು ಕಣ್ಣಿಟ್ಟಿದ್ದು ಆ ಎರಡೂ ಕ್ಷೇತ್ರಗಳಲ್ಲಿ ಈಗಾಗಲೇ ಡಿ.ಕೆ.ಶಿವಕುಮಾರ್ ಬೆಂಬಲಿಗರು ಅಲ್ಲಿ ಕೆಲಸ ಮಾಡುತ್ತಿದ್ದಾರೆ. ತುಮಕುರು ಜಿಲ್ಲಾ ರಾಜಕಾರಣದಲ್ಲಿ ಸಹಕಾರಿ ಸಚಿವರಾಗಿರುವ ಕೆ.ಎನ್.ರಾಜಣ್ಣ, ಗೃಹಮಂತ್ರಿ ಡಾ.ಜಿ.ಪರಮೇಶ್ವರ್ ಅವರು ಸಿದ್ದರಾಮಯ್ಯನವರ ಬಣದಲ್ಲಿ ಕಾಣಿಸಿಕೊಂಡಿದ್ದಾರೆ. ಡಿ.ಕೆ.ಶಿವಕುಮಾರ್‌ರವರ ಪರವಾಗಿ ತುಮಕೂರು ಜಿಲ್ಲೆಯಲ್ಲಿ ಪ್ರಭಾವಿ ನಾಯಕರು ಇಲ್ಲವಾಗಿದೆ. ಹೀಗಾಗಿ ಮಸಾಲೆ ಜಯರಾಂ ಅವರಿಗೆ ಡಿ.ಕೆ. ಶಿವಕುಮಾರ್ ಗಾಳ ಹಾಕಿದ್ದಾರೆ. ಒಂದು ವೇಳೆ ಅವರು ಕಾಂಗ್ರೆಸ್ ಗೆ ಆಗಮಿಸಿದರೆ ಡಿ.ಕೆ.ಶಿವಕುಮಾರ್ ಅವರ ಬಲ ಹೆಚ್ಚಾಗಲಿದೆ ಎಂಬ ಲೆಕ್ಕಾಚಾರಗಳಿವೆ.

# ಸುಗಮ ಸಂಚಾರ: 20 ಕಾರಿಡಾರ್ ನಿರ್ಮಾಣಕ್ಕೆ ಸರ್ಕಾರದ ಯೋಜನೆ

**ಬೆಂಗಳೂರು, ಜ. 29 :** ರಾಜಧಾನಿ ಬೆಂಗಳೂರು ಮಹಾನಗರದಲ್ಲಿ ಜನಸಂಖ್ಯೆಯಷ್ಟೇ ವಾಹನಗಳಿದ್ದು, ರಸ್ತೆ ಸಂಚಾರ ಹಳಿತಪ್ಪಿದೆ. ನಗರದೊಳಗೆ ದಟ್ಟಣೆ ಅವಧಿಯಲ್ಲಿ ಸರಾಸರಿ ವಾಹನಗಳ ಸಂಚಾರ ವೇಗ 10 ಕಿ.ಮೀ.ಗಿಂತ ಕಡಿಮೆ ಇದೆ. ಈ ಸಮಸ್ಯೆ ನಿವಾರಣೆಗಾಗಿ ಬಿಬಿಎಂಪಿಯು 55 ಸಾವಿರ ಕೋಟಿ ರೂ.ಮೊತ್ತದ 'ಬೆಂಗಳೂರು ನಗರ ಸಮಗ್ರ ಸಂಚಾರ ನಿರ್ವಹಣಾ ಮೂಲಸೌಕರ್ಯ ಯೋಜನೆ ಮೂಲಕ ಪರಿಹಾರ ಸೂತ್ರವನ್ನು ಸರ್ಕಾರದ ಮುಂದಿಟ್ಟಿದೆ. ನಗರದಲ್ಲಿ ಹೆಚ್ಚು ಟ್ರಾಫಿಕ್ ಸಮಸ್ಯೆ ಇರುವ ಪ್ರದೇಶಗಳನ್ನು ಗುರುತಿಸಿ ಆ ಭಾಗದಲ್ಲಿ ಸುಗಮ ಸಂಚಾರಕ್ಕೆ ಅವಕಾಶ ಕಲ್ಪಿಸಲು ಉದ್ದೇಶಿತ ಯೋಜನೆಯಲ್ಲಿ 20 ಕಾರಿಡಾರ್‌ಗಳನ್ನು ಗುರುತಿಸಲಾಗಿದೆ.

ಈ ಪೈಕಿ 16 ಎಲಿವೇಟೆಡ್ ಕಾರಿಡಾರ್ (2 ಅಂಡರ್‌ಪಾಸ್ ಸೇರಿ), ತಲಾ ಎರಡು ಡಬಲ್ ಡೆಕ್ಕರ್ ಕಾರಿಡಾರ್ ಮತ್ತು ಟನಲ್ ಕಾರಿಡಾರ್‌ಗಳನ್ನು ಅನುಷ್ಠಾನಕ್ಕೆ ತರುವ ಸಂಬಂಧ ಅಂತಿಮ ಕಾರ್ಯಸಾಧ್ಯತಾ ವರದಿಗೆ ಪಾಲಿಕೆ ತಾತ್ವಿಕ ಒಪ್ಪಿಗೆ ಸೂಚಿಸಿದೆ. ಇದನ್ನಾಧರಿಸಿಯೇ ಸರ್ಕಾರದ ಗಮನಕ್ಕೆ ತಂದು ಹಂತ ಹಂತವಾಗಿ ಕಾರಿಡಾರ್ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಉತ್ಸುಕತೆ ಹೊಂದಿದೆ.

**ಭಾರಿ ಮೊತ್ತದ ಯೋಜನಾ ವೆಚ್ಚ :** ಉದ್ದೇಶಿತ ಕಾರಿಡಾರ್‌ಗಳ ಕಾಮಗಾರಿಯನ್ನು ಜಾರಿಗೆ ತರಲು ಅಂದಾಜು 54,964 ಕೋಟಿ ರೂ. ಮೊತ್ತ ವೆಚ್ಚವಾಗಲಿದೆ. ಇದರಲ್ಲಿ ಎರಡು ಟನಲ್ ಕಾರಿಡಾರ್‌ಗೆ 40 ಸಾವಿರ ಕೋಟಿ ರೂ. ಖರ್ಚಾಗುವ ಸಾಧ್ಯತೆ ಇದೆ. ಉಳಿದ ಮೊತ್ತವು ಎಲಿವೇಟೆಡ್ ಡಬಲ್ ಡೆಕ್ಕರ್ ಕಾರಿಡಾರ್‌ಗೆ ವೆಚ್ಚವಾಗಲಿದೆ. ರಿಂಗ್ ರಸ್ತೆ ಸಂಪರ್ಕಿಸುವ 5 ಎಲಿವೇಟೆಡ್ ಕಾರಿಡಾರ್‌ಗಳಿಗೆ 9,650 ಕೋಟಿ ರೂ. ಆಗಲಿದೆ. ಗೊರಗುಂಟೆಪಾಳ್ಯ–ಯಶವಂತಪುರ–ಮೇಖ್ರಿ ವೃತ್ತ–ಹಲಸೂರು ಕೆರೆ–ಹಳೇ ಮದರಾಸು ರಸ್ತೆ–ಕೆ.ಆರ್.ಪುರ ಕಾರಿಡಾರ್‌ಗೆ 3,240 ಕೋಟಿ ರೂ. ಏರ್‌ಪೋರ್ಟ್ ಎರಡು ಪರ್ಯಾಯ ರಸ್ತೆ ಮೂಲಕ ಕೈಗೆತ್ತಿಕೊಳ್ಳಲಿರುವ ಎಲಿವೇಟೆಡ್ ಕಾರಿಡಾರ್‌ಗೆ ತಲಾ 1,800 ಕೋಟಿ ರೂ. (ತಲಾ 15 ಕಿ.ಮೀ.), ಮಾರೇನಹಳ್ಳಿ–ರಾಗಿಗುಡ್ಡದಿಂದ ಕನಕಪುರ ರಸ್ತೆಯ ನೈಸ್ ಜಂಕ್ಷನ್ ವರೆಗಿನ 10.5 ಕಿ.ಮೀ. ಉದ್ದ ಕಾರಿಡಾರ್‌ಗೆ 1,260 ಕೋಟಿ ರೂ. ಹಾಗೂ ಹಳೇ ಮದರಾಸು ರಸ್ತೆಯಿಂದ ಇಂದಿರಾನಗರ ಮಾರ್ಗವಾಗಿ ಸಿಲ್ಕ್ ಬೋರ್ಡ್ ವರೆಗಿನ 10 ಕಿ.ಮೀ. ಉದ್ದದ ಕಾರಿಡಾರ್‌ಗೆ 1,200 ಕೋಟಿ ರೂ. ವೆಚ್ಚವಾಗುವುದೆಂದು ವರದಿ ಸಿದ್ಧಪಡಿಸಿರುವ ದಿಲ್ಲಿ ಮೂಲದ ಕಂಪನಿಯು ಲೆಕ್ಕಚಾರ ಮಾಡಿದೆ. ಸಿಬಿಸಿಟಿಎಂಐಪಿ ಕಾರ್ಯಸಾಧ್ಯತಾ ವರದಿ ಆಧರಿಸಿ 20 ಕಾಮಗಾರಿಗಳ ಪೈಕಿ ಮೊದಲ ಹಂತದಲ್ಲಿ 10 ಎಲಿವೇಟೆಡ್ ಕಾರಿಡಾರ್ ಅನುಷ್ಠಾನಕ್ಕೆ ವಿಸ್ತೃತ ಯೋಜನಾ ವರದಿ (ಡಿಪಿಆರ್) ಸಿದ್ಧಪಡಿಸುವ ಸಂಬಂಧ ಕೆಲ ದಿನಗಳ ಹಿಂದೆ ಪಾಲಿಕೆಯು ಟೆಂಡರ್ ಆಹ್ವಾನಿಸಿದೆ.

ಮುಂದಿನ ಬಿಬಿಎಂಪಿ ಬಜೆಟ್‌ನಲ್ಲಿ ಈ ಕಾರಿಡಾರ್‌ಗಳನ್ನು ಸೇರ್ಪಡೆ ಮಾಡುವ ಬಗ್ಗೆಯೂ ಚಿಂತನೆ ನಡೆಸಲಾಗಿದೆ. ರಿಂಗ್ ರಸ್ತೆ ಸೇರಿ ಹೊರವಲಯದಲ್ಲಿನ ಜನರು ಒಂದು ಬದಿಯಿಂದ ಇನ್ನೊಂದು ಭಾಗಕ್ಕೆ ಸುಲಭವಾಗಿ ಹಾಗೂ ಕ್ಷಿಪ್ರವಾಗಿ ಸಂಚರಿಸಲು ಈ ಕಾರಿಡಾರ್ ಅಗತ್ಯವಿದೆ ಎಂದು ಪಾಲಿಕೆ ಪ್ರತಿಪಾದಿಸಿದೆ.

# 13 ಡಿಗ್ರಿ ಸೆಲ್ಸಿಯಸ್ ತಾಪಮಾನ ಇಳಿಕೆ




**ಬೆಂಗಳೂರು, ಜ. 29 :** ರಾಜ್ಯ ರಾಜಧಾನಿ ಬೆಂಗಳೂರಿನಲ್ಲಿ ಕಳೆದ ಕೆಲವು ದಿನಗಳಿಂದ ಚಳಿ ಆವರಿಸುತ್ತಿತ್ತು. ಆಗಾಗ ಮೈಕೊರೆವ ಚಳಿ ಸಹ ದಾಖಲಾಗಿತ್ತು. ಒಂದೊಮ್ಮೆ ನಗರದಲ್ಲಿ 13 ಡಿಗ್ರಿ ಸೆಲ್ಸಿಯಸ್‌ಗೂ ತಾಪಮಾನ ಇಳಿಕೆ ಆಗಿತ್ತು. ಇದೀಗ ಚಳಿಗಾಲ ಅಂತ್ಯ ಕಾಣುವ ಲಕ್ಷಣಗಳು ಗೋಚರಿಸಿವೆ. ಇನ್ನೇನು ಕೆಲವೇ ದಿನಗಳಲ್ಲಿ ಬಿರು ಬೇಸಿಗೆ, ಒಣ ಹವೆಯ ಆರ್ಭಟ ಶುರುವಾಗಲಿದೆ. ಬೆಂಗಳೂರಿಗೆ ಮುಂದಿನ ಐದು ದಿನಗಳ ಕಾಲ ಶುಷ್ಕ ವಾತಾವರಣದ ಎಚ್ಚರಿಕೆ ನೀಡಲಾಗಿದೆ.

ಬೆಂಗಳೂರಿನಾದ್ಯಂತ ಆಗಾಗ ಸುರಿಯುತ್ತಿದ್ದ ಮಳೆ, ಚಳಿ ಬಹುತೇಕ ಅಂತ್ಯಗೊಂಡಂತಾಗಿದೆ. ಆಗಾಗ ಕುಸಿತ ಕಾಣುತ್ತಿದ್ದ ಕನಿಷ್ಠ ತಾಪಮಾನದಲ್ಲಿ ಬದಲಾವಣೆ ಆಗಿದೆ. ಕನಿಷ್ಠ ತಾಪಮಾನವು ಸದ್ಯ 16 ಡಿಗ್ರಿ ಸೆಲ್ಸಿಯಸ್ ಇದೆ. ಇತ್ತ ಗರಿಷ್ಠ ತಾಪಮಾನವು ಏರಿಕೆ ಆಗುತ್ತಿದ್ದ 30 ಡಿಗ್ರಿ ಸೆಲ್ಸಿಯಸ್ ಇದೆ. ಇದು ಮುಂದಿನ ಕೇಲವೇ ದಿನಗಳಲ್ಲಿ 30 ಡಿಗ್ರಿ ಸೆಲ್ಸಿಯಸ್ ದಾಟಲಿದೆ. ಆಗ ನಗರಾದ್ಯಂತ ಒಣಹವೆಯ ವಾತಾವರಣ ಕಂಡು ಬರುತ್ತದೆ. ಈವರೆಗೆ ನಗರದ ಜನರು ಚಳಿಗೆ ಬೆಚ್ಚನೆಯ ಧಿರಿಸು ಧರಿಸಿ ಓಡಾಡುತ್ತಿದ್ದವರು, ಇದೀಗ ತೆಳ್ಳನೆಯ ಬಟ್ಟೆ ತೊಟ್ಟು ಫ್ಯಾನ್ ಮುಂದೆ, ಎಸಿ ಕೆಳಗೆ ಕೂರುವ ದಿನಗಳು ದೂರವಿಲ್ಲ.

ಈ ಬಾರಿಯು ಬೆಂಗಳೂರಿಗೆ ಇನ್ನಿಲ್ಲದಂತೆ ಮೈಸುಡುವ ಬಿಸಿಲ ಝಳ ದಾಖಲಾಗುವ ನಿರೀಕ್ಷೆ ಇದೆ. ಜನವರಿ 31 ರವರೆಗೆ ಕೊಂಚ ಸಾಮಾನ್ಯ ಚಳಿ, ಸಹಜ ವಾತಾವರಣ ಕಂಡು ಬರುತ್ತಿದೆ. ಫೆಬ್ರವರಿ 1ರಿಂದ ಬೆಂಗಳೂರು ಸೇರಿದಂತೆ ರಾಜ್ಯಾದ್ಯಂತ ಒಣಹವೆ ಕಂಡು ಬರಲಿದೆ.

ಉದ್ಯಾನ ನಗರಿ ಬೆಂಗಳೂರಿನಲ್ಲಿ ಈಗಾಗಲೇ ಮಧ್ಯಾಹ್ನ ಅಧಿಕ ಬಿಸಿಲಿನ ತಾಪ ಕಂಡು ಬರುತ್ತಿದೆ. ಫೆಬ್ರವರಿಯಲ್ಲಿ ಈ ಬಿಸಿಲಿನ ಪ್ರಮಾಣ ಮತ್ತಷ್ಟು ಹೆಚ್ಚಾಗುವ ಸಾಧ್ಯತೆ ಇದೆ.ಮುಂದಿನ ಮೂರು ದಿನ ಕೊಂಚ ಮಂಜಿನ ವಾತಾವರಣ ಇರಲಿದ್ದು, ನಂತರ ಮರೆಯಾಗಲಿದೆ. ಸಮುದ್ರ ಮಟ್ಟದಲ್ಲಿ ಉಂಟಾಗಿದ್ದ ವೈಪರಿತ್ಯಗಳು ಮರೆಯಾಗಿದೆ. ಇನ್ನೇನಿದ್ದರು ಸಂಪೂರ್ಣವಾಗಿ ಬೇಸಿಗೆ ಆರಂಭವಾಗಲಿದೆ.

ಬೆಳಗ್ಗೆ 09 ಗಂಟೆಯಿಂದ ಸಂಜೆ 05 ಗಂಟೆಗೆ ಇನ್ನಿಲ್ಲದ ಬಿಸಿಲು ಜನರನ್ನು ಕಾಡುವ ಸಾಧ್ಯತೆ ಇದೆ. ಈ ಕಾರಣದಿಂದ ಮುಂದಿನ ಐದು ದಿನಗಳ ಕಾಲ ಬೆಂಗಳೂರಿಗೆ ಹವಾಮಾನ ಇಲಾಖೆ ಒಣ ಹವೆಯ ಎಚ್ಚರಿಕೆ ನೀಡಿದೆ.ಮೊನ್ನೆಯಷ್ಟೇ ಜನವರಿ ಅಂತ್ಯ ಮತ್ತು ಫೆಬ್ರವರಿ ಮೊದಲ ವಾರ ಬೆಂಗಳೂರಿಗೆ ಸಾಧಾರಣ ಮಳೆಯ ಎಚ್ಚರಿಕೆ ನೀಡಲಾಗಿತ್ತು.

# ಕರ್ನಾಟಕದ 3ನೇ ತರಗತಿಯ ಶೇ. 7.1 ರಷ್ಟು ವಿದ್ಯಾರ್ಥಿಗಳಿಗೆ ಒಂದೇ ಒಂದು ಅಕ್ಷರ ಓದಲು ಬರುವುದಿಲ್ಲ




**ಬೆಂಗಳೂರು, ಜ. 29 :** ಮಂಗಳವಾರ ಬಿಡುಗಡೆಯಾದ ವಾರ್ಷಿಕ ಶಿಕ್ಷಣ ಸ್ಥಿತಿ ವರದಿ 2024, ಗ್ರಾಮೀಣ ಕರ್ನಾಟಕದ ಶಾಲೆಗಳಲ್ಲಿ ಓದುತ್ತಿರುವ 3 ನೇ ತರಗತಿಯ ಶೇ. 7.1 ರಷ್ಟು ವಿದ್ಯಾರ್ಥಿಗಳು ಒಂದೇ ಒಂದು ಅಕ್ಷರವನ್ನು ಓದಲು ಸಾಧ್ಯವಿಲ್ಲ ಎಂದು ಬಹಿರಂಗಪಡಿಸಿದೆ. ವರದಿಯಲ್ಲಿ ದಾಖಲಾಗಿರುವಂತೆ, 3 ನೇ ತರಗತಿಯ ಶೇ. 19.3 ರಷ್ಟು ವಿದ್ಯಾರ್ಥಿಗಳು ಅಕ್ಷರಗಳನ್ನು ಓದಬಲ್ಲರು, ಆದರೆ ಪದಗಳು ಅಥವಾ ವಾಕ್ಯಗಳನ್ನು ಓದಲು ಸಾಧ್ಯವಿಲ್ಲ ಮತ್ತು ಶೇ. 36.2 ರಷ್ಟು ವಿದ್ಯಾರ್ಥಿಗಳು ಪದಗಳನ್ನು ಓದಬಲ್ಲರು, ಆದರೆ 1 ನೇ ತರಗತಿ ಅಥವಾ ಅದಕ್ಕಿಂತ ಹೆಚ್ಚಿನ ಹಂತದ ಪಠ್ಯವನ್ನು ಓದಲು ಸಾಧ್ಯವಿಲ್ಲ. ವರದಿಯಲ್ಲಿ ಉಲ್ಲೇಖಿಸಿದಂತೆ, ಶೇ. 21.5 ರಷ್ಟು ಜನರು 1 ನೇ ತರಗತಿಯ ಪಠ್ಯವನ್ನು ಓದಬಲ್ಲರು, ಆದರೆ 2 ನೇ ತರಗತಿಯ ಪಠ್ಯವನ್ನು ಓದಲು ಸಾಧ್ಯವಿಲ್ಲ ಮತ್ತು ಶೇ. 15.9 ರಷ್ಟು ಜನರು 2 ನೇ ತರಗತಿಯ ಪಠ್ಯವನ್ನು ಓದಬಲ್ಲರು.ಆದಾಗ್ಯೂ, 2 ನೇ ತರಗತಿಯ ಶೇ. 1 ರ ಪಠ್ಯಪುಸ್ತಕಗಳನ್ನು ಓದಬಲ್ಲ 3 ನೇ ತರಗತಿಯ ವಿದ್ಯಾರ್ಥಿಗಳ ಶೇಕಡಾವಾರು ಪ್ರಮಾಣವು ಸ್ವಲ್ಪ ಹೆಚ್ಚಾಗಿದೆ

ಸಮೀಕ್ಷೆಯ ವರದಿಯ ಪ್ರಕಾರ, ಸರ್ಕಾರಿ ಶಾಲೆಗಳಲ್ಲಿ, ಇದು 2024 ರಲ್ಲಿ 2022 ರಲ್ಲಿ ಶೇಕಡಾ 7.7 ರಿಂದ ಶೇಕಡಾ 15.4 ಕ್ಕೆ ದ್ವಿಗುಣಗೊಂಡಿದೆ ಮತ್ತು ಖಾಸಗಿ ಶಾಲೆಗಳಲ್ಲಿ, ಇದು ಶೇಕಡಾ 11.7 ರಿಂದ ಶೇಕಡಾ 17.2 ಕ್ಕೆ ಏರಿದೆ.ನಸರ್ಕಾರಿ ಶಾಲೆಗಳಲ್ಲಿ 3 ನೇ ತರಗತಿಯ ವಿದ್ಯಾರ್ಥಿಗಳಲ್ಲಿ ಕೇವಲ ಶೇಕಡಾ 23.9 ರಷ್ಟು ಮಾತ್ರ ಸಂಖ್ಯಾತ್ಮಕ ವ್ಯವಕಲನವನ್ನು ಮಾಡಬಹುದು ಎಂದು ವರದಿ ಹೇಳಿದೆ.ಹಿಂದಿನ ಸಮೀಕ್ಷೆಯ ಸಮಯದಲ್ಲಿ ಫಲಿತಾಂಶಗಳು ಶೇಕಡಾ 19.6 ಕ್ಕೆ ಹೋಲಿಸಿದರೆ ಸುಧಾರಿಸಿದ್ದರೂ, ಖಾಸಗಿ ಪ್ರತಿರೂಪಗಳಿಗೆ ಹೋಲಿಸಿದರೆ ಇದು ಕಡಿಮೆಯಾಗಿದೆ, ಅಲ್ಲಿ ಅವರು ಶೇಕಡಾ 31.1 ರಷ್ಟು ವರದಿ ಮಾಡಿದ್ದಾರೆ. ತಮ್ಮ ಸಂಖ್ಯಾತ್ಮಕ ಕೌಶಲ್ಯವನ್ನು ಪರೀಕ್ಷಿಸಲು, ಮಕ್ಕಳು ಸಾಲ ಪಡೆಯುವುದರೊಂದಿಗೆ ಎರಡು–ಅಂಕಿಯ ವ್ಯವಕಲನದಿಂದ ಎರಡು–ಅಂಕಿಯ ವ್ಯವಕಲನವನ್ನು ಮಾಡುತ್ತಾರೆಂದು ನಿರೀಕ್ಷಿಸಲಾಗಿತ್ತು.

5 ನೇ ತರಗತಿಯಲ್ಲಿ 5 ನೇ ತರಗತಿಯಲ್ಲಿ 19 ಪ್ರತಿಶತ ಮತ್ತು 8 ನೇ ತರಗತಿಯಲ್ಲಿ 35 ಪ್ರತಿಶತದಷ್ಟು ಸರ್ಕಾರಿ ಶಾಲಾ ಮಕ್ಕಳು ಮಾತ್ರ ಭಾಗಾಕಾರವನ್ನು ಮಾಡಬಹುದು ಎಂದು ವರದಿ ಬಹಿರಂಗಪಡಿಸಿದೆ, ಇದು ಖಾಸಗಿ ಶಾಲೆಗಳಲ್ಲಿ ಕ್ರಮವಾಗಿ ಶೇಕಡಾ 25 ಮತ್ತು 43 ಪ್ರತಿಶತ.2024 ರ ವಾರ್ಷಿಕ ಶಿಕ್ಷಣ ಸ್ಥಿತಿ ವರದಿ (ಂಖಇಖ) ಪ್ರಕಾರ, ಕರ್ನಾಟಕವು ಸರ್ಕಾರಿ ಶಾಲೆಗಳಲ್ಲಿ 6 ರಿಂದ 14 ವರ್ಷ ವಯಸ್ಸಿನ ಮಕ್ಕಳ ದಾಖಲಾತಿಯಲ್ಲಿ ಇಳಿಕೆ ಕಂಡಿದೆ.2022 ರಲ್ಲಿ ಇದು ಶೇಕಡಾ 76 ರಷ್ಟಿತ್ತು ಮತ್ತು ಇತ್ತೀಚಿನ ವರದಿಯಲ್ಲಿ ಶೇಕಡಾ 71 ಕ್ಕೆ ಇಳಿದಿದೆ. ಶೇಕಡಾ 83 ಶಾಲೆಗಳು 60 ಕ್ಕಿಂತ ಕಡಿಮೆ ವಿದ್ಯಾರ್ಥಿಗಳನ್ನು ಹೊಂದಿವೆ ಎಂದು ವರದಿಯು ಎತ್ತಿ ತೋರಿಸಿದೆ. ಆದಾಗ್ಯೂ, ಪೂರ್ವ ಪ್ರಾಥಮಿಕ ಹಂತದಲ್ಲಿ 4 ವರ್ಷ ವಯಸ್ಸಿನ ಮಕ್ಕಳ ದಾಖಲಾತಿ ಶೇಕಡಾ 95 ಮೀರಿದೆ.

ಪ್ರತಿಯೊಂದು ಕಾರ್ಯದ ಕಾರ್ಯಕ್ಷಮತೆಯಲ್ಲಿ ಲಿಂಗ ಅಂತರವನ್ನು ಗಮನಿಸಲಾಗಿದೆ, ಸ್ಮಾರ್ಟ್‌ಫೋನ್‌ನಲ್ಲಿ ಎಚ್ಚರಿಕೆ ನೀಡುವ ಮಕ್ಕಳ ಸಾಮರ್ಥ್ಯದಲ್ಲಿ ಅತಿದೊಡ್ಡ ಅಂತರವಿದೆ (ಶೇಕಡಾ 72.4 ಹುಡುಗಿಯರಿಗೆ ಹೋಲಿಸಿದರೆ ಶೇಕಡಾ 81.5 ಹುಡುಗರು). ಕರ್ನಾಟಕ, ಆಂಧ್ರಪ್ರದೇಶ ಮತ್ತು ಕೇರಳದಂತಹ ಕೆಲವು ದಕ್ಷಿಣ ರಾಜ್ಯಗಳಲ್ಲಿ, ಹುಡುಗಿಯರು ಹುಡುಗರಿಗಿಂತ ಉತ್ತಮ ಪ್ರದರ್ಶನ ನೀಡುತ್ತಾರೆ. ಅಥವಾ ಅವರಂತೆಯೇ ಇರುತ್ತಾರೆ.

ಸಮೀಕ್ಷೆಯ ಸಮಯದಲ್ಲಿ ಶೇ. 93 ರಷ್ಟು ಮಕ್ಕಳು ಮನೆಯಲ್ಲಿ ಸ್ಮಾರ್ಟ್‌ಫೋನ್‌ಗಳನ್ನ ಹೊಂದಿದ್ದಾರೆ ಮತ್ತು ಅವರಲ್ಲಿ ಶೇ. 76 ರಷ್ಟು ಜನರು ಸ್ಮಾರ್ಟ್‌ಫೋನ್‌ಗಳನ್ನ ಬಳಸಲು ಸಮರ್ಥರಾಗಿದ್ದಾರೆ ಮತ್ತು ಶೇ. 63 ರಷ್ಟು ಜನರು ಸ್ಮಾರ್ಟ್‌ಫೋನ್‌ಗಳನ್ನು ಶಾಲೆಗೆ ತರಬಲ್ಲವ ರಾಗಿದ್ದಾರೆ. 14 ರಿಂದ 16 ವರ್ಷ ವಯಸ್ಸಿನ ಮಕ್ಕಳಲ್ಲಿ ಶೇ. ಎಪ್ಪತ್ತು ಮಕ್ಕಳು ಸಾಮಾಜಿಕ ಮಾಧ್ಯಮವನ್ನು ಬಳಸಿಕೊಂಡು ಉಲ್ಲೇಖ ವಾರದಲ್ಲಿ ಸಾಮಾಜಿಕ ಮಾಧ್ಯಮದಲ್ಲಿ ಸಕ್ರಿಯರಾಗಿದ್ದಾರೆಂದು ದಾಖಲಾಗಿದೆ.



ನಬಾರ್ಡ್ ನೀತಿ ಮತ್ತು ಕಿರುಬಂಡವಾಳ ಸಂಸ್ಥೆಗಳ ಮೇಲಿನ ಕಿರುಕುಳವನ್ನು ಖಂಡಿಸಿ ಶಾಸಕ ದರ್ಶನ್ ಪುಟ್ಟಣ್ಣಯ್ಯ ನೇತೃತ್ವದಲ್ಲಿ ಕರ್ನಾಟಕ ರಾಜ್ಯ ರೈತ ಸಂಘದ ಸದಸ್ಯರು ಬುಧವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸಿದರು.

# ರಾಜ್ಯದಲ್ಲಿ ಮೊದಲ ಬಾರಿಗೆ ಡ್ರೋಣ್ ಸಿಂಪಡಣೆ ಕೇಂದ್ರ ಸ್ಥಾಪನೆ

**ಕಲಬುರಗಿ, ಜ.29–** ಇತ್ತೀಚಿಗೆ ಕೃಷಿಯಲ್ಲಿ ಆಧುನಿಕ ತಂತ್ರಜ್ಞಾನಗಳನ್ನು ಹೆಚ್ಚಾಗಿ ಬಳಸಲಾಗುತ್ತಿದೆ. ನಾಟಿ ಮಾಡುವ ಯಂತ್ರ, ಕಟಾವು ಯಂತ್ರ, ಕೀಟನಾಶಕ ಸಿಂಪಡಣೆ ಯಂತ್ರ ಹೀಗೆ ಅನೇಕ ಯಂತ್ರಗಳ ಸಹಾಯವನ್ನು ರೈತರು ಪಡೆದುಕೊಳ್ಳುತ್ತಿದ್ದು, ಇದರಿಂದ ಕೃಷಿ ಕಾರ್ಮಿಕರ ಕೊರತೆ ನೀಗುತ್ತಿದೆ. ಇದೀಗ ಕೃಷಿ ಡ್ರೋನ್‌ಗಳು ಸಹ ಮಾರುಕಟ್ಟೆಗೆ ಬಂದಿದ್ದು, ಕೆಲವೇ ಕೆಲ ರೈತರಷ್ಟೇ ಇದರ ಉಪಯೋಗ ಪಡೆಯುತ್ತಿದ್ದಾರೆ. ದುಬಾರಿ ವೆಚ್ಚ ಭರಿಸಲಾಗದೇ ಕೃಷಿ ಡ್ರೋನ್ ಬಳಕೆಗೆ ಹಿಂದೇಟು ಹಾಕುತ್ತಿರುವ ರೈತರ ಸಹಾಯಕ್ಕಾಗಿ ರಾಜ್ಯ ಸರ್ಕಾರ ಮಹತ್ವದ ಹೆಜ್ಜೆ ಇಟ್ಟಿದೆ.

ರಾಜ್ಯದಲ್ಲಿ ಇದೇ ಮೊದಲ ಬಾರಿಗೆ ಕೃಷಿ ಡ್ರೋನ್ ಸಿಂಪಡಣೆ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಸದ್ಯ ಕಲಬುರಗಿ ಜಿಲ್ಲೆಯಲ್ಲಿ ನಾಲ್ಕು ಕೃಷಿ ಡ್ರೋನ್ ಸಿಂಪಡಣೆ ಕೇಂದ್ರಗಳನ್ನು ತೆರೆಯಲಾಗಿದ್ದು, ಈ ಬಗ್ಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಮಾಹಿತಿ ನೀಡಿದರು.

ಕರ್ನಾಟಕದಲ್ಲಿ ಇದೇ ಮೊದಲ ಬಾರಿಗೆ, ಕಲಬುರಗಿ ಜಿಲ್ಲೆಯ ರೇವೂರ್ ಬಿ, ಉಡಗಿ,



ಕಲಬುರಗಿ ಜಿಲ್ಲೆಯಲ್ಲಿ ನಾಲ್ಕು ಕೃಷಿ ಡ್ರೋಣ್ ಸಿಂಪರಣೆ ಕೇಂದ್ರಗಳನ್ನು ತೆರೆದಿರುವುದನ್ನು ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಪರಿಶೀಲನೆ ನಡೆಸಿ, ರಾಜ್ಯದಲ್ಲಿ ಇದೇ ಮೊದಲ ಬಾರಿಗೆ ಕೃಷಿ ಡ್ರೋನ್ ಸಿಂಪಡಣೆ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ಎಂದರು.

ನಾಲವಾರ ಮತ್ತು ಕಮಲಾಪುರ ಹೋಬಳಿ ಮಟ್ಟದಲ್ಲಿ ನಾಲ್ಕು ಕೃಷಿ ಡ್ರೋನ್ ಸಿಂಪಡಣೆ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಈ ಯೋಜನೆಗೆ ನೆರವಾಗಲು 16 ಕೃಷಿ ಡ್ರೋನ್‌ಗಳು, 15 ಬ್ಯಾಟರಿ ಚಾಲಿತ ತ್ರಿಚಕ್ರ ವಾಹನಗಳು ಮತ್ತು ಮೂರು ಜನರೇಟರ್‌ಗಳು ಸೇರಿದಂತೆ 34 ಅತ್ಯಾಧುನಿಕ ಯಂತ್ರಗಳನ್ನು ಖರೀದಿಸಲಾಗಿದೆ. ಬಾಡಿಗೆ ಆಧಾರದ ಮೇಲೆ ಕೈಗೆಟುಕುವ ಡ್ರೋನ್ ಸೇವೆಗಳನ್ನು ಒದಗಿಸುವ ಮೂಲಕ ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಬೆಂಬಲ ನೀಡುವುದು, ಕೀಟಗಳು ಹಾಗೂ ರೋಗಬಾಧೆಗಳನ್ನು ನಿರ್ವಹಿಸಲು ಸಹಾಯ ಮಾಡುವುದು, ಬೆಳೆ ನಷ್ಟ ತಗ್ಗಿಸುವುದು, ಇಳುವರಿ ಸುಧಾರಿಸುವುದು ಮತ್ತು ಕೀಟನಾಶಕಗಳು ಹಾಗೂ ರಸಗೊಬ್ಬರಗಳ ಅತ್ಯುತ್ತಮ ಬಳಕೆಯ ಮೂಲಕ ನಿಖರ ಕೃಷಿಯನ್ನು ಉತ್ತೇಜಿಸುವುದು ಈ ಯೋಜನೆಯ ಗುರಿಯಾಗಿದೆ ಎಂದರು.

ಇದು ಕೃಷಿಯಲ್ಲಿನ ಕಾರ್ಮಿಕರ ಕೊರತೆ ಯಂತಹ ಪ್ರಮುಖ ಸಮಸ್ಯೆಗೆ ಕೂಡ ಪರಿಹಾರ ನೀಡುತ್ತದೆ. ಅಲ್ಲದೇ, ರೈತರ ಕೀಟನಾಶಕಗಳಿಗೆ ಒಡ್ಡಿಕೊಳ್ಳುವಂತಹ ಅಪಾಯವನ್ನು ಕಡಿಮೆ ಮಾಡುತ್ತದೆ. ಮತ್ತು ಉತ್ತಮ ಸುರಕ್ಷತೆ ಹಾಗೂ ದಕ್ಷತೆಯನ್ನು ಖಾತರಿಪಡಿಸುತ್ತದೆ. ರೈತರು ಆನ್‌ಲೈನ್ ಪ್ಲಾಟ್‌ಫಾರ್ಮ್‌ಗಳು ಅಥವಾ ಕ್ಯೂಆರ್ ಕೋಡ್‌ಗಳ ಮೂಲಕ ಈ ಸೇವೆಗಳನ್ನು ಸುಲಭವಾಗಿ ಪಡೆದುಕೊಳ್ಳಬಹುದು.

ಈ ಕಾರ್ಯಕ್ರಮವನ್ನು ಕಲಬುರಗಿ ಜಿಲ್ಲೆಯ ಎಲ್ಲಾ 32 ಹೋಬಳಿಗಳಿಗೆ ವಿಸ್ತರಿಸುವ ಗುರಿ ಇದೆ. ಅತ್ಯಾಧುನಿಕ ಕೃಷಿ ತಂತ್ರಜ್ಞಾನವನ್ನು ನೇರವಾಗಿ ರೈತರ ಮನೆ ಬಾಗಿಲಿಗೆ ತರುವ ಗುರಿ ನಮ್ಮದಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

# ಕಡಿಮೆ ಅರಣ್ಯವಿರುವ 16 ಜಿಲ್ಲೆಗಳಿಗೆ ವಿಶೇಷ ಯೋಜನೆ: ಸಚಿವ ಈಶ್ವರ್ ಖಂಡ್ರೆ



**ಬೀದರ್, ಜ.29–** ಕಲ್ಯಾಣ ಕರ್ನಾಟಕದ ಜಿಲ್ಲೆಗಳೂ ಸೇರಿದಂತೆ ಹಸಿರು ಹೊದಿಕೆ ಮತ್ತು ಅರಣ್ಯ ವ್ಯಾಪ್ತಿ ಕಡಿಮೆ ಇರುವ ರಾಜ್ಯದ 16 ಜಿಲ್ಲೆಗಳಿಗೆ ವಿಶೇಷ ಯೋಜನೆ ಸಿದ್ಧಪಡಿಸುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸೂಚಿಸಿದ್ದಾಗಿ ಇಂದಿಲ್ಲಿ ತಿಳಿಸಿದರು.

ಅತ್ಯಧಿಕ ಬಿಸಿಲು ಹೊಂದಿರುವ ವಿಜಯಪುರ, ಕಲಬುರಗಿ, ರಾಯಚೂರು, ಯಾದಗಿರಿ, ಬಳ್ಳಾರಿ, ಬೀದರ್ ಸೇರಿದಂತೆ ಹಸಿರು ವ್ಯಾಪ್ತಿ ಕಡಿಮೆ ಇರುವ ಜಿಲ್ಲೆಗಳಲ್ಲಿ ಎತ್ತರದ ಸಸಿಗಳನ್ನು ಹೆಚ್ಚು ಹೆಚ್ಚು ನೆಟ್ಟು, ಅವುಗಳ ನಿರ್ವಹಣೆ, ಜಿಯೋ ಟ್ಯಾಗ್ ಮಾಡಿ ಸಂರಕ್ಷಿಸುವಂತೆ ಉಪ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ ಸೂಚಿಸಿದ್ದಾಗಿ ತಿಳಿಸಿದರು.

ಹಸಿರು ಹೊದಿಕೆ ಕಡಿಮೆ ಇರುವ ಜಿಲ್ಲೆಗಳಲ್ಲಿನ ಹೆದ್ದಾರಿಗಳು, ಜಿಲ್ಲಾ ಮುಖ್ಯ ರಸ್ತೆ ಮತ್ತು ಗ್ರಾಮೀಣ ರಸ್ತೆಗಳನ್ನು ಗುರುತಿಸಿ ರಸ್ತೆಯ ಎರಡೂ ಬದಿಯಲ್ಲಿ ಸಸಿಗಳನ್ನು ನೆಟ್ಟು ಬೆಳೆಸಬೇಕು. ಅದಕ್ಕೆ ಈಗಿನಿಂದಲೇ ರಸ್ತೆಗಳನ್ನು ಗುರುತಿಸಿ, ಕಾರ್ಯಯೋಜನೆ ರೂಪಿಸಿ ಎಂದು ತಿಳಿಸಿದರು.

ಅರಣ್ಯ ಇಲಾಖೆಯ ಪ್ರಾದೇಶಿಕ ಮತ್ತು ಸಾಮಾಜಿಕ ಅರಣ್ಯ ವಿಭಾಗದ ಎಲ್ಲ ನರ್ಸರಿಗಳಲ್ಲಿ ಸ್ಥಳೀಯ ಗಿಡಗಳನ್ನು ಬೆಳೆಸಲು ಮತ್ತು ಹೆಚ್ಚಿನ ಪ್ರಮಾಣದಲ್ಲಿ ಎತ್ತರದ ಸಸಿಗಳನ್ನು ಬೆಳೆಸಲು ಕ್ರಮವಹಿಸುವಂತೆ ಸೂಚಿಸಿದರು. ಇಂದು ಇಡೀ ಜಗತ್ತು ತಾಪಮಾನ ಏರಿಕೆ ಮತ್ತು ಹವಾಮಾನ ಬದಲಾವಣೆಯ ಸಮಸ್ಯೆ ಎದುರಿಸುತ್ತಿದೆ. ವೃಕ್ಷ ಸಂಪತ್ತು ಸಂರಕ್ಷಿಸುವ ಜವಾಬ್ದಾರಿ ಹೊತ್ತಿರುವ ಅರಣ್ಯ ಇಲಾಖೆಯ ಅಧಿಕಾರಿಗಳು ಮುಂದಿನ ಪೀಳಿಗೆಗೆ ಆರೋಗ್ಯಪೂರ್ಣ ಭೂಮಿಯನ್ನು ನೀಡಲು ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದು ತಿಳಿಸಿದರು.

# ರಸ್ತೆ ಸುರಕ್ಷತೆ ಕುರಿತು ಜಾಗೃತಿ ಕಾರ್ಯಕ್ರಮ

**ವಿಜಯಪುರ ಜ.29–**ರಸ್ತೆಗಳನ್ನು ದಾಟುವಾಗ, ವಾಹನಗಳನ್ನು ಚಲಾಯಿಸುವಾಗ ಕಡ್ಡಾಯವಾಗಿ ಸುರಕ್ಷತಾ ನಿಯಮ ಪಾಲಿಸಬೇಕೆಂದು ಜಿಲ್ಲಾಧಿಕಾರಿ ಟಿ.ಭೂಬಾಲನ್ ಹೇಳಿದರು.




ಭಾರತ ಸರ್ಕಾರದ ಯುವ ಕಾರ್ಯ ಮತ್ತು ಕ್ರೀಡಾ ಸಚಿವಾಲಯದ ನೆಹರು ಯುವ ಕೇಂದ್ರ, ಜಿಲ್ಲಾ ಸಂಚಾರಿ ಪೊಲೀಸ್ ಠಾಣೆ, ಹಾಗೂ ಭಾರತ ಸ್ಕೌಟ್ & ಗೈಡ್ಸ್ ಇವರ ಸಂಯುಕ್ತಾಶ್ರಯದಲ್ಲಿ ಇತ್ತೀಚೆಗೆ ಗಾಂಧಿ ವೃತ್ತದ ಪೊಲೀಸ್ ಠಾಣೆ ಆವರಣದಲ್ಲಿ ಆಯೋಜಿಸಿದ "ರಸ್ತೆ ಸುರಕ್ಷತಾ ಜಾಗೃತಿ ಆಂದೋಲನ" ಹಾಗೂ "ರಸ್ತೆ ಸಂಚಾರಿಕೆ ಸ್ವಯಂ ಸೇವಕರ ಬೆಂಬಲ" ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು 18 ವರ್ಷ ಒಳಗಿನ ಮಕ್ಕಳಿಗೆ ವಾಹನ ಚಾಲನೆ ಮಾಡದಂತೆ ಪಾಲಕರು ನಿಗಾ ವಹಿಸಬೇಕು ಎಂದು ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ನೆಹರು ಯುವ ಕೇಂದ್ರದ ಜಿಲ್ಲಾ ಯುವ ಅಧಿಕಾರಿಗಳಾದ ರಾಹುಲ ಎಸ್ ಡೊಂಗರೆ ಪ್ರಾಸ್ತಾವಿಕವಾಗಿ ಮಾತನಾಡಿ ನಗರದ ವಿವಿಧ ಜನನಿಬಿಡ ಪ್ರದೇಶಗಳಲ್ಲಿ ರಸ್ತೆ ಸುರಕ್ಷತಾ ಕುರಿತು ಅರಿವು ಮೂಡಿಸಲಾಗುತ್ತಿದೆ ಎಂದು ಅವರು ತಿಳಿಸಿದರು.

ಭಾರತ ಸ್ಕೌಟ್ & ಗೈಡ್ಸ್ ಜಿಲ್ಲಾ ಸಂಘಟಕರಾದ ರಾಜಶೇಖರ್ ಖೇಡಗಿ, ಎಎಸ್‌ಐಗಳಾದ ಎಸ್ ಆರ್ ಚವ್ಹಾಣ, ಎಸ್.ಎಸ್. ಕಟ್ಟಿಮಣಿ, ಪೊಲೀಸ್ ಕಾನ್ಸ್‌ಟೇಬಲ್ ಕೆ.ಎಸ್.ಗೋಟ್ಯಾಳ, ಎಸ್.ಜಿ.ಕುಂಬಾರ, ಎಸ್.ಎಂ.ದೋಣಿ ಹಾಗೂ ಶಾಲಾ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಮಗುವಿಗೆ ದಡಾರ ರೂಬೆಲ್ಲಾ ಲಸಿಕೆ ತಪ್ಪದೇ ಹಾಕಿಸಿ- ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ

**ಬಳ್ಳಾರಿ, ಜ.29–**ಮಗುವಿಗೆ ಒಂಬತ್ತು ತಿಂಗಳು ತುಂಬಿದ ನಂತರ ದಡಾರ ರೂಬೆಲ್ಲಾ ಲಸಿಕೆ ತಪ್ಪದೇ ಹಾಕಿಸಬೇಕು. ದಡಾರ (ಅಮ್ಮ) ದಿಂದಾಗುವ ಗಂಭೀರ ಆರೋಗ್ಯ ಸಮಸ್ಯೆಗಳನ್ನು ತಪ್ಪಿಸಬೇಕು ಎಂದು ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ ಅವರು ಹೇಳಿದರು.



ಆಡು ಭಾಷೆಯಲ್ಲಿ ಅಮ್ಮ, ತಟ್ಟು ಎಂದು ಕರೆಯುವ ದಡಾರವನ್ನು ನಿರ್ಮೂಲನೆ ಮಾಡಲು ಮತ್ತು ಮಕ್ಕಳಿಗೆ ದಡಾರ ಕಂಡು ಬಂದರೂ ಮಕ್ಕಳಿಗೆ ಗಂಭೀರ ಆರೋಗ್ಯ ಸಮಸ್ಯೆ ತರಬಹುದಾದುದನ್ನು ತಪ್ಪಿಸಲು ತಪ್ಪದೇ ದಡಾರ ಲಸಿಕೆ ಹಾಕಿಸಬೇಕು ಎಂದು ಜನತೆಗೆ ಮನವಿ ಮಾಡಿದರು.

ತಪ್ಪು ನಂಬಿಕೆಗಳಿಂದ ಲಸಿಕೆ ಪಡೆಯದ ಕುಟುಂಬಗಳ ಪಾಲಕರಿಗೆ ಜಾಗೃತಿ ನೀಡಿಲಾಗುತ್ತಿದೆ. ವಲಸೆ ಜನರಲ್ಲಿ ಹೆಚ್ಚಿನ ಅರಿವು ಮೂಡಿಸಲಾಗುತ್ತಿದೆ. ಅಲ್ಲದೆ ಹೆರಿಗೆ ನಂತರದಲ್ಲಿ ನವಜಾತ ಶಿಶುವಿಗೆ 12 ಮಾರಕ ರೋಗಗಳ ವಿರುದ್ಧ ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸಲು ವಯಸ್ಸಿಗನುಸಾರವಾಗಿ ನೀಡುವ ಲಸಿಕೆಗಳನ್ನು ಹಾಕಲಾ ಗುತ್ತಿದ್ದು, ಪ್ರತಿ ಗುರುವಾರ ನಿಮ್ಮ ಹತ್ತಿರದ ನಗರ ಆರೋಗ್ಯ ಕೇಂದ್ರಗಳಲ್ಲಿ ಉಚಿತ ಲಸಿಕೆ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

# ಪರೀಕ್ಷಾ ಕೇಂದ್ರಗಳ ಸುತ್ತ 200 ಮೀಟರ್ ಪ್ರದೇಶದಲ್ಲಿ ನಿರ್ಬಂಧ

**ವಿಜಯಪುರ ಜ.29–**ಕರ್ನಾಟಕ ಶಾಲಾ ಪರೀಕ್ಷೆ ಹಾಗೂ ಮೌಲ್ಯ ನಿರ್ಣಯ ಮಂಡಳಿಯ ನಡೆಸುವ ಗಣಕಯಂತ್ರ ಪ್ರವೇಶ ಪರೀಕ್ಷೆಗಳು ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ವಿಜಯಪುರ ನೀಲಕಂಠೇಶ್ವರ ನಗರ ಹಾಗೂ ಅಲ್–ಅಮೀನ್ ಮೆಡಿಕಲ್ ಕಾಲೇಜ ಪರೀಕ್ಷಾ ಕೇಂದ್ರ ಗಳಲ್ಲಿ ಫೆ.3 ರಿಂದ ಫೆ.10ರ ವರೆಗೆ ಜರುಗಲಿದ್ದು, ಕಾನೂನು ಸುವ್ಯವಸ್ಥೆ ಕಾಪಾಡಲು ಹಾಗೂ ಮುನ್ನೆಚ್ಚರಿಕೆ ಕ್ರಮವಾಗಿ ಪರೀಕ್ಷಾ ಕೇಂದ್ರಗಳ ಸುತ್ತಲಿನ 200 ಮೀಟರ್ ಪ್ರದೇಶದಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾ ದಂಡಾಧಿಕಾರಿಗಳಾದ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಆದೇಶ ಹೊರಡಿಸಿದ್ದಾರೆ.

ಪರೀಕ್ಷಾ ದಿನದಂದು ಪರೀಕ್ಷೆಯಲ್ಲಿ ತೊಡಗಿರುವ ಯಾವುದೇ ಅಧಿಕಾರಿ, ಸಿಬ್ಬಂದಿ ಹಾಗೂ ಅಭ್ಯರ್ಥಿಗಳು ಮೊಬೈಲ್ ಫೋನ್, ಸ್ಮಾರ್ಟ್‌ವಾಚ್, ಬ್ಲೂಟೂತ್ ಡಿವೈಸ್, ಪೇಜರ್, ವೈರ್‌ಲೆಸ್, ಕ್ಯಾಲ್ಕುಲೇಟರ್ ಮುಂತಾದ ಎಲೆಕ್ಟ್ರಾನಿಕ ವಸ್ತುಗಳನ್ನು ತರುವುದು ಹಾಗೂ ಬಳಸುವುದನ್ನು ನಿಷೇಧಿಸಿದೆ. ಪರೀಕ್ಷಾ ಕೇಂದ್ರಗಳ ಸುತ್ತಲಿನ 200 ಮೀಟರ್ ಪ್ರದೇಶದಲ್ಲಿ ಬೆಳಿಗ್ಗೆ 9



ರಿಂದ ಪರೀಕ್ಷೆ ಮುಕ್ತಾಯವಾಗುವರೆಗೆ ಝರಾಕ್ಸ್ ಅಂಗಡಿಗಳು, ಕಂಪ್ಯೂಟರ್ ಸೆಂಟರ್‌ಗಳು, ಇಂಟರ್‌ನೆಟ್, ಸೈಬರ್ ಕೆಫೆಗಳು ಹಾಗೂ ಕೋಚಿಂಗ್ ಕೇಂದ್ರಗಳು ತೆರೆಯದಂತೆ ಆದೇಶಿಸಲಾಗಿದೆ.

# ಬ್ಯಾಂಕ್ ಖಾತೆಗೆ ಆಧಾರ ಜೋಡಣೆ: ರೈತರಿಗೆ ಸೂಚನೆ

**ವಿಜಯಪುರ ಜ.29 –**ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯಡಿ ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನಲ್ಲಿ ಹವಮಾನ ವೈಪರೀತ್ಯದಿಂದ ಹಾನಿಯಾದ ಬೆಳೆಗಳಿಗೆ 85.60 ರೂ. ಕೋಟಿ ಬೆಳೆ ವಿಮೆ ಪರಿಹಾರ ಅಂತಿಮಗೊಳಿಸಲಾಗಿರುತ್ತದೆ. ಈಗಾಗಲೇ, ಮುದ್ದೇಬಿಹಾಳ, ತಾಳಿಕೋಟಿ, ದೇವರಹಿಪ್ಪರಗಿ, ಆಲಮೇಲ ತಾಲೂಕಿನ ರೈತರಿಗೆ ಬೆಳೆ ವಿಮೆ ಪರಿಹಾರ 10.30 ಕೋಟಿ ರೂ. ಜಮೆಯಾಗಿರುತ್ತದೆ.

ಉಳಿದಂತೆ 65.10 ಅಂದಾಜು ಇನ್ನೂ ರೂ. 65.10 ಕೋಟಿ ಬೆಳೆ ವಿಮೆ ಪರಿಹಾರ ಪ್ರಕ್ರಿಯೆ ಅಂತಿಮ ಹಂತದಲ್ಲಿದ್ದು, ಮುಂದಿನ ದಿನಗಳಲ್ಲಿ ಹಂತ ಹಂತವಾಗಿ ಆಧಾರ ಜೋಡಣೆಯಾದ ರೈತರ ಬ್ಯಾಂಕ್ ಖಾತೆಗೆ ನೇರ ಜಮೆ ಮಾಡಲಾಗುವುದು. ಆದಕಾರಣ ವಿಮೆ ತುಂಬಿದ ರೈತರು ಬ್ಯಾಂಕ್ ಖಾತೆಗೆ ಆಧಾರ ಜೋಡಣೆಯಾದ ಬಗ್ಗೆ ಖಾತರಿಪಡೆಸಿಕೊಳ್ಳುವಂತೆ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾವಯವ ಕೃಷಿಯಲ್ಲಿ ನವೀನ ತಂತ್ರಜ್ಞಾನ

# ನಷ್ಟದ ಕೃಷಿಗಿಂತ ಸಾವಯವ ಕೃಷಿ ಮೇಲು: ಡಾ.ಎನ್.ಶಿವಶಂಕರ



ರಾಯಚೂರಲ್ಲಿ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಸಾವಯವ ಕೃಷಿ ಸಂಶೋಧನಾ ಸಂಸ್ಥೆಯಲ್ಲಿ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ, ಸಾವಯವ ಕೃಷಿಸಂಶೋಧನಾ ಸಂಸ್ಥೆ, ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಕೃಷಿ ಇಲಾಖೆ, ರಾಯಚೂರು ಮತ್ತು ಕ್ರಿಭ್ಕೋ ಸಂಸ್ಥೆ, ಬೆಂಗಳೂರು ಸಂಯುಕ್ತಾಶ್ರಯದಲ್ಲಿ ಸಾವಯವ ಕೃಷಿಯಲ್ಲಿ ನವೀನ ತಂತ್ರಜ್ಞಾನಗಳ ಕುರಿತು ರೈತರೊಂದಿಗೆ ಸಂವಾದ ಮತ್ತು ವಿಚಾರ ಸಂಕಿರಣ ತರಬೇತಿ ಕಾರ್ಯಕ್ರಮ ಡಾ. ಎನ್. ಶಿವಶಂಕರ ಉದ್ಘಾಟಿಸಿ ಮಾತನಾಡಿದರು.

**ರಾಯಚೂರು, ಜ.29–** ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಸಾವಯವ ಕೃಷಿ ಸಂಶೋಧನಾ ಸಂಸ್ಥೆಯಲ್ಲಿ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ, ಸಾವಯವ ಕೃಷಿಸಂಶೋಧನಾ ಸಂಸ್ಥೆ, ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಕೃಷಿ ಇಲಾಖೆ, ರಾಯಚೂರು ಮತ್ತು ಕ್ರಿಭ್ಕೋ ಸಂಸ್ಥೆ, ಸಂಯುಕ್ತ ಆಶ್ರಯದಲ್ಲಿ ಸಾವಯವ ಕೃಷಿಯಲ್ಲಿ ನವೀನ ತಂತ್ರಜ್ಞಾನಗಳ ಕುರಿತು ರೈತರೊಂದಿಗೆ ಸಂವಾದ ಮತ್ತು ವಿಚಾರ ಸಂಕಿರಣ ತರಬೇತಿ ಕಾರ್ಯಕ್ರಮವನ್ನು ಡಾ. ಎನ್. ಶಿವಶಂಕರ ಅವರು ಉದ್ಘಾಟಿಸಿದರು.

ಇತ್ತಿಚೀಗೆ ಕೃಷಿಯಲ್ಲಿ ಉತ್ಪಾದನಾ ವೆಚ್ಚ ಅಧಿಕವಾಗುತ್ತಿದ್ದು, ರೈತರು ನಿರೀಕ್ಷಿತ ಲಾಭದ ಪ್ರಮಾಣ ಪಡೆಯಲಾಗುತ್ತಿಲ್ಲ. ಈ ನಿಟ್ಟಿನಲ್ಲಿ ಸಾವಯವ ಕೃಷಿಯು ಸೂಕ್ತವಾದ ಪದ್ಧತಿಯಾಗಿದ್ದು ಕಡಿಮೆ ಉತ್ಪಾದನಾ ವೆಚ್ಚ ಮತ್ತು ಗುಣಮಟ್ಟದ ಆಹಾರ ಪಡೆಯುವಲ್ಲಿ ಸಹಕಾರಿಯಾಗಿದೆ ಹಾಗೂ ಕೃಷಿಯಲ್ಲಿ ಕೃತಕ ಬುದ್ಧಿ ಮತ್ತೆ ಆಳವಡಿಕೆ ಇತ್ತಿಚೀಗೆ ಸಂಶೋಧನೆಯಲ್ಲಿದ್ದು, ರೈತರು ಇದನ್ನು ಅಳವಡಿಸಿ ಅಧಿಕ ಲಾಭವನ್ನು ಪಡೆಯಬಹುದು ಎಂದು ತಿಳಿಸಿದರು.

ಕೃಷಿ ಮಹಾವಿದ್ಯಾಲಯ, ರಾಯಚೂರಿನ ಡೀನ್ , ಡಾ.ನಾರಾಯಣರಾವ್ ಮಾತನಾಡಿ, ಇತ್ತಿಚೀಗೆ ಮಣ್ಣು ಫಲವತ್ತತೆ ಕಳೆದುಕೊಳ್ಳುತ್ತಿದ್ದು, ಉತ್ಪಾದನಾ ಪ್ರಮಾಣ ಕಡಿಮೆಯಾಗುತ್ತಿದೆ. ಸೂಕ್ಷ್ಮಾಣು ಜೀವಿಗಳ ಸಂತತಿ ಬೆಳೆಸುವ ನಿಟ್ಟಿನಲ್ಲಿ ಇಂಗಾಲದ ಅಂಶವನ್ನು ಹೆಚ್ಚಿಸುವ ಅನಿವಾರ್ಯತೆ ಇದೆ. ಹೀಗಾಗಿ ಸಾವಯವ ಗೊಬ್ಬರಕ್ಕೆ ಪರ್ಯಾಯವಾಗಿ ಬಯೋಚಾರ ವಿಧಾನದಿಂದ ಮಣ್ಣಿನಲ್ಲಿ ಸಾವಯವ ಪ್ರಮಾಣ ಹೆಚ್ಚಿಸಬಹುದಾಗಿದೆ. ಹಾಗಾಗಿ ರೈತ ಭಾಂದವರು ಮಣ್ಣು ಪರೀಕ್ಷೆ ವರದಿ ಆದಾರದ ಮೇಲೆ ಪೋಷಕಾಂಶಗಳನ್ನು ಒದಗಿಸಲು ತಿಳಿಸಿದರು.


ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಆಡಳಿತಾಧಿಕಾರಿಗಳಾದ ಡಾ.ಜಾಗೃತಿ ಬಿ. ದೇಶಮಾನ್ಯ ಮಾತಾನಾಡಿ, ಸಾವಯವ ಕೃಷಿಯಲ್ಲಿ ಮಹಿಳೆಯರ ಪಾತ್ರ ಅಪರವಾಗಿದ್ದು, ಮಹಿಳೆಯರನ್ನು ಒಳಗೂಡಿ ಸಂಘಟಿಸಿ ತರಬೇತಿ ನೀಡುವುದರಿಂದ ಸಾವಯವ ಕೃಷಿಗೆ ಶಕ್ತಿ ಬರುವಂತಾಗುತ್ತದೆ. ಒತ್ತಡದ ಬದುಕು ರಾಸಾಯನಿಕ ಕೃಷಿಯಿಂದ ಬದುಕಿನ ಸಂತೋಷವನ್ನು ಕಳೆದುಕೊಂಡಿದ್ದೇವೆ. ಕಾರಣ ನಾವುಗಳು ಮರಳಿ ನಮ್ಮ ಪೂರ್ವಿಕರ ಸಾವಯವ ಕೃಷಿಗೆ ಮರಳಬೇಕಾಗಿದೆ ಎಂದರು.

ಕೃಷಿ ಇಲಾಖೆಯ, ಜಂಟಿ ಕೃಷಿ ನಿರ್ದೇಶಕರು, ಜಯಪ್ರಕಾಶ ಟಿ. ಸಿ.ಮಾತನಾಡಿ, ಕೃಷಿ ಇಲಾಖೆಯಲ್ಲಿ ಸಾವಯವ ಕೃಷಿಗೆ ಉತೇಜಿಸುವ ಹಲವಾರು ಯೋಜನೆಗಳು ಇದ್ದು ಇದರ ಸದುಪಯೋಗ ಪಡಿಸಿಕೊಳ್ಳಲು ತಿಳಿಸಿದರು. ಜಿಲ್ಲೆಯಲ್ಲಿ ರೈತರು ಶಿಫಾರಸ್ಸಿಗಿಂತ ಎರಡರಿಂದ ಮೂರು ಪಟ್ಟು ಹೆಚ್ಚಿನ ರಸಾಯನಿಕ ಬಳಸುತ್ತಿದ್ದು, ಮಣ್ಣು ಮತ್ತು ಆರೋಗ್ಯದ ಮೇಲೆ ಕೆಟ್ಟ ಪರಿಣಾಮ ಬೀರುತ್ತಿದೆ. ಹೀಗಾಗಿ ಮುಖ್ಯ ಪೋಷಕಾಂಶಗಳ ಜೊತೆಗೆ ಸಮತೋಲನ ಪೋಷಕಾಂಶ ನೀಡಲು ತಿಳಿಸಿದರು.

ಸಿಂಧನೂರು ತಾಲ್ಲೂಕಿನ ಯದ್ದಲದೊಡ್ಡಿ ಸುವರ್ಣಗಿರಿ ವಿರಕ್ತ ಮಠದ ಮಹಾಲಿಂಗ ಮಹಾಸ್ವಾಮಿಗಳು ದಿವ್ಯ ಸಾನಿಧ್ಯವನ್ನು ವಹಿಸಿದ್ದರು. ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕ ಮಾತುಗಳನ್ನು ಆಡಿದರು.

# ಜಿಲ್ಲಾಧಿಕಾರಿಯಿಂದ ಕಂದಗಲ್ ಹನುಮಂತರಾಯ ರಂಗಮಂದಿರ ಪರಿಶೀಲನೆ

**ವಿಜಯಪುರ ಜ.29–** ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರಕ್ಕೆ ಜ.28ರಂದು ಜಿಲ್ಲಾಧಿಕಾರಿ ಟಿ.ಭೂಬಾಲನ್ ಭೇಟಿ ನೀಡಿ, ರಂಗಮಂದಿರದ ಆವರಣದಲ್ಲಿರುವ ಹಂದಿಗನೂರು ಸಿದ್ರಾಮಪ್ಪ ಬಯಲು ರಂಗಮಂದಿರದ ಕಾಮಗಾರಿಯನ್ನು ಪರಿಶೀಲಿಸಿ ಕಾಮಗಾರಿಯ ಇನ್ನೂಳಿದ ಕೆಲಸಗಳನ್ನು ತುರ್ತಾಗಿ ಪೂರ್ಣಗೊಳಿಸಿ ಸಾರ್ವಜನಿಕ ಬಳಕೆಗೆ ನೀಡವಂತೆ ಕ್ರಮವಹಿಸಲು ಸೂಚಿಸಿದರು.



ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದ ವೇದಿಕೆ, ರ್‍ಯಾಂಪ್ (RAMP), ಪ್ರಸಾದ ಕೊಠಡಿ, ಶೌಚಾಲಯಗಳ ದುರಸ್ತಿ ಮತ್ತು ರಂಗಮಂದಿರದ ಹಾಲ್‌ನಲ್ಲಿರುವ ವಸ್ತುಗಳನ್ನು ವಿಲೇವಾರಿ ಮಾಡಲು ಹಾಗೂ ಅಗತ್ಯವಿದಲ್ಲಿ ಕಚೇರಿಯ ಮೆಟ್ಟಿಲುಗಳ ಕೆಳಗಡೆ ಇರುವ ಸ್ಥಳವನ್ನು ಪ್ಲೈವುಡ್ ಅಳವಡಿಸಿ ಸ್ಟೋರಂ ರೀತಿ ಬಳಸಲು ತಿಳಿಸಿದರು.

ರಂಗಮಂದಿರ ಕಂಪೌಂಡ್‌ನಲ್ಲಿ ಸಸಿಗಳನ್ನು ನೆಡಲು ಹಾಗೂ ರಂಗಮಂದಿರ ಮತ್ತು ಬಯಲು ರಂಗಮಂದಿರ ಆವರಣದವನ್ನು ಸ್ವಚ್ಛವಾಗಿಡಲು ಅಗತ್ಯ ಕ್ರಮವಹಿಸಲು ಅಧಿಕಾರಿಗಳಿಗೆ ಸೂಚಿಸಿದರು.

# ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಮಹಿಳೆಯರ ಹೋರಾಟ

**ರಾಯಚೂರು, ಜ.29–** ಮಹತ್ವಾಕಾಂಕ್ಷೆಯ ಜಿಲ್ಲೆಯಾದ ರಾಯಚೂರು–ಯಾದಗಿರಿ ಜಿಲ್ಲೆಯಲ್ಲಿ ಮಕ್ಕಳ ಅಪೌಷ್ಟಿಕತೆ ನಿವಾರಣೆ ಮಾಡಬೇಕು. ದೇವದಾಸಿಯರ ಮರು ಸಮೀಕ್ಷೆ ಮಾಡಬೇಕು. ಗ್ರಾಮೀಣ ಭಾಗದಲ್ಲಿ ಶುದ್ಧೀಕರಣ ಘಟಕ ದುರಸ್ತಿಗೊಳಿಸಬೇಕು ಎಂದು ಒತ್ತಾಯಿಸಿ ಪ್ರಗತಿಪರ ಸಂಘಟನೆಗಳ ಜಂಟಿ ಕ್ರಿಯಾ ವೇದಿಕೆ ಸಮಿತಿಯ ವತಿಯಿಂದ ಅನಿರ್ಧಿಷ್ಠಾವಧಿ ಧರಣಿ ನಡೆಯಿತು.

ನಗರದ ಜಿಲ್ಲಾ ಮಹಾತ್ಮ ಗಾಂಧಿ ಕ್ರೀಡಾಂಗಣದಲ್ಲಿ ರಾಯಚೂರು, ಕಲಬುರಗಿ, ಯಾದಗಿರಿ, ಧಾರವಾಡ, ವಿಜಯನಗರ, ಬಳ್ಳಾರಿ, ಬಾಗಲಕೋಟೆ, ಮೈಸೂರು ಹಾಗೂ ಜಿಲ್ಲೆಯ ಸಿಂಧನೂರು, ಮಾನ್ವಿ ಹಾಗೂ ಜಿಲ್ಲೆಯ ವಿವಿಧ ತಾಲೂಕಿನ ಗಡಿ ಭಾಗದ ಗ್ರಾಮಗಳಿಂದ ಸಾವಿರಾರು ಸಂಖ್ಯೆಯಲ್ಲಿ ಮಹಿಳೆಯರು ಸೇರಿ ಕ್ರೀಡಾಂಗಣದಿಂದ ಜಿಲ್ಲಾಧಿಕಾರಿ ಕಚೇರಿ ವರೆಗೆ ಬೃಹತ್ ಕಾಲ್ನಡಿಗೆ ಜಾಥಾ ನಡೆಸಿ ಜಿಲ್ಲಾಧಿಕಾರಿ ಕಚೇರಿ ಮುಂದೆ ಪ್ರತಿಭಟನೆ ನಡೆಸಿ ಸರಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಬಳಿಕ ಜಿಲ್ಲಾಧಿಕಾರಿ ನಿತಿಶ್ ಕೆ. ಹಾಗೂ ಜಿಲ್ಲಾ ಪಂಚಾಯತ್ ಸಿಇಒ ರಾಹುಲ್ ತುಕಾರಾಂ ಪಾಂಡ್ವೆಗೆ ಮನವಿ ಸಲ್ಲಿಸಿ, ರಾಯಚೂರು ಸೇರಿ ಕಲ್ಯಾಣ ಕರ್ನಾಟಕ ಭಾಗದ ಶೈಕ್ಷಣಿಕ, ಆರೋಗ್ಯ, ಕುಡಿಯುವ ನೀರಿನ ಸಮಸ್ಯೆ, ದೇವದಾಸಿಯರ ಪಿಂಚಣಿ ಸೇರಿ ಅವರ ಕೌಟುಂಬಿಕ ಹಾಗೂ ಸಾಮಾಜಿಕ ಸಮಸ್ಯೆಗಳನ್ನು ಬಗೆಹರಿಸಬೇಕು ಎಂದು ಸರಕಾರದ ಪರವಾಗಿ ನಮ್ಮ ಧ್ವನಿ ಕೇಳಿಸಬೇಕು ಎಂದು ಮನವಿ ಮಾಡಿದರು.

**ರಕ್ತಹೀನತೆ ಸಮಸ್ಯೆ ಬಗೆಹರಿಸಿ :** ಕಲ್ಯಾಣ ಕರ್ನಾಟಕ ಭಾಗದಲ್ಲಿ 30 ಲಕ್ಷಕ್ಕಿಂತ ಹೆಚ್ಚು ಮಹಿಳೆಯರು (ರಕ್ತ ಹೀನತೆ) ಸಮಸ್ಯೆಯಿಂದ ಬಳಲುತ್ತಿದ್ದಾರೆ. ನಮಗೆ ಕೇವಲ ಗ್ಯಾರಂಟಿ ನೀಡಿದರೆ ಸಾಲದು ನಮ್ಮ ಮಕ್ಕಳ ಭವಿಷ್ಯ ಹಾಗೂ ಮುಂದಿನ ಪೀಳಿಗೆಯ ಮಕ್ಕಳು ಇದಕ್ಕೆ ಗುರಿಯಾಗದಂತೆ ಮನವಿ ಮಾಡಿದರು.

ಕಳೆದ 1.5 ವರ್ಷಗಳಲ್ಲಿ ನಾವು ಹಲವಾರು ಪ್ರತಿಭಟನೆಗಳನ್ನು ಮಾಡಿದ್ದೇವೆ. ಆಗ ಕರ್ನಾಟಕ ಸರಕಾರದ ಶಾಸಕರು ಮತ್ತು ಸಚಿವರು ನಮಗೆ ಕಾಲಮಿತಿಯಲ್ಲಿ ಬೇಡಿಕೆಗಳನ್ನು ಈಡೇರಿಸುವುದಾಗಿ ಭರವಸೆ ನೀಡಿದ್ದರು, ಆದರೆ ಅವರು ಜನರ ಬೇಡಿಕೆಗಳನ್ನು ಈಡೇರಿಸುವಲ್ಲಿ ವಿಫಲಗೊಂಡಿದ್ದಾರೆ ಎಂದು ದೂರಿದರು.

**ಸರಕಾರಿ ಶಾಲೆಗಳಲ್ಲಿ ಶಿಕ್ಷಣದ ಗುಣಮಟ್ಟ ಸುಧಾರಣೆ :** ಸುಮಾರು 1/3 ಭಾಗದಷ್ಟು ಮಕ್ಕಳು ಮುಖ್ಯವಾಗಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಹಿನ್ನೆಲೆಯುಳ್ಳವರಾಗಿದ್ದಾರೆ. ತಮ್ಮ ತರಗತಿಯ ಸರಳ ಕನ್ನಡ, ಗಣಿತ ಪರೀಕ್ಷೆಯಲ್ಲಿ ಉತ್ತೀರ್ಣರಾಗುವುದಿಲ್ಲ. ಇದಕ್ಕೆ ಸಂಬಂಧಿಸಿದಂತೆ ಕ್ರಿಯಾ ಯೋಜನೆಯನ್ನು ರೂಪಿಸಬೇಕು.

ಕಲ್ಯಾಣ ಕರ್ನಾಟಕದಲ್ಲಿ ಸಾವಿರಾರು ಶಿಕ್ಷಕರ ಹುದ್ದೆಗಳು ಖಾಲಿಯಿವೆ ಹಾಗೂ ತರಗತಿವಾರು, ವಿಷಯವಾರು ಶಿಕ್ಷಕರನ್ನು ಕೂಡಲೇ ನೇಮಿಸಬೇಕು ಹಾಗೂ ಪ್ರತಿ ಶಾಲೆಗೆ ಕಲಿಕೆಯಲ್ಲಿ ಹಿಂದುಳಿದ ಮಕ್ಕಳಿಗೆ ಗೃಹ ಪಾಠ ಮಾಡುವವರನ್ನು ಸಹ ನೇಮಿಸಬೇಕು. ಸರಕಾರಿ ಶಾಲೆಗಳಲ್ಲಿ ಕ್ಲಸ್ಟರ್ ವಿಧಾನವನ್ನು ಸುಧಾರಣೆಗೆ ಮಾದರಿಯಾಗಿ ಬಳಸಬೇಕು. ಪ್ರತಿ ಶಾಲೆಗೆ ಕನಿಷ್ಠ 1 ಅರಕಾಲಿಕ ಜವಾನ (ಪಿಒನ್) ನೀಡಬೇಕು. ಸರಕಾರಿ ಶಾಲೆಗಳಲ್ಲಿ ಭೌತಿಕ ಮತ್ತು– ಮಾನವ ಮೂಲಸೌಕರ್ಯವನ್ನು ಸುಧಾರಿಸಬೇಕು. ನಾವು ಈಗಾಗಲೇ 1947 ರಿಂದ ಕರ್ನಾಟಕದ ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಅನೇಕ ತಲೆಮಾರುಗಳ ಜೀವನವನ್ನು ವ್ಯರ್ಥ ಮಾಡಿದ್ದೇವೆ. ಇದು ಈಗ ನಿಲ್ಲಬೇಕು. ಇದು ಲಕ್ಷಾಂತರ ಮಕ್ಕಳ ಜೀವನದ ಜೊತೆ ಸರಕಾರವು ಚೆಲ್ಲಾಟವಾಡುತ್ತಿದೆ ಎಂದು ಹೋರಾಟದ ಸಂಚಾಲಕಿ ವಿದ್ಯಾ ಪಾಟೀಲ ದೂರಿದರು.

**ದೇವದಾಸಿಯರ ಮರು ಸಮೀಕ್ಷೆ :** ಮಹಿಳೆಯರಿಗೆ ಪಿಂಚಣಿ ಮತ್ತು ಮಕ್ಕಳಿಗೆ ವಿದ್ಯಾರ್ಥಿವೇತನವನ್ನು ನಿಯಮಿತವಾಗಿ ನೀಡಬೇಕು. ಕರ್ನಾಟಕ ಸರಕಾರವು ಈಗಾಗಲೇ ಬಜೆಟ್ನಲ್ಲಿ ಇದಕ್ಕಾಗಿ ಹಣವನ್ನು ಮೀಸಲಿಟ್ಟಿದೆ. ಆದರೆ ಕೆಎಸ್ಡಬ್ಲ್ಯುಡಿಸಿ ಮತ್ತು ಮಹಿಳಾ–ಮಕ್ಕಳ ಅಭಿವೃದ್ಧಿ ಇಲಾಖೆ ಕಳೆದ 9 ತಿಂಗಳಿಂದ ಈ ಕೆಲಸವನ್ನು ಕೈಗೆತ್ತಿಕೊಂಡಿಲ್ಲ. ಒಂಟಿ ಮಹಿಳೆಯರ ಪಿಂಚಣಿ ವಯೋಮಿತಿಯನ್ನು 21 ವರ್ಷಕ್ಕೆ ಇಳಿಸಬೇಕು, ಇದರಿಂದ ಗಂಡನಿಂದ ಪರಿತ್ಯಕ್ತರಾಗಿರುವ ಎಲ್ಲಾ



ಮಹಿಳೆಯರು ತಮ್ಮ ಜೀವನವನ್ನು ರೂಪಿಸಿಕೊಳ್ಳಲು ಮತ್ತು ತಮ್ಮ ಚಿಕ್ಕ ಮಕ್ಕಳನ್ನು ಬೆಳೆಸಲು ಸರಕಾರ ಬೆಂಬಲಿಸಿದಂತಾಗುತ್ತದೆ ಎಂದು ಹೋರಾಟದ ಸಂಚಾಲಕಿ ವಿರುಪಮ್ಮ ಆಗ್ರಹಿಸಿದರು.

ಗ್ರಾಮಗಳಲ್ಲಿರುವ ಶುದ್ಧ ಕುಡಿಯುವ ನೀರಿನ ಘಟಕಗಳ (ಆರ್‌ಒ ವಾಟರ್ ಪ್ಲಾಂಟ್ಗಳನ್ನು) ದುರಸ್ತಿ ಮಾಡಲು ಕೂಡಲೇ ಹಣ ಬಿಡುಗಡೆ ಮಾಡಬೇಕು. ಸರಕಾರಿ ಆಸ್ಪತ್ರೆಗಳಲ್ಲಿ ಹೆಚ್ಚುತ್ತಿರುವ ತಾಯಿ ಮತ್ತು ಮಕ್ಕಳ ಸಾವಿನ ಬಗ್ಗೆ ಸರಕಾರಗಳ ನಿರಾಸಕ್ತಿ ವಹಿಸುತ್ತಿದೆ. ಈ ಬಗ್ಗೆ ಸರಕಾರದ ಕ್ರಿಯಾಶೀಲ ಕ್ರಮಗಳು ನಮಗೆ ಕಾಣುತ್ತಿಲ್ಲ. "ಮಹಿಳೆಯರಿಗೆ ಅಧಿಕಾರ" ಎಂಬ ಘೋಷಣೆಯೊಂದಿಗೆ ಅಧಿಕಾರಕ್ಕೆ ಬಂದ ಸರಕಾರರ ಈ ರೀತಿ ವರ್ತಿಸುತ್ತಿರುವುದು ನಾಚಿಕೆಗೇಡಿನ ಸಂಗತಿ. ತಮಿಳುನಾಡಿನಂತೆ ಕರ್ನಾಟಕದಲ್ಲಿ ಪಾರದರ್ಶಕ ಔಷಧ ಖರೀದಿ ನೀತಿ ಏಕೆ ಸಾಧ್ಯವಿಲ್ಲ? ಇನ್ನೂ ಅನೇಕ ಲೋಪಗಳಿವೆ, ತಮಿಳು ಮಾದರಿಯಲ್ಲಿ ಚಿಕಿತ್ಸೆ ವ್ಯವಸ್ಥೆ ರೂಪಿಸಬೇಕು ಎಂದು ಹೋರಾಟಗಾರ್ತಿ ಸ್ವರ್ಣ ಭಟ್ ಒತ್ತಾಯಿಸಿದರು.

## ಗಂಗಾಸ್ನಾನ ಮಾಡದ ನೀವೆಷ್ಟು ಬಡತನ ನಿವಾರಣೆ ಮಾಡಿದ್ದೀರಿ: ಖರ್ಗೆಗೆ ಬಿಜೆಪಿ ಶಾಸಕನ ಪ್ರಶ್ನೆ?

# ಕಲ್ಯಾಣ ಕರ್ನಾಟಕಕ್ಕೆ ಹಿಂದುಳಿದ ಹಣೆಪಟ್ಟಿ ಕೊಡುಗೆ ನಿಮ್ಮದೇ: ಬೆಲ್ಲದ್ ಟೀಕೆ

**ಹುಬ್ಬಳ್ಳಿ, ಜ.29–** ಉತ್ತರ ಪ್ರದೇಶದ ಪ್ರಯಾಗ್ ರಾಜ್‌ನಲ್ಲಿ ನಡೆಯುತ್ತಿರುವ ಮಹಾ ಕುಂಭಮೇಳದಲ್ಲಿ ಪ್ರಧಾನಿ ನರೇಂದ್ರ ಮೋದಿ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ ತೀರ್ಥಸ್ನಾನದ ಬಗ್ಗೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ವ್ಯಂಗ್ಯವಾಡಿದ್ದು, ಗಂಗಾ ನದಿಯಲ್ಲಿ ಸನಾನ ಮಾಡದ ನೀವು 50 ವರ್ಷಗಳಿಂದ ರಾಜಕೀಯದಲ್ಲಿದ್ದೀರಿ. ನೀವೆಷ್ಟು ಬಡತನ ನಿವಾರಣೆ ಮಾಡಿದ್ದೀರಿ. ಇಂದಿಗೂ ಕಲ್ಯಾಣ ಕರ್ನಾಟಕಕ್ಕೆ ಹಿಂದುಳಿದ ಹಣೆ ಪಟ್ಟಿ ಅಂಟಿಸಿದ್ದು ನೀವೇ ಅಲ್ಲವೇ ಎಂದು ವಿಧಾನಸಭಾ ವಿರೋಧ ಪಕ್ಷದ ಉಪನಾಯಕ ಅರವಿಂದ ಬೆಲ್ಲದ ಅವರು ತಿರುಗೇಟು ನೀಡಿದರು.

ನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿ, ಗಂಗಾ ನದಿಯ ಸ್ನಾನದಿಂದ ಬಡತನವನ್ನು ಕೊನೆಗೊಳಿಸಲು ಸಾಧ್ಯವೇ ಎನ್ನುವ ಮಲ್ಲಿಕಾರ್ಜುನ ಖರ್ಗೆ ವ್ಯಂಗ್ಯಕ್ಕೆ ಪ್ರತಿಕ್ರಿಯಿಸಿದ ಅವರು, ಉನ್ನತ ಹುದ್ದೆಯಲ್ಲಿದ್ದುಕೊಂಡು ಇದೊಂದು ಬೇಜಾಬ್ದಾರಿತನದ ಹೇಳಿಕೆ ಇದಾಗಿದ್ದು, ಹಿಂದೂಗಳ ಭಾವನೆಗೆ ಧಕ್ಕೆ ಉಂಟು ಮಾಡುವ ಹೇಳಿಕೆ ಆಗಿದೆ. ಇಡೀ ಜಗತ್ತಿನ ಜನತೆ ತ್ರೀವೇಣಿ ಸಂಗಮದ ಸ್ಥಳದಲ್ಲಿ ಸ್ನಾನಕ್ಕೆ ಬರುತ್ತಿದ್ದಾರೆ. ಮಹಾ ಕುಂಭಮೇಳ ಇದೊಂದು ಐತಿಹಾಸಿಕ ಧಾರ್ಮಿಕ ಕಾರ್ಯಕ್ರಮ ಆಗಿದ್ದು, ಇಲ್ಲಿಗೆ ಶ್ರದ್ಧಾ ಭಕ್ತಿಯಿಂದ ಹೋಗುತ್ತಿದ್ದಾರೆ ಎಂದರು.

ನೀವು ಮುಸ್ಲಿಮರಿಗೆ ಹಣ ಕೊಟ್ಟು ಮೆಕ್ಕಾ–ಮದೀನಾಗೆ ಕಳುಹಿಸುತ್ತೀರಿ. ಸೋನಿಯಾ ಗಾಂಧಿ ರೋಮ್ ದೇಶಕ್ಕೆ ಪೋಪ್ ದರ್ಶನ ಪಡೆಯಲು ಹೋಗುತ್ತಾರೆ. ಅಧಿಕಾರವಿಡೀ ಗರೀಬಿ ಹಟಾವೋ ಘೋಷಣೆ ಮಾಡಿಕೊಂಡು ಬಂದವರು ನೀವು. ಇಷ್ಟು ಬಡತನ ನಿವಾರಣೆ ಮಾಡಿದ್ದೀರಿ ಎಂದು ವಾಗ್ದಾಳಿ ನಡೆಸಿದರು.

ಮಲ್ಲಿಕಾರ್ಜುನ ಖರ್ಗೆ ಬೇಜವಾಬ್ದಾರಿಯುತ ಹಾಗೂ ಹಿಂದೂಗಳ ಭಾವನೆಗೆ ಧಕ್ಕೆ ತರುವ ಹೇಳಿಕೆ ನೀಡಿದ್ದಾರೆ. ಜಗತ್ತಿನಾದ್ಯಂತ ಜನ ಪ್ರಯಾಗ್ ರಾಜ್ ತೆರಳಿ ತ್ರಿವೇಣಿ ಸಂಗಮದಲ್ಲಿ ಮುಳುಗಿ ಪುಣ್ಯ ಸಂಪಾದಿಸುತ್ತಿದ್ದು, 144



ವರ್ಷಕ್ಕೊಮ್ಮೆ ನಡೆಯುವ ಮಹಾ ಕುಂಭಮೇಳ ಇದಾಗಿದೆ. ಖರ್ಗೆ ಅವರು ಗಂಗಾ ನದಿಯಲ್ಲಿ ಮುಳುಗಿದರೆ ಬಡತನ ಹೋಗುತ್ತದೆಯೇ ಎಂದು ವ್ಯಂಗ್ಯವಾಡಿದ್ದು ಅಕ್ಷಮ್ಯವಾಗಿದೆ. 40 ಕೋಟಿ ಜನರು ಸ್ವಂತ ಖರ್ಚಿನಿಂದ ಅಲ್ಲಿಗೆ ತೆರಳುತ್ತಾರೆ. ಖರ್ಗೆಯವರಿಗೆ ಇದೇ ಪ್ರಶ್ನೆಯನ್ನು ಮುಸ್ಲಿಮರಿಗೆ ಕೇಳುವ ಧೈರ್ಯ ಇದೆಯೇ ಮೆಕ್ಕಾಗಿ ಹೋಗಿ ಬಂದರೆ ಬಡತನ ಪರಿಹಾರವಾಗುತ್ತದೆಯೇ ಎಂದು ಕೇಳಿ ನೋಡೋಣ ಎಂದು ತಿರುಗೇಟು ನೀಡಿದರು.

ಹಿಂದೂಗಳನ್ನು ಮಾತ್ರ ಯಾಕೆ ಟಾರ್ಗೆಟ್ ಮಾಡುತ್ತೀರಿ. ಕೂಡಲೇ ಮಲ್ಲಿಕಾರ್ಜುನ ಖರ್ಗೆ ಅವರು ಕ್ಷಮೆ ಕೇಳಬೇಕು. ಇದೇ ರೀತಿಯಲ್ಲಿ ಸಚಿವ ಸಂತೋಷ ಲಾಡ್ ಸಹ ಅದೇ ಪ್ರಶ್ನೆ ಕೇಳಿದ್ದಾರೆ. ನೀವು ಮರಾಠ ಸಮಾಜದ ನಾಯಕರು, ನಿಮ್ಮಿಂದ ಇದನ್ನು ನಿರೀಕ್ಷೆ ಮಾಡಿರಲ್ಲಿಲ್ಲ. ನಿಮ್ಮ ಸಮಾಜದವರೂ ಕುಂಭ ಮೇಳಕ್ಕೆ ಹೋಗುತ್ತಾರೆ. ಖರ್ಗೆ ಅವರನ್ನು ಓಲೈಸಲು ಹೀಗೆ ಮಾಡುವುದು ಸರಿಯಲ್ಲ. ರಾಹುಲ್ ಗಾಂಧಿ, ಪ್ರಿಯಾಂಕ ವಾದ್ರಾ, ಸೋನಿಯಾ ಗಾಂಧಿ ಕ್ಯಾಥೋಲಿಕ್ ಚರ್ಚ್‌ಗೆ ನಡೆದುಕೊಳ್ಳುತ್ತಾರೆ. ಈ ಬಗ್ಗೆ ಅವರನ್ನು ಕೇಳಲ್ಲ. ಆದರೆ ಹಿಂದೂಗಳ ಭಾವನೆಗೆ ಧಕ್ಕೆ ತರಲು ಏನೇನೋ ಮಾತನಾಡಿದ್ದೀರಿ. ಇದರಿಂದಾಗಿ ರಾಷ್ಟ್ರೀಯ, ರಾಜ್ಯ ನಾಯಕರಿಗೂ ಬೆಲೆ ಇಲ್ಲದಂತಾಗಿದೆ ಎಂದರು.

# ವಿಜಯಪುರ ಮೇಯರ್ ಚುನಾವಣೆ ಮುಂದೂಡಿಕೆ: ಪಾಟೀಲ್ ಒತ್ತಡ



ವಿಜಯಪುರ, ಜ. 29: ಮಹಾನಗರ ಪಾಲಿಕೆ ಮನಗಂಡು ಕಾಂಗ್ರೆಸ್‌ನವರು ನೆಪ ತೆಗೆದರು.
**ರಾಜ್ಯ ಚುನಾವಣಾ ಆಯೋಗಕ್ಕೆ ವಿಧಾನ ಪರಿಷತ್ ಸದಸ್ಯ ಎನ್.ರವಿಕುಮಾರ್ ನೇತೃತ್ವದ ಬಿಜೆಪಿ ನಿಯೋಗ ಮನವಿ ಸಲ್ಲಿಸಿತು.**

ಮೇಯರ್, ಉಪ ಮೇಯರ್ ಚುನಾವಣೆಯನ್ನು ಸಚಿವ ಎಂ.ಬಿ.ಪಾಟೀಲ್ ಅವರ ಒತ್ತಡದಿಂದಲೇ ಮುಂದೂಡಲಾಗಿದೆ ಎಮದು ವಿಧಾನ ಪರಿಷತ್ ಸದಸ್ಯ ಎನ್.ರವಿಕುಮಾರ ಆರೋಪಿಸಿದರು.

ಈ ಕುರಿತು ರಾಜ್ಯ ಚುನಾವಣಾ ಆಯೋಗದ ಅಧಿಕಾರಿಗೆ ಬಿಜೆಪಿ ನಿಯೋಗ ಈ ಕುರಿತು ದೂರು ಸಲ್ಲಿಸಿ, ಕ್ರಮವಹಿಸುವಂತೆ ಮನವಿ ಮಾಡಿಕೊಂಡಿತು. ನಿಯೋಗದ ನೇತೃತ್ವವಹಿಸಿದ್ದ ವಿಧಾನ ಪರಿಷತ್ ಸದಸ್ಯ ಎನ್.ರವಿಕುಮಾರ್ ನಂತರ ಸುದ್ದಿಗಾರರಿಗೆ ಪ್ರತಿಕ್ರಿಯಿಸಿದರು.

ಮೇಯರ್ ಚುನಾವಣೆಗೆ ನಾವು 24 ಜನ, ಕಾಂಗ್ರೆಸ್‌ನವರು 22 ಜನ ಮತದಾನ ಮಾಡಿದ್ದಾರೆ. ಮೇಯರ್ ಚುನಾವಣೆ ಪ್ರಕ್ರಿಯೆ ಪೂರ್ಣಗೊಂಡಿತ್ತು. ನಂತರ ಉಪ ಮೇಯರ್ ಚುನಾವಣೆ ವೇಳೆ ನಾವು 24 ಜನ ಕೈ ಎತ್ತಿದ್ದೆವು. ಸೋಲು ಖಚಿತವಾದುದನ್ನು ಚುನಾವಣಾ ಪ್ರಕ್ರಿಯೆ ಸರಿಯಾಗಿ ನಡೆಸಿಲ್ಲವೆಂದು ಚುನಾವಣಾಧಿಕಾರಿ ಮೇಲೆ ಸಚಿವ ಎಂ.ಬಿ.ಪಾಟೀಲ ಒತ್ತಡ ಹೇರಿ ಚುನಾವಣೆ ಮುಂದೂಡಿಸಿದ್ದು, ಕಾಂಗ್ರೆಸ್‌ನ ಎಲ್ಲ ಸದಸ್ಯರು ಗಲಾಟೆ ಮಾಡಿದ್ದಾರೆ ಎಂದು ಆರೋಪಿಸಿದರು.

ಚುನಾವಣಾ ಆಯೋಗಕ್ಕೆ ದೂರು ಸಲ್ಲಿಸಿ ನ್ಯಾಯ ಒದಗಿಸಲು ಕೋರಿದ್ದೇವೆ. ನಗರಾಭಿವೃದ್ಧಿ ಇಲಾಖೆ ಜತೆ ಮಾತನಾಡಿ ನಿರ್ಣಯಿಸುವುದಾಗಿ ಚುನಾವಣಾಧಿಕಾರಿ ಭರವಸೆ ನೀಡಿದ್ದಾರೆ ಎಂದು ಎನ್.ರವಿಕುಮಾರ್ ಹೇಳಿದರು.

ನಿಯೋಗದಲ್ಲಿ ವಿಧಾನ ಪರಿಷತ್ ಸದಸ್ಯ ಎನ್. ರವಿಕುಮಾರ್, ಕೇಶವ ಪ್ರಸಾದ್, ಕಾನೂನು ಪ್ರಕೋಷ್ಠದ ರಾಜ್ಯ ಸಂಚಾಲಕ ಎ.ವಸಂತಕುಮಾರ್, ಮಾಧ್ಯಮ ವಿಭಾಗದ ಸಂಚಾಲಕ ಕರುಣಾಕರ್ ಖಾಸಲೆ, ವಕೀಲರು, ಮುಖಂಡರು ಇದ್ದರು.

# ಭಾರತೀಯ ಸಂಸ್ಕೃತಿ ಉತ್ಸವ: ಕಲಬುರಗಿ–ಸೇಡಂನಲ್ಲಿ ಭವ್ಯ ಶೋಭಾಯಾತ್ರೆ

**ಕಲಬುರಗಿ, ಜ.29–** ಜಿಲ್ಲೆಯ ಸೇಡಂ ತಾಲೂಕಿನ ನೀಲಹಳ್ಳಿ– ಬೀರನಹಳ್ಳಿ ಕ್ರಾಸ್ ಬಳಿಯ ಕಾಗಿಣಾ ನದಿ ತಟದ ಪ್ರಕೃತಿ ನಗರದಲ್ಲಿ ಇಂದಿನಿಂದ ಫೆ.6ರ ವರೆಗೆ ನಡೆಯುವ ಏಳನೆಯ ಭಾರತೀಯ ಸಂಸ್ಕೃತಿ ಉತ್ಸವಕ್ಕೆ ಕಲಬುರಗಿ ಮತ್ತು ಸೇಡಂನಲ್ಲಿ ಏಕಕಾಲಕ್ಕೆ ಭವ್ಯ ಶೋಭಾಯಾತ್ರೆ ಜರುಗಿತು.

ನಗರೇಶ್ವರ ಶಾಲಾ ಆವರಣದಲ್ಲಿ ಶೋಭಾ ಯಾತ್ರೆಗೆ ಸಂಸದ ಜಗದೀಶ್ ಶೆಟ್ಟರ್ ಮತ್ತು ಶ್ರೀ ಶರಣಬಸವೇಶ್ವರ ಸಂಸ್ಥಾನದ ಪೂಜ್ಯ ಮಾತೋಶ್ರೀ ದಾಕ್ಷಾಯಿಣಿ ಅಪ್ಪ, ಬಸವರಾಜ ದೇಶಮುಖ್, ಶಾಸಕರಾದ ಬಸವರಾಜ ಮತ್ತಿಮೂಡು, ಶಿಕ್ಷಣತಜ್ಞ ಡಾ. ಗುರುರಾಜ ಕರ್ಜಗಿ, ಹರ್ಷಾನಂದ ಗುತ್ತೇದಾರ್, ಚಂದು ಪಾಟೀಲ್ ಅವರು ತಾಯಿ ಭರತ ಮಾತೆಯ ಭಾವಚಿತ್ರಕ್ಕೆ ಪೂಜೆ ನೆರವೇರಿಸಿದ ನಂತರ ಹಸಿರು ನಿಶಾನೆ ತೋರಿಸಿ ಚಾಲನೆ ನೀಡಿದರು.

ಇದಕ್ಕೆ ಪೂರ್ವಭಾವಿಯಾಗಿ ಶರಣ ನಾಡಿನ ಹೆಬ್ಬಾಗಿಲು ಭಾವೈಕ್ಯತೆಯ ತೊಟ್ಟಿಲು ಕಲಬುರಗಿ ನಗರದಲ್ಲಿ ಸಾವಿರಾರು ಸಂಖ್ಯೆಯ ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ಪಾಲ್ಗೊಂಡ ಸಾಂಸ್ಕೃತಿಕ ದಿಬ್ಬಣದ ಶೋಭಾ ಯಾತ್ರೆ ಇಡೀ ನಗರದಲ್ಲಿ ಜಾತ್ರೆಯ ಸಡಗರವನ್ನು ಸೃಷ್ಟಿಸಿತು. ಜಾನಪದ ಕಲಾವಿದರು, ಸಾಹಿತಿಗಳು ವಿದ್ಯಾರ್ಥಿಗಳು, ಶಿಕ್ಷಕರು , ಸಾಂಸ್ಕೃತಿಕ ನಾಯಕರು, ರಾಜಕೀಯ ನಾಯಕರು ಹಾಗೂ ಸಂಸ್ಕೃತಿ ಪ್ರಿಯರು ಮೆರವಣಿಗೆಯಲ್ಲಿ ಹೆಜ್ಜೆ ಹಾಕಿ ಶೋಭಾ ಯಾತ್ರೆಯ ರಂಗು ಹೆಚ್ಚಿಸಿದರು.

**7 ಸಾವಿರ ವಿದ್ಯಾರ್ಥಿಗಳ ಮೆರವಣಿಗೆ:**

ಭವ್ಯ ಶೋಭ ಯಾತ್ರೆಯಲ್ಲಿ ನಗರದ ಸುಮಾರು ಏಳು ಸಾವಿರ ವಿದ್ಯಾರ್ಥಿಗಳು ಭಾರತ್ ಮಾತಾ ಕೀ ಜೈ, ವಂದೇ ಮಾತರಂ



**ಕಲಬುರಗಿ ಜಿಲ್ಲೆಯ ಸೇಡಂ ತಾಲೂಕಿನ ನೀಲಹಳ್ಳಿ–ಬೀರನಹಳ್ಳಿ ಕ್ರಾಸ್ ಬಳಿ 450 ಎಕರೆ ಪ್ರದೇಶದಲ್ಲಿ ನಿರಮಿಶಿರುವ ಪ್ರಕೃತಿ ನಗರದಲ್ಲಿ ಒಂದು ವಾರದ ವರೆಗೆ ನಡೆಯುವ ಭಾರತೀಯ ಸಂಸ್ಕೃತಿ ಉತ್ಸವದ ಅಂಗವಾಗಿ ನಗರದಲ್ಲಿ ಭವ್ಯ ಶೋಭಾಯಾತ್ರೆ ಜರುಗಿತು.**

ಘೋಷಣೆಗಳನ್ನು ಕೂಗುತ್ತಾ ರಸ್ತೆಯಲ್ಲಿ ಸಾಗಿ ಬಂದ ದೃಶ್ಯ ಕಣ್ಮನ ಸೆಳೆಯಿತು. ಎಲ್ಲ ದಾರಿಗಳು ನಗರೇಶ್ವರ ಶಾಲೆಯ ಕಡೆಗೆ ಎಂಬಂತೆ ಪ್ರವಾಹೋಪಾದಿಯಲ್ಲಿ ಬಂದ ಜನರು ಉತ್ಸಾಹದಿಂದ ಮೆರವಣಿಗೆಯಲ್ಲಿ ಪಾಲ್ಗೊಂಡರು. ನಗರೇಶ್ವರ ಶಾಲೆಯಿಂದ ಪ್ರಾರಂಭಗೊಂಡ ಮೆರವಣಿಗೆ ಜಗತ್ತು ವಿರುದ್ಧಕ್ಕೆ ಮುಟ್ಟಿದಾಗಲೂ ಅದರ ಇನ್ನೊಂದು ತುದಿ ನಗರೇಶ್ವರ ಶಾಲೆಯಲ್ಲಿದ್ದು ಅಷ್ಟು ಸಂಖ್ಯೆಯಲ್ಲಿ ಜನ ಜಮಾಯಿಸಿದ್ದರು.

**ಸ್ತಬ್ಧ ಚಿತ್ರ ಸಾಂಸ್ಕೃತಿಕ ತಂಡಗಳ ಆಕರ್ಷಣೆ**

ಸುಮಾರು ಹತ್ತಕ್ಕೂ ಹೆಚ್ಚು ಸ್ತಬ್ಧ ಚಿತ್ರಗಳು ಹಾಗೂ ಜನಪದ ಸಂಸ್ಕೃತಿ ಸಾರ್ವ ಅನೇಕ ತಂಡಗಳು ವಿಶೇಷ ಆಕರ್ಷಣೆಯಾಗಿದ್ದವು. ಹಳೆಯ ಸ್ಮಾರಕಗಳನ್ನು ನೆನಪಿಸುವ, ಚರಿತ್ರೆಯನ್ನು ಸಾರುವ ಸ್ತಬ್ಧ ಚಿತ್ರಗಳು, ತಿರುಪತಿ ವೆಂಕಟರಮಣನ ಸ್ತಬ್ಧಚಿತ್ರ, ಸಾಧುಗಳು ಶರಣರು ಸಂತರ ವೇಷಭೂಷಣಗಳನ್ನು ಹೊಂದಿದ ಶಬ್ದ ಚಿತ್ರಗಳು ಮೆರವಣಿಗೆಯಲ್ಲಿ ಎಲ್ಲರ ಗಮನಸೆಳೆಯಿತು.

ಭರತಮಾತೆಯ ರಥದ ಮುಂಭಾಗದಲ್ಲಿ ಡೊಳ್ಳು ಮೇಳ, ಲಂಬಾಣಿ ನೃತ್ಯತಂಡ, ಎರಡು ಪುರವಂತಿಕೆ ತಂಡಗಳು, ಎರಡು ಹಲಿಗೆ ಮೇಳದ ತಂಡಗಳು, 20ಕ್ಕೂ ಹೆಚ್ಚು ಲೇಜಿಮ್ ತಂಡಗಳು, 8 ಘೋಷ್ ತಂಡಗಳು ರಿಂಗ್ ನೃತ್ಯ, ಕಲಾವಿದರು ಗೊಂದೋಳು ತಂಡ , ಮೂರು ಡಿಜೆ ತಂಡ ಮೆರವಣಿಗೆಯುದ್ದಕ್ಕೂ ಸಾಗಿಬಂದಾಗ ಜನ ಚಪ್ಪಾಳೆ ತಟ್ಟಿ ಹರ್ಷ ವ್ಯಕ್ತಪಡಿಸಿದರು.

**ಪ್ರಮುಖ ವಿದ್ಯಾಸಂಸ್ಥೆಗಳು ಭಾಗಿ:**

ಮೆರವಣಿಗೆಯಲ್ಲಿ ಅಪ್ಪ ಪಬ್ಲಿಕ್ ಶಾಲೆ, ಮಹರ್ಷಿ ವಿದ್ಯಾ ಮಂದಿರ ಸಂಗಮ ಶಾಲೆ ಆರ್ಟ್ ಇಂಟಿಗ್ರೇಷನ್ ದೃಶ್ಯ ಕಲಾ ಮಹಾವಿದ್ಯಾಲಯ ನಾಗಾಂಬಿಕಾ ವಿದ್ಯಾಲಯ ಮುಕ್ತಾಂಬಿಕ ವಸತಿ ಪದವಿ ಪೂರ್ವ ಕಾಲೇಜು, ಶರಣಬಸವೇಶ್ವರ ವಸತಿ ಶಾಲೆ ಎಸ್ ಎಸ್ ಜಗಳೂರು ಪದವಿಪೂರ್ವ ಶಾಲೆ, ಚಾಣಕ್ಯ ಹಿರಿಯ ಪ್ರಾಥಮಿಕ ಶಾಲೆ ನಾರಾಯಣಪ್ಪ ಮಾದಮ ಶೆಟ್ಟಿ ಶಾಲೆ, ದೊಡ್ಡಪ್ಪ ಸ್ವತಂತ್ರ ಪದವಿ ಪೂರ್ವ ಕಾಲೇಜು, ರೋಟರಿಯ ಪ್ರಾಥಮಿಕ ಮತ್ತು ಪ್ರೌಢಶಾಲೆ ಬಿಜಿ ಮಹಿಳಾ ಕಾನ್ವೆಂಟ್ ಶಾಲೆ ಭಾರತೀಯ ವಿದ್ಯಾರ್ಥಿಯರ ಶಾಲೆ ಹೀಗೆ ನಗರದ ಪ್ರಮುಖ ಶಾಲೆಗಳು ಪಾಲ್ಗೊಂಡು ಶೋಭಾ ಯಾತ್ರೆಯ ಮೆರುಗು ಹೆಚ್ಚಿಸಿದರು.

**ನಗರದಲ್ಲಿ ಜನಸಾಗರ:**

ನಗರೇಶ್ವರ ಶಾಲೆಯಿಂದ ಮಂಗಳವರ ಬೆಳಿಗ್ಗೆ ಪ್ರಾರಂಭಗೊಂಡ ಮೆರವಣಿಗೆಯು ನೆಹರು ಗಂಜ್, ಸೂಪರ್ ಮಾರ್ಕೆಟ್, ಜಗತ್ ವೃತ್ತ, ಅಪ್ಪನಕೆರೆ ಗೋವಾ ಹೋಟೆಲ್ ದಾರಿಯಾಗಿ ನೂತನ ವಿದ್ಯಾಲಯ ಮೈದಾನದಲ್ಲಿ ಸಂಪನ್ನಗೊಂಡಿತು. ರಸ್ತೆಯುದ್ದಕ್ಕೂ ಮೆರವಣಿಗೆ ಕಾರ್ಯದ ಮೇಲೆ ಪುಷ್ಪ ದೃಷ್ಟಿಯನ್ನು ಸುರಿಸಿ ಜನ ಕುಣಿದು ಕುಪ್ಪಳಿಸಿದರು ಕಲ್ಬುರ್ಗಿ ನಗರದ ಎಲ್ಲ ರಸ್ತೆಗಳಲ್ಲಿ ಜನಸಾಗರ ಹರಿದು ಬಂದ ವಿಶೇಷ ಅನುಭವ ಉಂಟಾಯಿತು.

ನಗರೇಶ್ವರ ಶಾಲೆಯಿಂದ ಜಗತ್ತು ವೃತ್ತದ ವರೆಗೆ ಸುಮಾರು ಒಂದುವರೆ ಗಂಟೆಗಳ ಕಾಲ ಟ್ರಾಫಿಕ್ ಜಾಮ್ ಆಗಿ ವಾಹನಗಳಿಗೆ ಬೇರೆ ಮಾರ್ಗವಾಗಿ ಸಂಚರಿಸಲು ಪೊಲೀಸರು ಅನುವು ಮಾಡಿಕೊಟ್ಟರು. ಮೆರವಣಿಗೆ ಯುದ್ಧಕ್ಕೂ ಇಕ್ಕೆಲಗಳಲ್ಲಿ ಜನ ಕೈ ಬೀಸಿ ಭಾರತೀಯ ಸಂಸ್ಕೃತಿ ಉತ್ಸವಕ್ಕೆ ಶುಭ ಹಾರೈಸಿದ ದೃಶ್ಯ ಕಂಡುಬರುತ್ತಿತ್ತು.



**ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಪ್ರಾಥಮಿಕ ಮತ್ತು ಪ್ರೌಢಶಾಲೆಯ ಅತಿಥಿ ಶಿಕ್ಷಕರು ಬುಧವಾರ ಉದ್ಯೋಗ ಭದ್ರತೆಗೆ ಒತ್ತಾಯಿಸಿ ಧರಣಿ ನಡೆಸಿದರು.**

## ಅಟಲ್ ಬಿಹಾರಿ ವಾಜಪೇಯಿ ಜನ್ಮಶತಾಬ್ಧಿ

# ಒಂದು ತಿಂಗಳವರೆಗೂ ವಿವಿಧ ಕಾರ್ಯಕ್ರಮ ಆಯೋಜನೆ



**ಬೀದರನಲ್ಲಿ ಬಿಜೆಪಿ ಜಿಲ್ಲಾ ಅಧ್ಯಕ್ಷ ಸೋಮನಾಥ ಪಾಟೀಲ್ ಮತ್ತು ಬಿಜೆಪಿ ಮುಖಂಡ ಬಾಬು ವಾಲಿ ಬೀದರ್ ಪತ್ರಿಕಾ ಭವನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದರು.**

**ಬೀದರ್, ಜ.29–** ಬಿಜೆಪಿ ಜಿಲ್ಲಾ ಘಟಕದ ವತಿಯಿಂದ ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿಯವರ ಜನ್ಮ ಶತಾಬ್ದಿ ಆಚರಣೆಯ ಭಾಗವಾಗಿ ಪ್ರಸಕ್ತ ಸಾಲಿನ ಫೆ.14 ರಿಂದ ಮಾ.14 ರವರೆಗೆ ಜಿಲ್ಲೆಯಲ್ಲಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಿದೆ.

ಬಿಜೆಪಿ ಜಿಲ್ಲಾ ಘಟಕದ ಅಧ್ಯಕ್ಷ ಸೋಮನಾಥ ಪಾಟೀಲ್ ಇಲ್ಲಿ ಪತ್ರಿಕಾ ಭವನದಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಅಟಲ್ ಬಿಹಾರಿ ವಾಜಪೇಯಿ ಜನ್ಮ ಶತಾಬ್ದಿ ಆಚರಣೆ ಸಮಿತಿ ರಚಿಸಲಾಗಿದ್ದು ಪಕ್ಷದ ಮುಖಂಡ ಬಾಬಾ ವಾಲಿ ಅವರನ್ನು ಸಮಿತಿ ಸಂಯೋಜಕರನ್ನಾಗಿ ನೇಮಕ ಮಾಡಲಾಗಿದೆ. ಬಿಜೆಪಿ ಮುಖಂಡರಾದ ಕಿರಣ್ ಪಾಟೀಲ್ ಮತ್ತು ವೀರು ದಿಗ್ವಾಲ್ ಅವರನ್ನು ಸಮಿತಿಯ ಪದಾಧಿಕಾರಿಗಳನ್ನಾಗಿ ನೇಮಕ ಮಾಡಲಾಗಿದೆ ಎಂದು ತಿಳಿಸಿದರು. ಡಿ.25 ಅಟಲ್ ಜನ್ಮ ದಿನವನ್ನು ಸುಶಾಸನ ದಿನವನ್ನಾಗಿ ಇನ್ನೂ ಮುಂದೆ ಆಚರಿಸಲಾಗುವುದು ಎಂದು ತಿಳಿಸಿದರು. ಅಟಲ್ ಬಿಹಾರಿ ವಾಜಪೇಯಿ ಈ ದೇಶಕಂಡ ಅಪ್ರತಿಮ ನಾಯಕರಾಗಿದ್ದರು. ಹಲವು ಮಹಾತ್ವಾಕಾಂಕ್ಷೆಗಳನ್ನು ಇಟ್ಟುಕೊಂಡು ದೇಶ ಮುನ್ನಡೆಸಿದ ಧೀಮಂತ ನಾಯಕರಾಗಿದ್ದರು. ಅವರೊಬ್ಬ ವ್ಯಕ್ತಿಯಲ್ಲ, ಶಕ್ತಿಯಾಗಿದ್ದರು ಎಂದು ಸೋಮನಾಥ ಪಾಟೀಲ್ ನುಡಿದರು.

ಬಾಬು ವಾಲಿ ಮಾತನಾಡಿ ಆಟಲ್ ಬಿಹಾರಿ ವಾಜಪೇರಿ ಒಬ್ಬ ಕವಿಗಳಾಗಿದ್ದರು. ಹೀಗಾಗಿ ಜಿಲ್ಲೆಯಲ್ಲಿ 'ಕವಿ ಸಮ್ಮೇಳನ' ಆಯೋಜನೆ, ಅವರು ಪತ್ರಕರ್ತ ರಾಗಿದ್ದರಿಂದ 'ನಾನೂ ಪತ್ರಕರ್ತ' ಎಂಬ ಕಾರ್ಯಕ್ರಮ, ವಾಕ್‌ಥಾನ್, 'ಖೇಲ್ ಭಿ ಜೀತೋ, ದಿಲ್ ಭಿ ಜೀತೋ' ಹೀಗೆ ಹಲವು ಕಾರ್ಯಕ್ರಮಗಳನ್ನು ಒಂದು ತಿಂಗಳವರೆಗೆ ಹಮ್ಮಿಕೊಳ್ಳಲಾಗುವುದು ಎಂದು ನುಡಿದರು.

ಶಶಿ ಹೊಸಳ್ಳಿ, ಪೀರಪ್ಪ ಔರಾದೆ, ಗುರುನಾಥ ಜ್ಯಾಂತಿಕರ್, ವೀರು ದಿಗ್ವಾಲ್ ಮತ್ತು ಶ್ರೀನಿವಾಸ ಚೌಧರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಎರಡನೇ ಬಾರಿ ಜಿಲ್ಲಾ ಬಿಜೆಪಿ ಜಿಲ್ಲಾಧ್ಯಕ್ಷರಾಗಿ ಅನಿಲ್ ನಾಯ್ಡು ಅವಿರೋಧ ಆಯ್ಕೆ



**ಬಳ್ಳಾರಿ, ಜ.29–** ಭಾರತೀಯ ಜನತಾ ಪಾರ್ಟಿಯ ಬಳ್ಳಾರಿ ಜಿಲ್ಲಾಧ್ಯಕ್ಷರಾಗಿ ಎರಡನೇ ಅವಧಿಗೆ ಅನಿಲ್ ನಾಯ್ಡು ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಜಿಲ್ಲಾಧ್ಯಕ್ಷರ ಚುನಾವಣೆಯ ಉಸ್ತುವಾರಿ ಅರುಣ್ ಶಹಾಪುರರವರು ಹೇಳಿದರು. ನಗರದ ಮೋಕಾ ರಸ್ತೆಯ ವಾಜಪೇಯಿ ಬಡಾವಣೆಯಲ್ಲಿರುವ ಬಿಜೆಪಿ ಜಿಲ್ಲಾ ಕಾರ್ಯಾಲಯದಲ್ಲಿ ಏರ್ಪಡಿಸಿದ್ದ ಸುದ್ದಿಗೋಷ್ಠಿಯನ್ನು ಅವರು ಉದ್ದೇಶಿಸಿ ಮಾತನಾಡಿ ಅಧಿಕೃತವಾಗಿ ಜಿಲ್ಲಾಧ್ಯಕ್ಷ ಘೋಷಣೆ ಮಾಡಿದರು.

ಅನಿಲ್ ನಾಯ್ಡು ಅವರು ಎಪಿವಿಪಿಯಿಂದ ಹಾಗೂ ಸಂಘ ಪರಿವಾರದಿಂದ ಬಂದ ಸಂಘಟನಾ ಚತುರರು ಸಧ್ಯ ಬಳ್ಳಾರಿಯಲ್ಲಿ ನಡೆಯುತ್ತಿರುವ ಎಲ್ಲಾ ವಿದ್ಯಮಾನಗಳನ್ನು ಅವಲೋಕಿಸಿದ್ದೇನೆ ಎಲ್ಲವನ್ನೂ ಸರಿದೂಗಿಸಿಕೊಂಡು ಹೋಗುವ ಶಕ್ತಿ ಅನಿಲ್ ನಾಯ್ಡುರಿಗೆ ಇದೆ ಹಾಗಾಗಿ ಪಕ್ಷ ಅವರ ಸಂಘಟನೆ ಚತುರತೆ ಹಾಗೂ ಪಕ್ಷ ನಿಷ್ಠೆಯನ್ನು ಅರಿತು, ಅಲ್ಲದೇ ಜಿಲ್ಲೆಯ ಎಲ್ಲಾ ನಾಯಕರ ಅಭಿಪ್ರಾಯ ಪಡೆದು ಅವಿರೋಧವಾಗಿ ಅನಿಲ್ ನಾಯ್ಡು ಅವರನ್ನು ಬಳ್ಳಾರಿ ಜಿಲ್ಲಾ ಬಿಜೆಪಿ ಜಿಲ್ಲಾಧ್ಯಕ್ಷರಾಗಿ ಆಯ್ಕೆ ಮಾಡಲಾಗಿದೆ ಎಂದರು.

ಜಿಲ್ಲಾಧ್ಯಕ್ಷರ ಸ್ಥಾನಕ್ಕೆ ಅನಿಲ್ ನಾಯ್ಡು ಅವರ ನಾಮಪತ್ರ ಒಂದೇ ಸಲ್ಲಿಕೆಯಾದ ಕಾರಣ ಅವರನ್ನು ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದು ಹೇಳಿದರು. ಜಿಲ್ಲಾಧ್ಯಕ್ಷರಾಗಿ ಘೋಷಣೆಯಾದ ಬಳಿಕ ಮಾತನಾಡಿದ ಅನಿಲ್ ನಾಯ್ಡು ಪಕ್ಷದ ರಾಷ್ಟ್ರೀಯ ನಾಯಕರು ರಾಜ್ಯ ನಾಯಕರು ಹಾಗೂ ಜಿಲ್ಲೆಯ ಎಲ್ಲಾ ನಾಯಕರು ನನ್ನ ಮೇಲೆ ವಿಶ್ವಾಸ ನಂಬಿಕೆಯನ್ನ ಇಟ್ಟು ಮತ್ತೊಮ್ಮೆ ನನ್ನನ್ನು ಎರಡನೇ ಅವಧಿಗೆ ಜಿಲ್ಲಾಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಲು ಸಹಕರಿಸಿದ ಎಲ್ಲಾ ನಾಯಕರಿಗೆ ನಾನು ಅಭಾರಿಯಾಗಿದ್ದೇನೆ. ಈ ಹಿಂದೆ ಪಕ್ಷಕ್ಕೆ ಎಲ್ಲಿ ಹಿನ್ನಡೆಯಾಗಿದೆ ಅನ್ನೋದನ್ನು ನೋಡಿ ಮುಂದೆ ಪಕ್ಷವನ್ನು ಅಧಿಕಾರಕ್ಕೆ ತರುವ ನಿಟ್ಟಿನಲ್ಲಿ ಪಕ್ಷ ಸಂಘಟನೆ ಮಾಡುವುದಾಗಿ ತಿಳಿಸಿದರು.

# ಫೆ.01 ರಂದು ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಸಭೆ

**ಬಳ್ಳಾರಿ,ಜ.29–**ಲೋಕೋಪ ಯೋಗಿ ಇಲಾಖೆ ಬಳ್ಳಾರಿ ವಿಭಾಗದ ವತಿಯಿಂದ ಫೆ.01 ರಂದು ಮಧ್ಯಾಹ್ನ 03 ಗಂಟೆಗೆ ಜಿಲ್ಲಾಧಿ ಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಸಭೆ ಏರ್ಪಡಿಸಲಾಗಿದೆ. ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿಯ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಅಧ್ಯಕ್ಷತೆ ವಹಿಸುವರು ಎಂದು ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿಯ ಸದಸ್ಯ ಕಾರ್ಯದರ್ಶಿಯೂ ಆದ ಲೋಕೋಪಯೋಗಿ ಇಲಾಖೆ ಬಳ್ಳಾರಿ ವಿಭಾಗದ ಕಾರ್ಯ ನಿರ್ವಾಹಕ ಇಂಜಿನಿಯರ್ ಅವರು ತಿಳಿಸಿದ್ದಾರೆ.

राष्ट्रीय सड़क सुरक्षा सप्ताह

# ಇಂದು ಜಿಲ್ಲಾ ನ್ಯಾಯಾಲಯದಲ್ಲಿ 'ಸ್ವಚ್ಛತಾ ದಿನಾಚರಣೆ'-ರಾಜೇಶ್ ಎನ್.ಹೊಸಮನೆ

ಬಳ್ಳಾರಿ, ಜ.29–ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ ಮತ್ತು ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ "ಪರಿಸರವನ್ನು ಸ್ವಚ್ಛವಾಗಿ ಮತ್ತು ಆರೋಗ್ಯಕರವಾಗಿಸೋಣ" ಎಂಬ ಘೋಷ ವಾಕ್ಯದೊಂದಿಗೆ ಜ.30 ರಂದು ಬೆಳಿಗ್ಗೆ 9 ಗಂಟೆಗೆ ನಗರದ ತಾಳೂರು ರಸ್ತೆಯಲ್ಲಿರುವ ಹೊಸ ನ್ಯಾಯಾಲಯ ಸಂಕೀರ್ಣ ಆವರಣದಲ್ಲಿ 'ಸ್ವಚ್ಛತಾ ದಿನಾಚರಣೆ' ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾ. ರಾಜೇಶ್ ಎನ್. ಹೊಸಮನೆ ಅವರು ತಿಳಿಸಿದ್ದಾರೆ.

# ತಂಬಾಕು ದುಷ್ಪರಿಣಾಮ ಕುರಿತು ಶಾಲಾ ಕಾಲೇಜುಗಳಲ್ಲಿ ಜಾಗೃತಿ ಕಾರ್ಯಕ್ರಮ ಆಯೋಜಿಸಲು ಎಡಿಸಿ ಮಹಮ್ಮದ್ ಝುಬೇರ್ ಸೂಚನೆ

**ಬಳ್ಳಾರಿ,ಜ.29–**ಜಿಲ್ಲೆಯಲ್ಲಿ ತಂಬಾಕು ಬಳಕೆ ಗಣನೀಯ ನಿಯಂತ್ರಣಕ್ಕಾಗಿ ಶಾಲಾ ಕಾಲೇಜುಗಳು ಸೇರಿದಂತೆ ಗ್ರಾಮ ಪಂಚಾಯತ್ ಮಟ್ಟದಲ್ಲಿಯೂ ತಂಬಾಕಿನಿಂದಾಗುವ ದುಷ್ಪರಿಣಾಮ ಕುರಿತು ಹೆಚ್ಚು ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಪರಿಣಾಮಕಾರಿಯಾಗಿ ತಂಬಾಕು ನಿಯಂತ್ರಣ ಜಾರಿಗೆ ತರಬಹುದು ಎಂದು ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಅವರು ಹೇಳಿದರು.

ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ, ಇತ್ತೀಚಿನ ದಿನಗಳಲ್ಲಿ ಯುವ ಸಮುದಾಯವು ಸಹ ತಂಬಾಕು ಉತ್ಪನ್ನಗಳನ್ನು ಉಪಯೋಗಿಸುತ್ತಿದ್ದಾರೆ. ಇದರಿಂದ ಅವರ ಭವಿಷ್ಯವು ಹಾಳಾಗುತ್ತಿದ್ದು, ಇದರ ಕುರಿತು ಜಿಲ್ಲಾ ಪಂಚಾಯತ್ ಹಾಗೂ ಇತರೆ ಇಲಾಖೆಗಳ ಸಹಕಾರದೊಂದಿಗೆ ಹಳ್ಳಿಗಳಲ್ಲಿಯೂ ಅರಿವು ಮೂಡಿಸುವ ಕಾರ್ಯವಾಗಬೇಕು ಎಂದು ಸೂಚಿಸಿದರು.

ಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳ ಮುಂಭಾಗದಲ್ಲಿ ಕೋಟ್ಪಾ–2003ರ ಸೆಕ್ಷನ್–4 ಮತ್ತು



ಸೆಕ್ಷನ್–6ಬಿ ನಾಮಫಲಕಗಳನ್ನು ಕಡ್ಡಾಯವಾಗಿ ಅಳವಡಿಸಬೇಕು ಎಂದು ಡಿಡಿಪಿಐ ಮತ್ತು ಡಿಡಿಪಿಯು ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲೆಯಲ್ಲಿ ಹಲವಾರು ರೀತಿಯ ಕೈಗಾರಿಕೆಗಳಿವೆ. ಈಗಾಗಲೇ ಸಾಕಷ್ಟು ವಿವಿಧ ರೀತಿಯಲ್ಲಿ ಮಾಲಿನ್ಯವಾಗುತ್ತಿದ್ದು, ತಂಬಾಕು ಬಳಕೆಯಿಂದ ಶ್ವಾಸಕೋಶ ಸಂಬಂಧಿತ ರೋಗಗಳು ಬರುತ್ತಿದ್ದು, ಕೈಗಾರಿಕೆ ವಲಯಗಳಲ್ಲಿಯೂ ಸಹ ತಂಬಾಕು ಕುರಿತಾಗಿ ಅರಿವು ಜಾಗೃತಿ ಮೂಡಿಸಬೇಕು ಎಂದು ಜಿಲ್ಲಾ ಕೈಗಾರಿಕಾ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

# ಬಿಹಾರದಿಂದ ಬೈಕ್‌ನಲ್ಲಿ ಬಂದಿದ್ದ ಎಟಿಎಂ ದರೋಡೆಕೋರರು: 1500 ಕಿ.ಮೀ. ಬೈಕ್‌ಯಾತ್ರೆ

**ಬೀದರ್, ಜ.29–** ನಗರದ ಮುಖ್ಯ ಬೀದಿಯಲ್ಲಿರುವ ಎಸ್‌ಬಿಐ ಎಟಿಎಂಗೆ ಹಣ ತುಂಬಿಸಲು ಬಂದಿದ್ದವರನ್ನು ಗುಂಡಿಕ್ಕಿ ಕೊಲೆ ಮಾಡಿ 93 ಲಕ್ಷ ದರೋಡೆ ಮಾಡಿ ಪರಾರಿಯಾಗಿದ್ದ ಇಬ್ಬರು ಬಿಹಾರಿ ಡಕಾಯಿತರು, ಮೊದಲು ಬಿಹಾರದ ಹಾಜಿಪುರದಿಂದ ಹೈದರಾಬಾದ್‌ವರೆಗೆ 1500 ಕಿ.ಮೀ.ನಷ್ಟು ಬೈಕ್‌ನಲ್ಲಿ ಸಂಚರಿಸಿ ಬಂದಿದ್ದರು ಎಂಬ ರೋಚಕ ಸಿಸಿಟಿವಿ ಸಾಕ್ಷ್ಯ ಲಭಿಸಿದೆ.

ನಂತರ ಅಲ್ಲಿಂದ ಕರ್ನಾಟಕದ ಬೀದರ್‌ನಲ್ಲಿಗೆ ಆಗಮಿಸಿ ಎಟಿಎಂಗೆ ಹಣ ತುಂಬಲು ಬಂದಿದ್ದ ಹಣವನ್ನು ಸಿನಿಮೀಯ ರೀತಿಯಲ್ಲಿ ಲೂಟಿ ಮಾಡಿದ್ದರು. ಬಳಿಕ ಹೈದರಾಬಾದ್‌ಗೆ ತೆರಳಿ ಅಲ್ಲಿ ಅಫ್ಜಲ್‌ಗಂಜ್‌ನಲ್ಲಿ ಕೊಲೆಗೆ ಯತ್ನಿಸಿ ಪರಾರಿ ಆಗಿದ್ದರು ಎಂದು ತಿಳಿದುಬಂದಿದೆ.

ಪರಿಚಯಸ್ಥರ ಬೈಕ್: ಬಿಹಾರದ ಹಾಜಿಪುರ ಜಿಲ್ಲೆಯವರಾದ ಇಬ್ಬರೂ ಆರೋಪಿಗಳು ಅಪರಾಧ ಎಸಗುವ ಒಂದು ತಿಂಗಳಿಗೂ ಮುನ್ನ ತಮ್ಮ ಪರಿಚಯಸ್ಥರಿಂದ ಬೈಕ್ ಪಡೆದುಕೊಂಡು ಹೈದರಾಬಾದ್ ವರೆಗೆ ಬರೋಬ್ಬರಿ 1500 ಕಿ.ಮೀ. ಸಂಚರಿಸಿದ್ದರು ಎಂದು ತನಿಖೆಯಿಂದ ತಿಳಿದುಬಂದಿದೆ.



**ಡಕಾಯಿತರ ಬೈಕ್‌ಯಾನ**

ಮೊದಲು ಬಿಹಾರದ ಹಾಜಿಪುರದಿಂದ ಹೈದರಾಬಾದ್‌ವರೆಗೆ ಪ್ರಯಾಣ, ಹೈದರಾಬಾದ್ ವರೆಗಿನ 1500 ಕಿ.ಮೀ. ಬೈಕ್ ಯಾನದ ಸಿಸಿಟೀವಿ ಸಾಕ್ಷ್ಯ ಲಭ್ಯ. ನಂತರ ಅಲ್ಲಿಂದ ಬೀದರ್‌ಗೆ ಬಂದು, ಬೈಕಲ್ಲೇ ಹೈದರಾಬಾದ್‌ಗೆ ಪರಾರಿ. ಸಿಸಿಟಿವಿ ದೃಶ್ಯ ಪರಿಶೀಲನೆ ವೇಳೆ ದರೋಡೆಕೋರರ ಸಂಚಾರ ಪತ್ತೆಯಾಗಿದೆ.

ಹೈದರಾಬಾದನ ಅಫ್ಜಲ್ ಗಂಜ್‌ನಲ್ಲಿ ನಡೆದ ಕೊಲೆ ಯತ್ನದ ಬಳಿಕ ಆರೋಪಿಗಳ ಪತ್ತೆಗೆ ಸಿಸಿಟೀವಿ ದೃಶ್ಯಾವಳಿಯನ್ನು ಪರಿಶೀಲಿಸಿದ ಪೊಲೀಸರು ಈ ಮಾಹಿತಿಯನ್ನು ಬಿಚ್ಚಿಟ್ಟಿದ್ದಾರೆ. ಬಸ್ ನಿಲ್ದಾಣವೊಂದರ ಬಳಿ ಬೈಕುಗಳನ್ನು ನಿಲ್ಲಿಸಿದ ಆರೋಪಿಗಳು ಟೋಕನ್‌ಗಾಗಿ ನಕಲಿ ಮೊಬೈಲ್ ಸಂಖ್ಯೆ ನೀಡಿದ್ದರು ಎಂದಿದ್ದಾರೆ.

ಈ ಬೈಕ್ ನಂಬರ್ ಆಧರಿಸಿ ಹಾಜಿಪುರದಲ್ಲಿದ್ದ ಬೈಕ್ ಮಾಲೀಕರ ಬಳಿ ಪೊಲೀಸರು ವಿಚಾರಿಸಿದಾಗ, ಅವರು ಅದನ್ನು ತಮ್ಮ ಸ್ನೇಹಿತನಿಗೆ ಒಂದು ತಿಂಗಳ ಮಟ್ಟಿಗೆ ನೀಡಿದ್ದಾಗಿ ತಿಳಿಸಿದ್ದಾರೆ. ಆದರೆ ಅವರಿಗೆ ತಮ್ಮ ಬೈಕ್ ಅಪರಾಧ ಕೃತ್ಯಕ್ಕೆ ಬಳಕೆಯಾದ ಬಗ್ಗೆ ಅರಿವಿರಲಿಲ್ಲ ಎಂದು ಹೇಳಿದ್ದಾರೆ. ತನಿಖೆ ವೇಳೆ, ಇಬ್ಬರು ಆರೋಪಿಗಳು ಬಿಹಾರ ಹಾಗೂ ಉತ್ತರಪ್ರದೇಶಗಳಲ್ಲೂ ದರೋಡೆ ಹಾಗೂ ಕೊಲೆ ಪ್ರಕರಣದಲ್ಲಿ ತೊಡಗಿದ್ದರು ಎಂದೂ ತಿಳಿದುಬಂದಿದೆ.

MSIL



ಶ್ರೀ ಸಿದ್ದರಾಮಯ್ಯ
ಸನ್ಮಾನ್ಯ ಮುಖ್ಯಮಂತ್ರಿಗಳು



ಶ್ರೀ ಡಿ.ಕೆ. ಶಿವಕುಮಾರ್
ಮಾನ್ಯ ಉಪ ಮುಖ್ಯಮಂತ್ರಿಗಳು



ಶ್ರೀ ಎಂ.ಬಿ. ಪಾಟೀಲ, ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಸಚಿವರು ಹಾಗೂ
ಶ್ರೀ ಸಿ. ಪುಟ್ಟರಂಗಶೆಟ್ಟಿ, ಮಾನ್ಯ ಅಧ್ಯಕ್ಷರು, ಎಂಎಸ್‌ಐಎಲ್




| ಮಾಸಿಕ ಚಂದಾ (ರೂ.) | ಅವಧಿ (ತಿಂಗಳು) | ಚಿಟ್ ಮೌಲ್ಯ (ರೂ.) |
|---|---|---|
| 2500 | 40 | 1 Lakh |
| 5000 | 40 | 2 Lakhs |
| 10000 | 40 | 4 Lakhs |
| 10000 | 40 | 5 Lakhs |
| 12500 | 40 | 5 Lakhs |
| 15000 | 40 | 6 Lakhs |
| 10000 | 60 | 6 Lakhs |
| 15000 | 60 | 9 Lakhs |
| 25000 | 40 | 10 Lakhs |

ವೈಶಿಷ್ಟ್ಯಗಳು

ವಿಶ್ವಾಸಾರ್ಹ ಸರ್ಕಾರಿ ಸಂಸ್ಥೆ | ಪಾರದರ್ಶಕ ಕಾರ್ಯಾಚರಣೆ | ಸುಲಭ ಹಣದ ಲಭ್ಯತೆ
ಆಕರ್ಷಕ ಗಳಿಕೆಯ ಅವಕಾಶ | ತೊಡಗಿಸಿದ ಹಣಕ್ಕೆ ಭದ್ರತೆ


ಹೊಸ ಚಿಟ್‌ಗಳಿಗೆ ನೋಂದಣಿ ಪ್ರಾರಂಭ

| ಮಾಸಿಕ ಚಂದಾ (ರೂ.) | ಅವಧಿ (ತಿಂಗಳು) | ಚಿಟ್ ಮೌಲ್ಯ (ರೂ.) |
|---|---|---|
| 10000 | 100 | 10 Lakh |
| 5000 | 100 | 15 Lakhs |
| 25000 | 60 | 15 Lakhs |
| 25000 | 100 | 25 Lakhs |
| 50000 | 50 | 25 Lakhs |
| 50000 | 100 | 50 Lakhs |
| 100000 | 50 | 50 Lakhs |
| 200000 | 50 | 1 Crore |
| 250000 | 40 | 1 Crore |

ಎಂಎಸ್‌ಐಎಲ್ ಚಿಟ್ ಫಂಡ್ಸ್ ಶಾಖಾ ಕಚೇರಿಗಳು: ▪ ಕನ್ನಿಂಗ್‌ಹ್ಯಾಂ ರಸ್ತೆ: ಮೊ: 9844720963 ▪ ವಿಲ್ಸನ್‌ಗಾರ್ಡನ್: 080-22274021 ಮೊ: 8722804212 / 6366763395 ▪ ಗಾಂಧಿನಗರ: 080-22204021 ಮೊ: 8722804211 ▪ ಚಾಮರಾಜಪೇಟೆ: 080-26704747 ಮೊ: 9844135701 ▪ ರಾಜಾಜಿನಗರ: 080-23429525 ಮೊ: 9844133535 ▪ ಜಯನಗರ: ಮೊ: 9844895975 / 6366971099 ▪ ವಿಜಯನಗರ: 080-23151243 ಮೊ: 9844895974 ▪ ಮಲ್ಲೇಶ್ವರಂ: 080-23465454 ಮೊ: 9844787398 ▪ ಯಶವಂತಪುರ: 080-23574622 ಮೊ: 9844895973 ▪ ಬಸವನಗುಡಿ: 080-26622638 ಮೊ: 8970867865 ▪ ಬಿ.ಟಿ.ಎಂ. ಲೇಔಟ್: 080-48663635 ಮೊ: 8970867863 ▪ ಆರ್.ಟಿ. ನಗರ: 080-23558866 ಮೊ: 8970867861 / 6366971098 ▪ ಇಂದಿರಾನಗರ: 080-48534907 ಮೊ: 9844636704 ▪ ಯಲಹಂಕ: 080-28460366 ಮೊ: 8970867862 ▪ ಬನಶಂಕರಿ: 080-26699563 ಮೊ: 9844890314 ▪ ಮೈಸೂರು: 0821-2344100 ಮೊ: 9164000116 ▪ ಹುಬ್ಬಳ್ಳಿ: 0836-2358581 ಮೊ: 9164000373 ▪ ತುಮಕೂರು: 0816-2956582 ಮೊ: 9844890315 ▪ ಮಂಗಳೂರು: 0824-2495669 ಮೊ: 9844434355 ▪ ದಾವಣಗೆರೆ: 08192-233493 ಮೊ: 9480812963 ▪ ಕಲಬುರಗಿ: 08472-250323 ಮೊ: 9164000230 ▪ ಬೆಳಗಾವಿ: 0831-2474682 ಮೊ: 9164003973 ▪ ಕೋಲಾರ: 08152-226621 ಮೊ: 7353124100 ▪ ಚಿಕ್ಕಬಳ್ಳಾಪುರ: 08156-275077 ಮೊ: 7353127100 ▪ ಶಿವಮೊಗ್ಗ: 08182-270716 ಮೊ: 6366450106 ▪ ಕೆಂಗೇರಿ: 080-2848 7228 ಮೊ: 6366946355 ▪ ಚಾಮರಾಜನಗರ : ಮೊ: 9164000116

## ಎಂಎಸ್‌ಐಎಲ್ ಟೂರ್ಸ್ & ಟ್ರಾವೆಲ್ಸ್ ಪ್ಯಾಕೇಜಸ್







| ಕ್ರಮ ಸಂಖ್ಯೆ | ಸ್ಥಳಗಳ ವಿವರ | ಪ್ರವಾಸದ ದಿನಗಳು | ಹೊರಡುವ ದಿನಾಂಕ | ಪ್ರವಾಸದ ಹಣ ಹಾಗೂ ವಿವರ (ಪ್ರತಿ ಒಬ್ಬರಿಗೆ) |
|---|---|---|---|---|
| 1 | ಕಾಶಿ–ಅಯೋಧ್ಯೆ–ಅಲಹಾಬಾದ್ | 05 ದಿನಗಳು | 24.04.2025 & 12.05.2025 | ರೂ. 44,500/– + 05% ತೆರಿಗೆ ವಿಮಾನ ಮೂಲಕ |
| 2 | ಪುರಿ–ಕೋನಾರ್ಕ್–ಭುವನೇಶ್ವರ | 05 ದಿನಗಳು | 17.05.2025 | ರೂ. 42,350/– + 05% ತೆರಿಗೆ ವಿಮಾನ ಮೂಲಕ |
| 3 | ಆಗ್ರಾ–ಮಥುರಾ–ಅಲಹಾಬಾದ್–ಸೀತಮಡಿ–ಕಾಶಿ–ಅಯೋಧ್ಯಾ–ಹರಿದ್ವಾರ–ಋಷಿಕೇಶ–ಕುರುಕ್ಷೇತ್ರ–ಅಮೃತಸರ–ಕತ್ರಾ–ದೆಹಲಿ | 18 ದಿನಗಳು | 07.05.2025 | ರೂ. 39,900/– + 05% ತೆರಿಗೆ ರೈಲಿನ ಮೂಲಕ |
| 4 | ಆಗ್ರಾ–ಮಥುರಾ–ಅಲಹಾಬಾದ್–ಸೀತಮಡಿ–ಕಾಶಿ–ಅಯೋಧ್ಯಾ–ಹರಿದ್ವಾರ–ಋಷಿಕೇಶ–ದೆಹಲಿ | 15 ದಿನಗಳು | 11.06.2025 | ರೂ. 20,000/– + 05% ತೆರಿಗೆ ರೈಲಿನ ಮೂಲಕ |
| 5 | ಥೈಲ್ಯಾಂಡ್ | 05 ದಿನಗಳು | 21.04.2025 | ರೂ. 62,500/– + 05% ತೆರಿಗೆ ವಿಮಾನ ಮೂಲಕ |
| 6 | ದುಬೈ | 06 ದಿನಗಳು | 22.05.2025 | ರೂ. 1,23,500/– + 05% ತೆರಿಗೆ ವಿಮಾನ ಮೂಲಕ |
| 7 | ಚಾರ್ ಧಾಮ್–ಕೇದಾರನಾಥ, ಬದರಿನಾಥ್, ಗಂಗೋತ್ರಿ, ಯಮುನೋತ್ರಿ (ವಿಮಾನ ಮೂಲಕ ಬೆಂಗಳೂರಿನಿಂದ ದೆಹಲಿ ಹಾಗೂ ವಾಪಸ್ಸು ಬರಲು) | 12 ದಿನಗಳು | 16.06.2025 | ರೂ. 64,500/– + 05% ತೆರಿಗೆ ವಿಮಾನ ಮೂಲಕ |
| 8 | ಆದಿ ಕೈಲಾಸ ಯಾತ್ರೆ–ಉತ್ತರಖಾಂಡ | 09 ದಿನಗಳು | 22.05.2025 | ರೂ. 1,10,000/– + ಎಲ್ಲಾ ತೆರಿಗೆ ಸೇರಿ ವಿಮಾನ ಮೂಲಕ |
| 9 | ನೇಪಾಳ ಪ್ರವಾಸ | 06 ದಿನಗಳು | 19.05.2025 | ರೂ. 69,000/– + 05% ತೆರಿಗೆ ವಿಮಾನ ಮೂಲಕ |

ನಿಮ್ಮ ಅನುಕೂಲಕ್ಕೆ ತಕ್ಕಂತೆ ದೇಶೀಯ ಮತ್ತು ವಿದೇಶ ಪ್ರವಾಸಗಳಿಗೆ ಸಂಪರ್ಕಿಸಿ: 080–45888882

MSIL ಮೈಸೂರ್ ಸೇಲ್ಸ್ ಇಂಟರ್‌ನ್ಯಾಷನಲ್ ಲಿಮಿಟೆಡ್
(ಕರ್ನಾಟಕ ಸರ್ಕಾರದ ಒಂದು ಅಧೀನ ಸಂಸ್ಥೆ)
# 36, ಕನ್ನಿಂಗ್‌ಹ್ಯಾಂ ರಸ್ತೆ, ಬೆಂಗಳೂರು–560052 ವೆಬ್‌ಸೈಟ್: www.msilonline.com
@MSILonline